ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 180 ಸಂಚಿಕೆ- 180 | PAGE-8 ಪುಟ-8 | ಶುಕ್ರವಾರ 29.08.2025 | RS.2/- ಬೆಲೆ 2/-



ಭಾಲ್ಕಿ :ತಾಲೂಕಿನ ಮಳೆ ಹಾನಿ ಹಾಗೂ ಬೆಳೆ ಹಾನಿ ಪ್ರದೇಶಗಳಿಗೆ ಜಿಲ್ಲಾ ಉಸ್ತುವಾರಿ ಸಚಿವರಾದ ಈಶ್ವರ ಖಂಡ್ರೆ ಅವರು ಭೇಟಿ ನೀಡಿ, ಸ್ಥಳೀಯರ ಸಮಸ್ಯೆಗಳನ್ನು ಆಲಿಸಿ ಪರಿಶೀಲನೆ ನಡೆಸಿದರು.

## ರಾಜ್ಯದ ಹಲವು ಭಾಗಗಳಲ್ಲಿ ಮಳೆ ಆರೆಂಜ್, ಯಲ್ಲೋ ಅಲರ್ಟ್

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.28: ರಾಜ್ಯದ ಹಲವು ಭಾಗಗಳಲ್ಲಿ ಇಂದು ಬೆಳಗ್ಗೆಯಿಂದ ಮಳೆಯಾಗುತ್ತಿದ್ದು, ಭಾರತೀಯ ಹವಾಮಾನ ಇಲಾಖೆ ವಿವಿಧ ಜಿಲ್ಲೆಗಳಿಗೆ ಆರೆಂಜ್ ಮತ್ತು ಯಲ್ಲೋ ಅಲರ್ಟ್ ಘೋಷಿಸಿದೆ. ಕೆಲವು ಜಿಲ್ಲೆಗಳಲ್ಲಿ ಮುಂಜಾಗ್ರತೆ ಕ್ರಮವಾಗಿ ಇಂದು ಶಾಲೆಗಳಿಗೆ ರಜೆ ನೀಡಲಾಗಿದೆ.

11 ರಿಂದ 20 ಸೆಂ.ಮೀ.ಗಳ ಮಳೆ ಬೀಳುವ ಮುನ್ಸೂಚನೆ ಜಿಲ್ಲೆಗಳಲ್ಲಿ ಆರೆಂಜ್ ಅಲರ್ಟ್ ನೀಡಲಾಗಿದೆ. ಇನ್ನು 6 ರಿಂದ 11 ಸೆಂ.ಮೀ.ಗಳ ನಡುವೆ ಸುರಿಯುವ ಮಳೆಗೆ ಯಲ್ಲೋ ಅಲರ್ಟ್ ನೀಡಲಾಗಿದೆ.

ಬೀದರ್ ಜಿಲ್ಲೆಯ ಔರಾದ್ ತಾಲ್ಲೂಕಿನಲ್ಲಿ ರಾತ್ರಿಯಿಡೀ ಸುರಿದ ಮಳೆಯಿಂದಾಗಿ ಭಾಲ್ಕಿ ತಾಲ್ಲೂಕಿನ ಬಾದಲ್‌ಗಾಂವ್–ಚೊಂಡಿಮುಖೇಡ್‌ನಲ್ಲಿರುವ ದಾಡಗಿ ಸೇತುವೆ ಸೇರಿದಂತೆ ಹಲವಾರು ಸೇತುವೆಗಳ ಮೇಲೆ ನೀರು ಉಕ್ಕಿ ಹರಿದು ಸಂಚಾರ ಸಂಪೂರ್ಣ ಸ್ಥಗಿತಗೊಂಡಿದೆ.

ಔರಾದ್ ತಾಲ್ಲೂಕಿನ ನಾರಾಯಣಪುರ ಗ್ರಾಮದಲ್ಲಿ ಹೊಳೆ ಉಕ್ಕಿ ಹರಿಯುತ್ತಿದೆ. ಬೀದರ್ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಸುರಕ್ಷತಾ ಕ್ರಮವಾಗಿ ಪೀಡಿತ ಪ್ರದೇಶಗಳಲ್ಲಿನ ಶಾಲೆಗಳು ಮತ್ತು ಕಾಲೇಜುಗಳಿಗೆ ರಜೆ ಘೋಷಿಸಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ರಜೆ

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ, ಭಾರತ ಹವಾಮಾನ ಇಲಾಖೆಯು ಆರೆಂಜ್ ಅಲರ್ಟ್ ಹೊರಡಿಸಿ ಭಾರೀ ಮಳೆಯಾಗುವ ಮುನ್ಸೂಚನೆ ನೀಡಿರುವುದರಿಂದ, ಜಿಲ್ಲಾಡಳಿತವು ಇಂದು ಮಂಗಳೂರು, ಪುತ್ತೂರು, ಮೂಲ್ಕಿ, ಮೂಡಬಿದ್ರಿ, ಉಳ್ಳಾಲ ಮತ್ತು ಬಂಟ್ವಾಳ ತಾಲ್ಲೂಕುಗಳಲ್ಲಿನ ಎಲ್ಲಾ ಅಂಗನವಾಡಿ ಕೇಂದ್ರಗಳು, ಪ್ರಾಥಮಿಕ ಮತ್ತು ಪ್ರೌಢಶಾಲೆಗಳು, ಸರ್ಕಾರಿ ಅನುದಾನಿತ ಮತ್ತು ಖಾಸಗಿ ಸಂಸ್ಥೆಗಳು ಮತ್ತು ಪದವಿ ಪೂರ್ವ ಕಾಲೇಜುಗಳಿಗೆ ರಜೆ ಘೋಷಿಸಿದೆ.

ತಗ್ಗು ಪ್ರದೇಶಗಳು, ಕೆರೆ, ಸಮುದ್ರ ತೀರಗಳು ಮತ್ತು ನದಿ ತೀರಗಳಿಗೆ ಮಕ್ಕಳು ಹೋಗದಂತೆ ನೋಡಿಕೊಳ್ಳುವಂತೆ ಪೋಷಕರಿಗೆ ಎಚ್ಚರಿಕೆ ನೀಡಲಾಗಿದೆ. ಮೀನುಗಾರರು ಸಮುದ್ರಕ್ಕೆ ಇಳಿಯದಂತೆ ಎಚ್ಚರಿಕೆ ನೀಡಲಾಗಿದೆ. ತಾಲ್ಲೂಕು ಮಟ್ಟದ ಅಧಿಕಾರಿಗಳಿಗೆ ಪ್ರಧಾನ ಕಚೇರಿಯಲ್ಲಿರಲು ಸೂಚಿಸಲಾಗಿದೆ.

ನೋಡಲ್ ಅಧಿಕಾರಿಗಳು ಜಾಗರೂಕರಾಗಿರಲು ಮತ್ತು ಸಾರ್ವಜನಿಕ ದೂರುಗಳಿಗೆ ಸ್ಪಂದಿಸಲು ಸೂಚಿಸಲಾಗಿದೆ.



ಬೆಂಗಳೂರಿನಲ್ಲಿಯೂ ಮಳೆ

ಬೆಂಗಳೂರಿನ ಹವಾಮಾನ ಕೇಂದ್ರವು ಮುಂದಿನ ಮೂರು ಗಂಟೆಗಳಲ್ಲಿ ಮಿಂಚು ಮತ್ತು ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಗಾಳಿ ಬೀಸುವ ಜೊತೆಗೆ ಹಗುರದಿಂದ ಮಧ್ಯಮ ಪ್ರಮಾಣದಲ್ಲಿ ಮಳೆ ಅಥವಾ ಗುಡುಗು ಸಹಿತ ಮಳೆಯಾಗುವ ಮುನ್ಸೂಚನೆ ನೀಡಿದೆ.

ದಕ್ಷಿಣ ಕನ್ನಡ, ಉಡುಪಿ, ವಿಜಯಪುರ, ಬಾಗಲಕೋಟೆ, ಕಲಬುರಗಿ ಮತ್ತು ಬೀದರ್ ಜಿಲ್ಲೆಗಳಿಗೆ ಯಲ್ಲೋ ಅಲರ್ಟ್ ಎಚ್ಚರಿಕೆ ನೀಡಲಾಗಿದೆ.

ಸಾರ್ವಜನಿಕರು ಸುರಕ್ಷತೆ ಕ್ರಮವಾಗಿ ಸಾಧ್ಯವಾದಷ್ಟು ಮನೆಯೊಳಗೆ ಇರಲು, ಬಾಗಿಲು ಮತ್ತು ಕಿಟಕಿಗಳನ್ನು ಮುಚ್ಚಲು, ಅನಗತ್ಯ ಪ್ರಯಾಣವನ್ನು ತಪ್ಪಿಸಲು, ವಿದ್ಯುತ್ ಉಪಕರಣಗಳನ್ನು ಅನ್‌ಪ್ಲಗ್ ಮಾಡಲು, ಮರಗಳು ಅಥವಾ ಜಲಮೂಲಗಳಿಂದ ದೂರವಿರಲು ಮತ್ತು ಎಚ್ಚರಿಕೆಯಿಂದ ವಾಹನ ಚಲಾಯಿಸಲು ಸೂಚಿಸಲಾಗಿದೆ.

ನಿನ್ನೆ ಬೆಳಗ್ಗೆ ಬೆಳಿಗ್ಗೆ 8.30 ರಿಂದ

(2ನೇ ಪುಟ ನೋಡಿ)

## 'ಗೃಹಲಕ್ಷ್ಮೀ' ಹಣಕ್ಕೂ ಕನ್ನ ಹಾಕಿದ ಕಳ್ಳರು

### ಬೇವೂರಿನಲ್ಲಿ ಸರಣಿ ಕಳ್ಳತನ: ಬಂಗಾರ, ಬೆಳ್ಳಿ ಆಭರಣ ಕಳವು



ಮಲ್ಲಮ್ಮ ನುಡಿ ವಾರ್ತೆ ಬಾಗಲಕೋಟೆ,ಆ.28–ತಾಲೂಕಿನ ಬೇವೂರ ಗ್ರಾಮದಲ್ಲಿ ಬುಧವಾರ ರಾತ್ರಿ ಸರಣಿ ಮನೆಗಳ್ಳತನ ನಡೆದಿದ್ದು, ಅಕ್ಕಸಾಲಿಗನ ಮನೆ ಸೇರಿ ಎರಡು ಮನೆಗಳಲ್ಲಿನ ಅಂದಾಜು 160 ಗ್ರಾಂ ಬಂಗಾರ, ಬೆಳ್ಳಿ ಸಾಮಾನು ಹಾಗೂ ನಗದು ಹಣವನ್ನು ಕಳ್ಳರು

(2ನೇ ಪುಟ ನೋಡಿ)

## ಮಳೆ ಹಾನಿ ಪ್ರದೇಶಗಳಿಗೆ ಭೇಟಿ , ಸ್ಥಳ ವೀಕ್ಷಣೆ ಮಾಡಿದ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ



ಮಲ್ಲಮ್ಮ ನುಡಿ ವಾರ್ತೆ ಬೀದರ ಆ 28 :ಜಿಲ್ಲೆಯಲ್ಲಿ ಸತತವಾಗಿ ಸುರಿಯುತ್ತಿರುವ ಮಳೆಯಿಂದಾಗಿ ಹಾನಿಯಾದ ಪ್ರದೇಶಗಳಿಗೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಭೇಟಿ ನೀಡಿ, ಸ್ಥಳ ವೀಕ್ಷಣೆ ಮಾಡಿದರು.

ಹುಮನಾಬಾದ ತಾಲೂಕಿನ ಹಳ್ಳಿಖೇಡ ಬಿ, ಸಿಂದಬಂದಗಿ , ಭಾಲ್ಕಿ ತಾಲೂಕಿನ ಗೋಧಿ ಹಿಪ್ಪರಗಾ, ಕಾರಂಜಾ ಜಲಾಶಯಗಳಿಗೆ ಭೇಟಿ ನೀಡಿ ಪರಿಸ್ಥಿತಿ ವೀಕ್ಷಿಸಿದರು. ಕಾರಂಜಾ ಜಲಾಶಯದ ನೀರಿನ ಮಟ್ಟ ವೀಕ್ಷಣೆ ಮತ್ತು ಸಿಂದಬಂದಗಿ ಗ್ರಾಮದ ಪ್ರಾಥಮಿಕ ಶಾಲೆಗೆ ನೀರು ನುಗ್ಗಿರುವುದರಿಂದ ಭೇಟಿ ನೀಡಿ, ತಕ್ಷಣ ನೀರು ಹೊರ ಹಾಕಲು ವ್ಯವಸ್ಥೆ ಮಾಡುವಂತೆ ಗ್ರಾಮದ ಪಿಡಿಓ ಗೆ ಸೂಚಿಸಿದರು.

ಹಳ್ಳಿಖೇಡ ಬಿ ಆರೋಗ್ಯ ಕೇಂದ್ರಕ್ಕೆ ಭೇಟಿ ನೀಡಿ, ತುರ್ತು ಚಿಕಿತ್ಸಾ ಘಟಕ ಮತ್ತು ಅಲ್ಲಿನ ವ್ಯವಸ್ಥೆ ಪರಿಶೀಲಿಸಿದರು. ಗೋಧಿ ಹಿಪ್ಪರಗಾ ಗ್ರಾಮದ ಹೊಲಗಳಲ್ಲಿ ನೀರು ನಿಂತು ಬೆಳೆ ಹಾನಿ ಪ್ರದೇಶಗಳನ್ನು ವೀಕ್ಷಿಸಿದರು.

ಸಾರ್ವಜನಿಕರು ಎಚ್ಚರಿಕೆಯಿಂದ ಇರಬೇಕು., ಹಳ್ಳ, ಕೆರೆಗಳನ್ನು ದಾಟ–ದಂತೆ ಹಾಗೂ ಜಾನುವಾರುಗಳನ್ನು ಹಳ್ಳದ ತಟಕ್ಕೆ ಬಿಡದಂತೆ ಗ್ರಾಮಸ್ಥರಿಗೆ ತಿಳಿಸಿದರು.

## ಬಿಜೆಪಿ-ಆರ್‌ಎಸ್‌ಎಸ್ ನಡುವೆ ಕೆಲ ಭಿನ್ನಾಭಿಪ್ರಾಯ ಇರಬಹುದು, ಸಂಘರ್ಷವಿಲ್ಲ: ಮೋಹನ್ ಭಾಗವತ್




ಮಲ್ಲಮ್ಮ ನುಡಿ ವಾರ್ತೆ ನವದೆಹಲಿ:ಅ.28: ಬಿಜೆಪಿ ಮತ್ತು ಆರ್‌ಎಸ್‌ಎಸ್ ನಡುವೆ ಕೆಲವು ಭಿನ್ನಾಭಿಪ್ರಾಯ ಇರಬಹುದು, ಆದ್ರೆ ಎಲ್ಲಿಯೂ ಸಂಘರ್ಷವಿಲ್ಲ, ದ್ವೇಷವೂ ಇಲ್ಲ. ನಮ್ಮಲ್ಲಿ ಪರಸ್ಪರ ನಂಬಿಕೆ ಇದೆ ಎಂದು ಆರ್‌ಎಸ್‌ಎಸ್ ಮುಖ್ಯಸ್ಥ ಮೋಹನ್ ಭಾಗವತ್ ಹೇಳಿದ್ದಾರೆ.

ಆರ್‌ಎಸ್‌ಎಸ್‌ಗೆ 100 ವರ್ಷಗಳ ಶತಮಾನೋತ್ಸವ ಹಿನ್ನೆಲೆ ಸುದ್ದಿಗೋಷ್ಠಿ ನಡೆಸಿ ಮಾತನಾಡಿದ ಅವರು, 2024ರ ಲೋಕಸಭೆ ಚುನಾವಣೆಯಲ್ಲಿ ಆರ್‌ಎಸ್‌ಎಸ್ ಸಹಕಾರದ ಕೊರತೆಯಿಂದ ಬಿಜೆಪಿ ಬಹುಮತದಿಂದ ದೂರ ಉಳಿಯಿತೇ ಎನ್ನುವ ಪ್ರಶ್ನೆಗೆ ಅವರು ಉತ್ತರಿಸಿದರು.

ಇನ್ನೂ ಬಿಜೆಪಿ ರಾಷ್ಟ್ರೀಯ ಅಧ್ಯಕ್ಷರ ಆಯ್ಕೆ ಬಗ್ಗೆ ಮಾತನಾಡಿ, ಬಿಜೆಪಿ ಸರ್ಕಾರದಲ್ಲಿ ಆರ್‌ಎಸ್‌ಎಸ್ ಎಲ್ಲವನ್ನೂ ನಿರ್ಧರಿಸುತ್ತದೆ ಅನ್ನೋದು ತಪ್ಪು. ಎಲ್ಲವನ್ನೂ ನಿಯಂತ್ರಿಸಲು ಸಾಧ್ಯವಿಲ್ಲ. ಆದ್ರೆ ನಾವು ಪರಸ್ಪರ ಸಲಹೆಗಳನ್ನಷ್ಟೇ ನೀಡಬಹುದು ಎಂದು ಹೇಳಿದರು.


ಸರ್ಕಾರದೊಂದಿಗೆ ಸಂಘದ ಸಮನ್ವಯದ ಬಗ್ಗೆ ಮಾತನಾಡುತ್ತಾ, ಪ್ರಸ್ತುತ ಸರ್ಕಾರ ಮಾತ್ರವಲ್ಲ, ಪ್ರತಿಯೊಂದು ಸರ್ಕಾರದೊಂದಿಗೆ ನಮಗೆ ಉತ್ತಮ ಸಮನ್ವಯವಿದೆ ಎಲ್ಲಿಯೂ ಯಾವುದೇ ಜಗಳವಿಲ್ಲ ಎಂದರು. ಸಂಘವು ಬಿಜೆಪಿ ಹೊರತುಪಡಿಸಿ ಬೇರೆ ರಾಜಕೀಯ ಪಕ್ಷಗಳನ್ನು ಏಕೆ ಬೆಂಬಲಿಸುವುದಿಲ್ಲವೇ? ಎಂಬ ಪ್ರಶ್ನೆಗೆ ಉತ್ತರಿಸಿ, ಒಳ್ಳೆಯ ಕೆಲಸಕ್ಕಾಗಿ

(2ನೇ ಪುಟ ನೋಡಿ)

## ಅಪಾಯ ಮಟ್ಟ ಮೀರಿದ ಯರಗೋಳ ಕೆರೆ ಸೇತುವೆ ದಾಟುತ್ತಿದ್ದ ಹಸು ನೀರುಪಾಲು

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ:ಅ.28: ಧಾರಾಕಾರ ಮಳೆಯಾದ ಹಿನ್ನೆಲೆ ಜಿಲ್ಲೆಯ ಯರಗೋಳ ತಾಲೂಕಿನಲ್ಲಿರುವ ಕೆರೆಯೊಂದು ಅಪಾಯ ಮಟ್ಟ ಮೀರಿ ಹರಿಯುತ್ತಿದ್ದು, ಈ ವೇಳೆ ಸೇತುವೆ ದಾಟುತ್ತಿದ್ದ ಹಸುವೊಂದು ಕಾಲು ಜಾರಿ ಬಿದ್ದು ನೀರಿನಲ್ಲಿ ಕೊಚ್ಚಿ ಹೋಗಿದೆ. ಈಜಿಕೊಂಡು ದಡ ಸೇರಲು ಹರಸಾಹಸಪಡುತ್ತಿದ್ದ ಹಸುವನ್ನು ನೋಡಿದ ಗ್ರಾಮಸ್ಥರು ರಕ್ಷಣೆ ಮಾಡಿದ್ದಾರೆ.

ಇನ್ನೂ ಮಳೆ ಪ್ರಮಾಣ ಹೆಚ್ಚಾದ ಹಿನ್ನೆಲೆ ಯರಗೋಳ ಗ್ರಾಮದಲ್ಲಿನ 10ಕ್ಕೂ ಹೆಚ್ಚು ಮನೆಗಳು ಜಲಾವೃತಗೊಂಡಿವೆ.



## ಬಾಲಕಿಗೆ ಗಂಡು ಮಗು: ಪೋಕ್ಸೋ -ಬಾಲ ನ್ಯಾಯ ಕಾಯಿದೆಯಡಿ ನಾಲ್ವರ ಮೇಲೆ ಪ್ರಕರಣ ದಾಖಲು

ಮಲ್ಲಮ್ಮ ನುಡಿ ವಾರ್ತೆ ಯಾದಗಿರಿ : ಆ 28 : 2025ರ ಆಗಸ್ಟ್ 27 ರಂದು ಶಹಾಪೂರ ನಗರದ ಡಾ.ಬಿ.ಆರ್.ಅಂಬೇಡ್ಕರ್ ಬಾಲಕಿಯರ ವಸತಿ ಶಾಲೆ (ಎಸ್.ಸಿ–813) ಇಲ್ಲಿ 9ನೇ ತರಗತಿಯಲ್ಲಿ ಶಿಕ್ಷಣ ಪಡೆಯುತ್ತಿರುವ ಬಾಲಕಿಗೆ ಗಂಡು ಮಗು ಜನನವಾದ ಪ್ರಕರಣಕ್ಕೆ ಸಂಬಂಧಿಸಿದಂತೆ, ವಸತಿ ನಿಲಯದ ಪ್ರಾಚಾರ್ಯರು, ವಾರ್ಡನ್, ಒಬ್ಬರು ತರಗತಿ ಶಿಕ್ಷಕರು, ದೈಹಿಕ ಶಿಕ್ಷಕರು ಒಟ್ಟು 4 ಜನರನ್ನು ಅಮಾನತ್ತು ಮಾಡಲಾಗಿದ್ದು, ಈ ಪ್ರಕರಣಕ್ಕೆ ಸಂಬಂಧಿಸಿದಂತೆ 4 ಜನರ ಮೇಲೆ ಬಿ.ಎನ್.ಎಸ್ ಕಾಯ್ದೆ ಕಲಂ 64, ಪೋಕ್ಸೋ ಕಾಯ್ದೆ ಕಲಂ 4,6,19, ಹಾಗೂ ಬಾಲ

(2ನೇ ಪುಟ ನೋಡಿ)

## ಕಮಲನಗರ:ಧಾರಾಕಾರ ಮಳೆಗೆ ಸೇತುವೆ ಬಂದ್



ಮಲ್ಲಮ್ಮ ನುಡಿ ವಾರ್ತೆ ಕಮಲನಗರ:ಅ.28:ಧಾರಾಕಾರ ಮಳೆಗೆ ಕಮಲನಗರ –ಸೋನಾಳ, ಕಮಲನಗರ–ಔರಾದ, ಸಂಗಮ–ಠಾಣಾ ಕುಶನೂರು ಸೇರಿದಂತೆ ಹಲವಡೆ ಸೇತುವೆ ಬಂದ್ ಸ್ಥಳಕ್ಕೆ ತಹಸಿಲ್ದಾರ ಅಮಿತ ಕುಮಾರ ಕುಲಕರ್ಣಿ ಭೇಟಿ ನೀಡಿ ಪರಿಶೀಲನೆ ಮಾಡಿದರು.

ತಾಲೂಕಿನಲ್ಲಿ ಎರಡೂ ದಿನದಿನ ಸುರಿಯುತ್ತಿರುವ ಅತಿವೃಷ್ಟಿ ಮಳೆಗೆ, ರೈತ ಬೆಳೆ ಕೈಗೆ ಬಂದು ಬಾಯಿಗೆ ಬರದಂತೆ ಆಗಿದೆ, ಹಚ್ಚ ಹಸಿರು ಸಮೃದ್ಧವಾಗಿ ಬೆಳೆದ ಬೆಳೆ ವರುಣ ದೇವನ ಅವಕೃಪೆಯಿಂದ ಹೊಲಗಳು ಹಳ್ಳದಂತೆ ನೀರು ಪಾಲಾಗಿವೆ.

ನಂದಿ ಬಿಜಾಲಗಾಂವ ಗ್ರಾಮದಲ್ಲಿ ಪ್ರವಾಹ ಸೃಷ್ಟಿಯಾಗಿದು ಕೆರೆಯ ನೀರು ಗ್ರಾಮಕ್ಕೆ ನುಗ್ಗಿ ಬರುತ್ತಿವೆ ಇದೆ ತರಹ ಮಳೆ ಮುಂದು ವರೆದರೆ ಅಪಾಯ ಕಟ್ಟಿಇಟ್ಟ ಪುಟ್ಟಿ ಎಂತೆ ತೋರುತ್ತಿದೆ. ಖತಗಾಂವನ ಪ್ರಮೋದ ಧರಣೆ ಅವರು ಮನೆ ಗೋಡೆ ಸೇರಿದಂತೆ ಹಲವಡೆ, ಮನೆ ಹಾನಿ ಆಗಿ ಜನ ಕಂಗಾಲಾಗಿದ್ದಾರೆ.

ಮಳೆಯ ತಿವ್ರತೆ ನೋಡಿ ಕಮಲನಗರ ಮತ್ತು ಔರಾದ ತಹಸೀಲ್ದಾರ ಮುಂಜಾಗ್ರತ ಕ್ರಮವಾಗಿ ಗುರುವಾರ ಶಾಲಾ ಕಾಲೇಜು ರಜೆ ಘೋಷಣೆ ಮಾಡಿದರು. ಬಸ್ಸು ಸಂಚಾರ ಸ್ಥಗಿತ ಗೊಂಡಿದು ಜನ ಜೀವನ ಸಂಪೂರ್ಣ ಅಸ್ವಸ್ಥಗೊಂಡಿದೆ.

## ಭೀಕರ ಅಪಘಾತ ಮಗು ಸೇರಿ ಆರು ಸಾವು

ಮಂಗಳೂರು:ಅ.28:ಕಾಸರಗೋಡಿನಿಂದ ಮಂಗಳೂರಿಗೆ ಹೋಗುತ್ತಿದ್ದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯ ಬಸ್ ಗುರುವಾರ ಬ್ರೇಕ್ ಫೇಲ್ ಆಗಿ ರಸ್ತೆ ಬದಿ ನಿಂತಿದ್ದ ವ್ಯಕ್ತಿಗಳಿಗೆ ಮತ್ತು ಆಟೋಗೆ ಡಿಕ್ಕಿ ಹೊಡೆದಿದ್ದು, ಭೀಕರ ಅಪಘಾತದಲ್ಲಿ ಮಗು ಸೇರಿ ಆರು ಜನ ಮೃತಪಟ್ಟಿದ್ದಾರೆ.

ಇಂದು ಮಧ್ಯಾಹ್ನ 1.30 ರ ಸುಮಾರಿಗೆ ಈ ಅಪಘಾತ ಸಂಭವಿಸಿದ್ದು, ಬ್ರೇಕ್ ಫೇಲ್ ಆಗಿದ್ದರಿಂದ ಬಸ್, ಚಾಲಕನ ನಿಯಂತ್ರಣ ತಪ್ಪಿ, ಹಿಂದಕ್ಕೆ ಬಂದು ಬಸ್ ನಿಲ್ದಾಣದಲ್ಲಿ ನಿಂತಿ–ದ್ದ ವ್ಯಕ್ತಿಗಳಿಗೆ ಹಾಗೂ ಆಟೋಗೆ ಡಿಕ್ಕಿ ಹೊಡೆದಿದೆ. ಬಸ್ ನಿಲ್ದಾಣದಲ್ಲಿ ಬಸ್ ಗಾಗಿ ಕಾಯುತ್ತಿದ್ದ ನಾಲ್ವರು ಸ್ಥಳದಲ್ಲೇ ಸಾವನ್ನಪ್ಪಿದ್ದು, ಮೂವರು ಮಹಿಳೆಯರು, ಇಬ್ಬರು ಪುರುಷರು ಹಾಗೂ ಮಗು ಸೇರಿದಂತೆ ಆರು ಜನ ಸಾವನ್ನಪ್ಪಿದ್ದಾರೆ. ಇದಲ್ಲದೆ, ಏಳು ಜನರು ಗಂಭೀರವಾಗಿ ಗಾಯಗೊಂಡಿದ್ದು, ಅವರನ್ನು ಚಿಕಿತ್ಸೆಗಾಗಿ ಹತ್ತಿರದ ಆಸ್ಪತ್ರೆಗೆ ದಾಖಲಿಸಲಾಗಿದೆ. ಕೇರಳದ ಮಂಜೇಶ್ವರ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಪ್ರಕರಣ ನಡೆದಿದೆ.

## ಡಿಕೆಶಿ ಕ್ಷಮೆ ಕೇಳಿದ್ದರಿಂದ ಎಲ್ಲವೂ ಮುಗಿದಿದೆ; ಮಲ್ಲಿಕಾರ್ಜುನ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ಬೆಂಗಳೂರು:ಅ.28: ಕೆಪಿಸಿಸಿ ಅಧ್ಯಕ್ಷ ಹಾಗೂ ಉಪ ಮುಖ್ಯಮಂತ್ರಿ ಡಿಕೆ.ಶಿವಕುಮಾರ್ ಅವರು ರಾಷ್ಟ್ರೀಯ ಸ್ವಯಂ ಸೇವಕ ಸಂಘದ ಗೀತೆ ಹಾಡಿದ್ದು ತಪ್ಪು. ಆದರೆ, ಕ್ಷಮೆ ಕೇಳಿರುವುದರಿಂದ ಎಲ್ಲವೂ

(2ನೇ ಪುಟ ನೋಡಿ)

## ಭಾರಿ ಮಳೆ: ಸಂಕಷ್ಟದಲ್ಲಿ ರೈತರು

### ಜನ ಎಚ್ಚರಿಕೆಯಿಂದ ಇರಿ : ಮಾಜಿ ಸಚಿವ ಪಾಟೀಲ

ಹುಮನಾಬಾದ್, ಆ 28 :ಜಿಲ್ಲೆಯ ಹುಮನಾಬಾದ್ ವಿಧಾನಸಭಾ ಕ್ಷೇತ್ರದಲ್ಲಿ ಕಳೆದ ಕೆಲವು ದಿನಗಳಿಂದ ಸುರಿಯುತ್ತಿರುವ ಅತಿವೃಷ್ಟಿಯಿಂದ ರೈತರು ತೀವ್ರ ಸಂಕಷ್ಟಕ್ಕೆ ಒಳಗಾಗಿದ್ದಾರೆ. ಭಾರೀ ಮಳೆಯಿಂದಾಗಿ ಬೆಳೆ ನಾಶವಾಗಿದೆ, ಗದ್ದೆಗಳಲ್ಲಿ ನೀರು ನಿಂತು ಹಾನಿ ಉಂಟಾಗಿದೆ. ಈ ಹಿನ್ನೆಲೆಯಲ್ಲಿ ಮಾಜಿ ಸಚಿವ ರಾಜಶೇಖರ ಪಾಟೀಲ ಅವರು ಅಧಿಕಾರಿಗಳಿಗೆ ಕರೆ ನೀಡಿದ್ದು, ತಕ್ಷಣ ರೈತರ ನೆರವಿಗೆ ಧಾವಿಸುವಂತೆ ಆಗ್ರಹಿಸಿದ್ದಾರೆ. "ಮಳೆ ರೈತರಿಗೆ ಆಶೀರ್ವಾದವಾಗಬೇಕಿತ್ತು ಈಗ ಶಾಪವಾಗುತ್ತಿದೆ. ಅಧಿಕಾರಿಗಳು ಗ್ರಾಮಾಂತರ ಪ್ರದೇಶಗಳಿಗೆ ಭೇಟಿ ನೀಡಿ ಹಾನಿಯ ಅಂದಾಜು ಮಾಡಿ ಪರಿಹಾರ ಕಾರ್ಯ ಪ್ರಾರಂಭಿಸಬೇಕು," ಎಂದು ಅವರು ಸೂಚಿಸಿದ್ದಾರೆ. ಪಾಟೀಲ್‌ರು ಸಾರ್ವಜನಿಕರಲ್ಲಿ ಮನವಿ ಮಾಡಿ, "ನದಿ–ನಾಲೆ, ಕೆರೆ–ಕೊಳಗಳ ಹತ್ತಿರ ಹೋಗದೇ ಎಚ್ಚರಿಕೆಯಿಂದ ಇರಬೇಕು. ತಮ್ಮ ಮನೆ, ಬೆಳೆ, ಜೀವಿತ ರಕ್ಷಣೆಗಾಗಿ ಅಗತ್ಯ ಮುಂಜಾಗ್ರತಾ ಕ್ರಮ ಕೈಗೊಳ್ಳಬೇಕು," ಎಂದು ಕರೆ ನೀಡಿದ್ದಾರೆ. ಹುಮನಾಬಾದ್ ತಾಲ್ಲೂಕಿನ ಹಲವೆಡೆ ನೀರು ಹರಿದು ರಸ್ತೆಗಳು ಹಾಳಾಗಿದ್ದು, ಸಂಚಾರಕ್ಕೂ ಅಡಚಣೆ ಉಂಟಾಗಿದೆ. ಪ್ರದೇಶದ ಆಡಳಿತದ ಅಧಿಕಾರಿಗಳು ಪರಿಸ್ಥಿತಿಯನ್ನು ಸಮರ್ಥವಾಗಿ ನಿರ್ವಹಿಸಲು ತಕ್ಷಣ ಕ್ರಮ ಕೈಗೊಳ್ಳಬೇಕು ಎಂಬುದು ಜನರ ಅಭಿಪ್ರಾಯವಾಗಿದೆ ಎಂದರು.



## 14 ಸ್ವಯಂ ಪ್ರೇರಿತ ದೂರು ದಾಖಲಿಸಿದ ಉಪ ಲೋಕಾಯುಕ್ತ ಬಿ ವೀರಪ್ಪ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು ಆ 28 : ರಾಯಚೂರು ಪ್ರವಾಸದಲ್ಲಿರುವ ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ ವೀರಪ್ಪ ಅವರು ಆಗಸ್ಟ್ 28ರಂದು ಕೈಗೊಂಡ ಅನಿರೀಕ್ಷಿತ ಭೇಟಿ ವೇಳೆ ಒಟ್ಟು 14 ಸ್ವಯಂ ಪ್ರೇರಿತ ದೂರುಗಳನ್ನು

(2ನೇ ಪುಟ ನೋಡಿ)

## ಒಂದನೇ ಪುಟದಿಂದ

### ಬೇವೂರಿನಲ್ಲಿ ಸರಣಿ ಕಳ್ಳತನ: ಬಂಗಾರ, ಬೆಳ್ಳಿ ಆಭರಣ ಕಳವು

ದೋಚಿದ್ದಾರೆ. ಬೋಡನಾಯಕದಿನ್ನಿ ರಸ್ತೆಯಲ್ಲಿ ಅಜ್ಜನ ಕಟ್ಟೆಗೆ ಹೋಗುವ ಮಾರ್ಗದಲ್ಲಿರುವ ಜನತಾ ಪ್ಲಾಟನಲ್ಲಿ ಈ ಸರಣಿ ಕಳ್ಳತನ ನಡೆದಿದ್ದು, ಅಕ್ಕಸಾಲಿಗ ಸುರೇಶ ವೇರ್ಣೇಕರ ಗಣೇಶ ಹಬ್ಬದ ಪ್ರಯುಕ್ತ ಮನೆಗೆ ಬೀಗ ಹಾಕಿ ಪಕ್ಕದ ಊರಿಗೆ ತೆರಳಿದ್ದು, ಅವರ ಮನೆಯಲ್ಲಿದ್ದ ಅಂದಾಜು 80 ಗ್ರಾಂ ಬಂಗಾರ ಹಾಗೂ ಬೆಳ್ಳಿ ಸಾಮಾನುಗಳನ್ನು ದೋಚಿರುವ ಕಳ್ಳರು, ವಿಠ್ಠಲ ಭರಮಪ್ಪ ಹೊದ್ಲೂರ ಅವರ ಮನೆ ಬಾಗಿಲು ಮುರಿದು ಅಲ್ಲಿಯೂ 80 ಗ್ರಾಂ ಬಂಗಾರ ಹಾಗೂ ಬೆಳ್ಳಿ ಸಾಮಾನು ಮತ್ತು ಮನೆಯ ಯಜಮಾನಿ ಭರಮವ್ವ ತರಕಾರಿ ಮಾರಿ ಬಂದ ಹಣ ಮತ್ತು ಗೃಹಲಕ್ಷ್ಮೀ ಹಣ ಕೂಡಿಟ್ಟ ಹುಂಡಿಯನ್ನು ಕದ್ದಿದ್ದಾರೆ.

ಇದೇ ಓಣಿಯಲ್ಲಿನ ಗ್ಯಾನಪ್ಪ ಪೂಜಾರಿ, ಬೋರವ್ವ ಭಜಂತ್ರಿ, ಯಲ್ಲವ್ವ ಪಾತ್ರೋಟಿ ಹಾಗೂ ಮಹಿಬೂ ಗುರಗುನ್ನಿ ಎಂಬವರ ಮನೆಗಳ ಬೀಗ ಮುರಿದಿರುವ ಕಳ್ಳರು ಮನೆಯೊಳಗೆ ಜಾಲಾಡಿದ್ದಾರಾದರೂ ಯಾವುದೇ ವಸ್ತುಗಳನ್ನು ಕದ್ದಿಲ್ಲ ಎಂದು ಹೇಳಲಾಗಿದೆ.

ಈ ಕುರಿತು ಬಾಗಲಕೋಟೆ ಗ್ರಾಮೀಣ ಪೋಲೀಸ್ ಠಾಣೆಯಲ್ಲಿ ಸುರೇಶ ವೇರ್ಣೇಕರ ಹಾಗೂ ವಿಠ್ಠಲ ಹೊದ್ಲೂರ ದೂರು ನೀಡಿದ್ದು, ಪ್ರಕರಣ ದಾಖಲಾಗಿದೆ. ಪಿಎಸ್ಐ ಗಿರೀಶ ಸ್ಥಳಕ್ಕೆ ಭೇಟಿ ನೀಡಿ ಪರಿಶೀಲನೆ ನಡೆಸಿದರು.

### ಆರೆಂಜ್, ಯಲ್ಲೋ ಅಲರ್ಟ್

5.30 ರವರೆಗೆ ದಾಖಲಾಗಿರುವ ಮಳೆಯ ದತ್ತಾಂಶವೆಂದರೆ ಮಂಗಳೂರು ವಿಮಾನ ನಿಲ್ದಾಣದಲ್ಲಿ 106.6 ಮಿ.ಮೀ, ಗದಗದಲ್ಲಿ 70.1 ಮಿ.ಮೀ, ಬೆಂಗಳೂರು ಎಚ್‌ಎಎಲ್ 28.2 ಮಿ.ಮೀ, ಚಿತ್ರದುರ್ಗದಲ್ಲಿ 14.8 ಮಿ.ಮೀ, ಕಲಬುರಗಿಯಲ್ಲಿ 10.4 ಮಿ.ಮೀ ಮತ್ತು ಬೆಂಗಳೂರು ನಗರದಲ್ಲಿ 4.9 ಮಿ.ಮೀ. ಮಳೆಯಾಗಿದೆ. ಹೊನ್ನಾವರದಲ್ಲಿ 87.7 ಮಿ.ಮೀ, ಕಾರವಾರದಲ್ಲಿ 55.4 ಮಿ.ಮೀ, ಬೀದರ್‌ನಲ್ಲಿ 26.2 ಮಿ.ಮೀ ಮತ್ತು ಶಕ್ತಿನಗರದಲ್ಲಿ 11.3 ಮಿ.ಮೀ. ಮಳೆಯಾಗಿದೆ.

ಆಗುಂಬೆಯಲ್ಲಿ 108.5 ಮಿ.ಮೀ, ವಿಜಯಪುರದ ತಿಡಗುಂಡಿಯಲ್ಲಿ 46.5 ಮಿ.ಮೀ ಮತ್ತು ಮಂಗಳೂರಿನಲ್ಲಿ 33 ಮಿ.ಮೀ. ಮಳೆಯಾಗಿದೆ ಎಂದು ವರದಿ ಮಾಡಿದೆ.

ಕರ್ನಾಟಕ ರಾಜ್ಯ ನೈಸರ್ಗಿಕ ವಿಕೋಪ ಮೇಲ್ವಿಚಾರಣಾ ಕೇಂದ್ರ ವರದಿಗಳು ಕರಾವಳಿ ಕರ್ನಾಟಕದಲ್ಲಿ ಅತಿ ಹೆಚ್ಚು ಮಳೆಯಾಗಿರುವುದನ್ನು ತೋರಿಸುತ್ತದೆ. ಮುಂದಿನ ಕೆಲವು ಗಂಟೆಗಳಲ್ಲಿ ಕರ್ನಾಟಕದಾದ್ಯಂತ ಗುಡುಗು, ಮಿಂಚು ಮತ್ತು ಗಂಟೆಗೆ 30 ರಿಂದ 40 ಕಿ.ಮೀ ವೇಗದಲ್ಲಿ ಗಾಳಿಯೊಂದಿಗೆ ಮಧ್ಯಮ ಪ್ರಮಾಣದಲ್ಲಿ ಮಳೆ ಮುಂದುವರಿಯಬಹುದು ಎಂದು ಹವಾಮಾನ ಇಲಾಖೆ ಹೇಳಿದೆ.

### ಕಾಯಿದೆಯಡಿ ನಾಲ್ವರ ಮೇಲೆ ಪ್ರಕರಣ ದಾಖಲು

ನ್ಯಾಯ ಕಾಯ್ದೆ– 2015ರ ಕಲಂ 33, 34 ರಡಿ ಶಹಾಪೂರ ಪೊಲೀಸ್ ಠಾಣೆಯಲ್ಲಿ ಯಾದಗಿರಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿಗಳಾದ ಶ್ರೀಮತಿ ನಿರ್ಮಲಾ.ಎಚ್.ಸುರಪುರ ಅವರು ಪ್ರಕರಣ ದಾಖಲಿಸಿರುವುದಾಗಿ, ಯಾದಗಿರಿ ಜಿಲ್ಲಾ ಮಕ್ಕಳ ರಕ್ಷಣಾ ಘಟಕ ಅಧ್ಯಕ್ಷರು ಹಾಗೂ ಜಿಲ್ಲಾಧಿಕಾರಿಗಳಾದ ಶ್ರೀ ಹರ್ಷಲ್ ಭೋಯರ್ ನಾರಾಯಣರಾವ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಸಂಘರ್ಷವಿಲ್ಲ: ಮೋಹನ್ ಭಾಗವತ್

ನಮ್ಮಿಂದ ಸಹಾಯ ಕೇಳುವವರಿಗೆ ನಾವು ಸಹಾಯ ಮಾಡುತ್ತೇವೆ. ಓಡಿಹೋದವರಿಗೆ ಸಹಾಯ ಸಿಗುವುದಿಲ್ಲ ಎಂದರಲ್ಲದೇ ನಾವು ಪ್ರತಿಯೊಂದು ಸರ್ಕಾರದೊಂದಿಗೆ ಅಂದ್ರೆ ಕೇಂದ್ರ, ರಾಜ್ಯ ಸರ್ಕಾರಗಳೊಂದಿಗೆ ಉತ್ತಮ ಸಂಬಂಧ ಹೊಂದಿದ್ದೇವೆ, ಆದರೆ ಕೆಲವು ವ್ಯವಸ್ಥೆಗಳು ಕೆಲವು ಆಂತರಿಕ ವಿರೋಧಾಭಾಸ ಹೊಂದಿವೆ ಎಂದರು.

ತಂತ್ರಜ್ಞಾನ ಮತ್ತು ಆಧುನೀಕರಣದ ಯುಗದಲ್ಲಿ ಸಂಸ್ಕೃತಿ ಮತ್ತು ಸಂಪ್ರದಾಯಗಳನ್ನು ಸಂರಕ್ಷಿಸುವ ಸವಾಲನ್ನು ಆರ್‌ಎಸ್‌ಎಸ್ ಹೇಗೆ ನೋಡುತ್ತದೆ? ಎಂಬ ಪತ್ರಕರ್ತರ ಪ್ರಶ್ನೆಗೆ ಉತ್ತರಿಸಿ, ಅವರು ತಂತ್ರಜ್ಞಾನ ಮತ್ತು ಆಧುನಿಕತೆಯು ಶಿಕ್ಷಣಕ್ಕೆ ವಿರುದ್ಧವಾಗಿಲ್ಲ. ಶಿಕ್ಷಣ ಕೇವಲ ಮಾಹಿತಿಯಲ್ಲ, ಮನುಷ್ಯ ಸುಸಂಸ್ಕೃತನಾಗಬೇಕು. ಹೊಸ ಶಿಕ್ಷಣ ನೀತಿಯಲ್ಲಿ ಪಂಚಕೋಶಿ ಶಿಕ್ಷಣದ ನಿಬಂಧನೆ ಇದೆ. ಜನರು ತಂತ್ರಜ್ಞಾನದ ಮಾಸ್ಟರ್‌ಗಳಾಗಿರಬೇಕು, ತಂತ್ರಜ್ಞಾನ ನಮ್ಮ ಮಾಸ್ಟರ್‌ಗಳಾಗಬಾರದು ಎಂದು ಹೇಳಿದರು.

ಶಿಕ್ಷಣ ಅಗತ್ಯ, ತಂತ್ರಜ್ಞಾನವು ಅವಿದ್ಯಾವಂತರ ಕೈಗೆ ಹೋದರೆ, ಅದು ವಿರುದ್ಧ ಪರಿಣಾಮವನ್ನು ಬೀರುತ್ತದೆ. ಶಿಕ್ಷಣ ಅಂದ್ರೆ ಕೇವಲ ಮಾಹಿತಿಯನ್ನು ನೆನಪಿಟ್ಟುಕೊಳ್ಳುವುದು ಎಂದಲ್ಲ. ನಮ್ಮ ಹಳೆಯ ಶಿಕ್ಷಣ ಕಣ್ಮರೆಯಾಯಿತು, ನಾವು ಗುಲಾಮರಾಗಿದ್ದಾಗ, ಹೊಸ ವ್ಯವಸ್ಥೆ ಬಂದಿತು. ಅವರು ವ್ಯವಸ್ಥೆಯನ್ನು ತಮ್ಮದೇ ಆದ ಪ್ರಕಾರ ಮಾಡಿದರು. ಆದರೆ ಈಗ ನಾವು ಸ್ವತಂತ್ರರಾಗಿದ್ದೇವೆ, ನಾವು ರಾಜ್ಯವನ್ನು ನಡೆಸಬೇಕು ಮಾತ್ರವಲ್ಲ, ಜನರು ಸಹ ಅದನ್ನು ಅನುಸರಿಸಬೇಕು. ನಾವು ಆ ದಿಕ್ಕಿನಲ್ಲಿ ಮುಂದುವರಿಯಬೇಕಾಗಿದೆ ಎಂದರು.

### ಉಪ ಲೋಕಾಯುಕ್ತ ಬಿ ವೀರಪ್ಪ

ದಾಖಲಿಸಿದರು.ಕೃಷಿ ಉತ್ಪನ್ನ ಮಾರುಕಟ್ಟೆ ಅಧೀನದ ತರಕಾರಿ ಮಾರುಕಟ್ಟೆ, ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿ ಅಧೀನದ ಕೈಗಾರಿಕಾ ಪ್ರದೇಶ, ಕೆಕೆಆರ್ ಟಿಸಿಯ ಕೇಂದ್ರ ಬಸ್ ನಿಲ್ದಾಣ,

ರಿಮ್ಸ್ ಆಸ್ಪತ್ರೆ, ರಾಯಚೂರು ತಾಲೂಕು ತಹಸೀಲ್ದಾರ ಕಚೇರಿ, ಎಡಿಎಲ್‌ಆರ್ ಕಚೇರಿ, ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಉಪ ನೋಂದಣಿ ಇಲಾಖೆ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ನಿರ್ಮಿತಿ ಕೇಂದ್ರ, ಗಣಿ ಮತ್ತು ಭೂವಿಜ್ಞಾನ ಇಲಾಖೆ ಹಾಗೂ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಕಚೇರಿಗಳಿಗೆ ಭೇಟಿ ನೀಡಿ ಕಚೇರಿಗಳಲ್ಲಿನ ಕೆಲವು ಅಧಿಕಾರಿಗಳು ಮತ್ತು ಸಿಬ್ಬಂದಿಯ ಕರ್ತವ್ಯಲೋಪದ ಬಗ್ಗೆ ಒಟ್ಟು 14 ಸ್ವಯಂ ಪ್ರೇರಿತ ದೂರುಗಳನ್ನು ದಾಖಲಿ4ಸಿದರು.

### ಮುಗಿದಿದೆ; ಮಲ್ಲಿಕಾರ್ಜುನ ಖರ್ಗೆ

ಮುಗಿದಿದೆ ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಅವರು ಹೇಳಿದ್ದಾರೆ.

ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಡಿಕೆ ಶಿವಕುಮಾರ್ ಹಾಗೆ ಹೇಳಬಾರದಿತ್ತು ಹೇಳಿದ್ದಾರೆ. ಆರ್‌ಎಸ್‌ಎಸ್ ಗೀತೆ ಹೇಳಿದೆ ಮೇಲೆ ಅವರು ಕ್ಷಮೆ ಕೇಳಿದ್ದಾರೆ. ಅಲ್ಲಿಗೆ ಎಲ್ಲವೂ ಮುಗಿಯಿತು. ಕ್ಷಮೆ ಕೇಳಿದ ಮೇಲೆ ಮುಗೀತು. ಪದೇ ಪದೇ ಅದನ್ನ ಎತ್ತಿ ಹಿಡಿಯೋದು ಬೇಡ. ಇದೀಗ ಅದು ಮುಗಿದ ಅಧ್ಯಾಯ. ಮತ್ತೆ ಅದರ ಬಗ್ಗೆ ನಾನು ಮಾತನಾಡುವುದಿಲ್ಲ. ಮುಂದೆ ಯಾರೂ ಹೀಗೆ ಮಾಡಬಾರದು ಎಂದು ಎಚ್ಚರಿಕೆ ನೀಡಿದ್ದಾರೆ.

ವಿಧಾನಸಭೆಯಲ್ಲಿ ನಡೆದ ಚರ್ಚೆಯ ಸಂದರ್ಭದಲ್ಲಿ ಡಿ.ಕೆ. ಶಿವಕುಮಾರ್ ಅವರು ಆರ್‌ಎಸ್‌ಎಸ್‌ನ ಗೀತೆಯ ಕೆಲವು ಸಾಲುಗಳನ್ನು ಹಾಡಿದ್ದರು. ಇದು ಬಿಜೆಪಿಯನ್ನು ಕೆಣಕುವ ಉದ್ದೇಶದಿಂದ ಮಾಡಿದ ತಮಾಷೆಯ ಕೃತ್ಯವಾಗಿತ್ತು ಎಂದು ಶಿವಕುಮಾರ್ ಸ್ಪಷ್ಟಪಡಿಸಿದ್ದಾರೆ. ಆದರೆ, ಈ ಘಟನೆ ಕಾಂಗ್ರೆಸ್ ಕಾರ್ಯಕರ್ತರಲ್ಲಿ ಮತ್ತು ಸಾರ್ವಜನಿಕರಲ್ಲಿ ಗೊಂದಲವನ್ನುಂಟುಮಾಡಿತು.

ಕಾಂಗ್ರೆಸ್‌ನ ಆಂತರಿಕ ವಲಯದಲ್ಲಿ ಶಿವಕುಮಾರ್‌ರ ಈ ವರ್ತನೆಯನ್ನು ಕೆಲವರು ಟೀಕಿಸಿದರೆ, ಬಿಜೆಪಿ ಇದನ್ನು ರಾಜಕೀಯವಾಗಿ ಬಳಸಿಕೊಳ್ಳಲು ಯತ್ನಿಸಿತು. ಈ ಹಿನ್ನೆಲೆಯಲ್ಲಿ, ಡಿಕೆಶಿ ಆಗಸ್ಟ್ 26 ರಂದು ಕ್ಷಮೆಯಾಚಿಸಿ, ತಾನು ಯಾರ ಭಾವನೆಗಳಿಗೂ ಧಕ್ಕೆ ತಾರದ ಉದ್ದೇಶವಿಲ್ಲದಿದ್ದರೂ, ತನ್ನ ಕೃತ್ಯದಿಂದ ಯಾರಿಗಾದರೂ ನೋವಾಗಿದ್ದರೆ ಕ್ಷಮೆ ಕೇಳುವುದಾಗಿ ತಿಳಿಸಿದರು

## ಜಿಲ್ಲಾಮಟ್ಟದ ಭಾಷಣ ಸ್ಪರ್ಧೆ ನಾಳೆ

ಬೀದರ :ಅ.28: ಬಸವ ಸಂಸ್ಕೃತಿ ಅಭಿಯಾನದ ಪ್ರಯುಕ್ತ ನಗರದ ಐಎಂಎ ಹಾಲ್‌ನಲ್ಲಿ ಆಗಸ್ಟ್ 30 ರಂದು ಬೆಳಿಗ್ಗೆ 11ಕ್ಕೆ ಬಸವ ಸಂಸ್ಕೃತಿ ಕುರಿತು ಜಿಲ್ಲಾಮಟ್ಟದ ಭಾಷಣ ಸ್ಪರ್ಧೆ ಹಮ್ಮಿಕೊಳ್ಳಲಾಗಿದೆ.

ವಿಜೇತರಿಗೆ ರೂ. 10 ಸಾವಿರ ಪ್ರಥಮ, ರೂ. 6 ಸಾವಿರ ದ್ವಿತೀಯ ಹಾಗೂ ರೂ. 4 ಸವಿರ ತೃತೀಯ ಬಹುಮಾನ ಕೊಡಲಾಗುವುದು ಎಂದು ಬೀದರ್ ಬಸವ ಸಂಸ್ಕೃತಿ ಅಭಿಯಾನದ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದ್ದಾರೆ.10ನೇ ತರಗತಿಯಿಂದ ದ್ವಿತೀಯ ಪಿಯುಸಿ ವರೆಗಿನ ವಿದ್ಯಾರ್ಥಿಗಳು ಸ್ಪರ್ಧೆಯಲ್ಲಿ ಪಾಲ್ಗೊಳ್ಳಬಹುದು. ಆಸಕ್ತರು ಆಗಸ್ಟ್ 30 ರ ಬೆಳಿಗ್ಗೆ 8 ಗಂಟೆ ವರೆಗೆ ಯೋಗೇಂದ್ರ ಯದಲಾಪುರೆ (ಮೊ:7019071385),ಚಂದ್ರಶೇಖರ ತೂಗಾ (8867000801) ಅರವಿಂದ ಧುಮ್ಮನಸೂರೆ (9986159301) ಅಥವಾ ಸ್ವರೂಪರಾಣಿ ನಾಗೂರೆ (9916249495) ಅವರ ಬಳಿ ಹೆಸರು ನೋಂದಾಯಿಸಬಹುದು ಎಂದು ಹೇಳಿದ್ದಾರೆ.

## ರಾತ್ರಿ 8 ಗಂಟೆವರೆಗೆ ಕಚೇರಿಗಳ ಪರಿಶೀಲನೆ ಮುಂದುವರೆಸಿದ ಉಪ ಲೋಕಾಯುಕ್ತರಾದ ಬಿ.ವೀರಪ್ಪ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆ 28 : ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ ವೀರಪ್ಪ ಅವರು ಆಗಸ್ಟ್ 28ರಂದು ಮದ್ಯಾಹ್ನ ಊಟದ ವಿರಾಮ ನಂತರ ಮಹಾನಗರ ಪಾಲಿಕೆ, ಸಮಾಜ ಕಲ್ಯಾಣ ಇಲಾಖೆ, ಉಪ ನೋಂದಣಿ ಇಲಾಖೆ, ಶಾಲಾ ಶಿಕ್ಷಣ ಇಲಾಖೆ, ನಿರ್ಮಿತಿ ಕೇಂದ್ರ, ಗಣಿ ಮತ್ತು ಭೂವಿಜ್ಞಾನ ಇಲಾಖೆ, ಆಹಾರ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ರಾಯಚೂರು ಸಹಾಯಕ ಆಯುಕ್ತರ ಕಚೇರಿ ಮತ್ತು ಆರ್ ಟಿಓ ಕಚೇರಿ ಸೇರಿದಂತೆ ವಿವಿಧೆಡೆ ಸಂಚರಿಸಿ ಪರಿಶೀಲಿಸಿದರು.

ಮಧ್ಯಾಹ್ನ ಊಟದ ವಿರಾಮದ ನಂತರ ಸಂಜೆ 4 ಗಂಟೆಗೆ ಮತ್ತೆ ಕಾರ್ಯಾಚರಣೆಗಿಳಿದ ಉಪ ಲೋಕಾಯುಕ್ತರು ರಾತ್ರಿ 8 ಗಂಟೆವರೆಗೆ ಪರಿಶೀಲನೆ ಮುಂದುವರೆಸಿದರು.

ಆರ್ ಟಿಐ ಅರ್ಜಿ ವಿಲೇವಾರಿ ಮಾಡುವಲ್ಲಿ, ಕೆಲವರ ನಿವೃತ್ತಿ ವೇತನ ಮಂಜೂರಾತಿಗೆ ವಿಳಂಬ ಮಾಡಿದ್ದನ್ನು ಪರಿಶೀಲಿಸಿ ಡಿಡಿಪಿಐ ಕಚೇರಿಯ ವಿಷಯ ನಿರ್ವಾಹಕರ ವಿರುದ್ಧ ಉಪ ಲೋಕಾಯುಕ್ತರು ತರಾಟೆಗೆ ತೆಗೆದುಕೊಂಡರು.

ಸಂಜೆ 7.30ರ ಸುಮಾರಿಗೆ ಪ್ರಾದೇಶಿಕ ಸಾರಿಗೆ ಕಚೇರಿಗೆ ಭೇಟಿ ನೀಡಿದ ವೇಳೆ, 29 ಸಾವಿರ ವಾಹನಕ್ಕೆ ಎಫ್ ಸಿ ಇಲ್ಲ ಎಂಬ ಮಾಹಿತಿ ಪಡೆದು ಉಪ ಲೋಕಾಯುಕ್ತರು ತೀವ್ರ ಅಸಮಾಧಾನ ವ್ಯಕ್ತಪಡಿಸಿದರು.

ಪ್ರತಿಯೊಂದು ವಾಹನಕ್ಕೆ ಕಡ್ಡಾಯ ಎಫ್ ಸಿ ಮಾಡಿಸಬೇಕು. ವಿಮೆ ಮಾಡಿಸಬೇಕು. ಶಾಲಾ ವಾಹನಗಳಿಗೆ ಕಡ್ಡಾಯ ಎಫ್‌ಸಿ ಇರಲೇಬೇಕು. ಎಫ್ ಸಿ ಇಲ್ಲದೇ ಶಾಲಾ ವಾಹನ ಓಡಿಸಿ ಒಂದು ವೇಳೆ ಅಪಘಾತ ಸಂಭವಿಸಿದಲ್ಲಿ ಯಾರಿಗು ಸಹ ಒಂದೇ ಒಂದು ಪೈಸೆ ಪರಿಹಾರ ಸಿಗುವುದಿಲ್ಲ ಎಂಬ ಅರಿವು ನಿಮಗಿರಲಿ ಎಂದು ಉಪ ಲೋಕಾಯಕ್ತರು, ಆರ್ ಟಿಓ ಕಚೇರಿಯ ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಎಚ್ಚರಿಕೆ ನೀಡಿದರು.

# ಆಲಾರೆ.. ಆಲಾ.. ಗಣಪತಿ ಆಲಾ..

ಮಲ್ಲಮ್ಮ ನುಡಿ ವಾರ್ತೆ ಬೀದರ. ಆ. 28 : ಆಲಾರೆ.. ಆಲಾ.. ಗಣಪತಿ ಆಲಾ.. ಏಕ್ ದೋ ತೀನ್ ಚಾರ್, ಗಣಪತಿ ಕಾ ಜೈ ಜೈ ಕಾರ್..

ಈಗ ಎಲ್ಲೆಡೆ ಕೇಳಿಬರುತ್ತಿರುವ ಜಯಘೋಷವಿದು. ನಗರದ ಪ್ರತಿಯೊಂದು ರಸ್ತೆ, ಬಡಾವಣೆ ಹಾಗೂ ಗ್ರಾಮಗಳಲ್ಲಿ ವಿಘ್ನ ನಿವಾರಕನ ಬರಮಾಡಿಕೊಳ್ಳಲು ಕೊನೆಯ ಹಂತದ ಸಿದ್ಧತೆ ನಡೆದಿದ್ದು, ಅದರೊಂದಿಗೆ ಗಣೇಶನ ಸ್ತುತಿಸುವ ಗೀತೆಗಳು, ಜಯಘೋಷಗಳು ಎಲ್ಲೆಡೆ ಕೇಳಿಸುತ್ತಿದೆ.

ಈಗಾಗಲೇ ಬೃಹತ್ ಪೆಂಡಾಲ್‌ಗಳನ್ನು ಹಾಕಿ, ರಸ್ತೆಯುದ್ದಕ್ಕೂ ಝಗಮಗಿಸುವ ವಿದ್ಯುತ್ ದೀಪಗಳ ಅಲಂಕಾರ ಮಾಡಲಾಗಿದೆ. ಭಗವಾ ಧ್ವಜಗಳು ಎಲ್ಲೆಡೆ ರಾರಾಜಿಸುತ್ತಿವೆ. ಅಮವಾಸ್ಯೆ ಶುಭದಿನವೆಂದು ಹಲವು ಗಣೇಶ ಮಂಡಳಿಯವರು ಶನಿವಾರವೇ (ಆ.23) ಗಣೇಶನ ಮೂರ್ತಿಗಳನ್ನು ಮೆರವಣಿಗೆಯಲ್ಲಿ ತಂದು, ಪೂಜೆ ಮಾಡಿ, ಖಾಂಡ ಕೂಡ ಮಾಡಿದ್ದಾರೆ.

ಗಣೇಶ ಉತ್ಸವ ಅಧಿಕೃತವಾಗಿ ಬುಧವಾರದಿಂದ (ಆ.27) ಆರಂಭವಾಗಲಿದೆ. ಆದರೆ, ಕಳೆದ ಎರಡು ವಾರಗಳಿಗಿಂತ ಹೆಚ್ಚಿನ ಸಮಯದಿಂದ ಎಲ್ಲ ಕಡೆಗಳಲ್ಲಿಯೂ ಭರದಿಂದ ಸಿದ್ಧತೆ ಮಾಡಲಾಗುತ್ತಿದೆ. ಈಗ ಬಹುತೇಕ ತಯಾರಿ ಪೂರ್ಣಗೊಂಡಿದ್ದು, ಬುಧವಾರ ವಿನಾಯಕನ ಆಗಮನವಾಗಲಿದೆ. ಇದರೊಂದಿಗೆ ಐದು ದಿನಗಳ ಗಣೇಶ ಉತ್ಸವಕ್ಕೆ ವಿದ್ಯುಕ್ತ ಚಾಲನೆ ಸಿಗಲಿದೆ.



ನಾಲ್ಕು ದಿನಗಳ ಕಾಲವೂ ಗಣೇಶನಿಗೆ ವಿಶೇಷ ಪೂಜೆ ನಡೆಯಲಿದೆ. ಭಕ್ತರಿಗೆ ಅನ್ನದಾಸೋಹದ ವ್ಯವಸ್ಥೆ ಇರಲಿದೆ. ರಾಜ್ಯ ಹಾಗೂ ನೆರೆ ರಾಜ್ಯದ ಕಲಾವಿದರು ಆಗಮಿಸಿ ಸಾಂಸ್ಕೃತಿಕ ಕಾರ್ಯಕ್ರಮಗಳನ್ನು ನಡೆಸಿಕೊಡುವರು. ಇದನ್ನು ಕಣ್ತುಂಬಿಕೊಳ್ಳಲು ನಗರವಷ್ಟೇ ಅಲ್ಲ, ಗ್ರಾಮೀಣ ಭಾಗದ ಜನ ಕೂಡ ನಗರಕ್ಕೆ ದೌಡಾಯಿಸುತ್ತಾರೆ. ಹೊತ್ತಾಗುತ್ತಿದ್ದಂತೆ ಎಲ್ಲ ಬಡಾವಣೆಗಳಲ್ಲಿ ಜನಜಂಗುಳಿ, ಗಣೇಶನ ಸ್ತುತಿಸುವ ಹಾಡುಗಳಿಂದ ಹಬ್ಬದ ವಾತಾವರಣ ಸೃಷ್ಟಿಯಾಗುತ್ತದೆ.

ಐದನೇ ದಿನ ಸಂಭ್ರಮ ಇನ್ನಷ್ಟು ಇಮ್ಮಡಿಯಾಗುತ್ತದೆ. ಗಣೇಶನಿಗೆ ಬೀಳ್ಕೊಡುವ ಸಮಯ. ಕೊನೆಯ ದಿನವೂ ವಿಶೇಷ ರೀತಿಯಲ್ಲಿ ವಾಹನಗಳನ್ನು ಅಲಂಕರಿಸಿ, ಅದರಲ್ಲಿ ಪ್ರತಿಷ್ಠಾಪನೆ ಮಾಡಿ, ಪೂಜೆ ನೆರವೇರಿಸಿ, ಪಟಾಕಿ ಸಿಡಿಸಿ ಮೆರವಣಿಗೆಯಲ್ಲಿ ಕೊಂಡೊಯ್ಯಲಾಗುತ್ತದೆ. ಕಿವಿಗಡಚಿಕ್ಕುವ ಸಂಗೀತಕ್ಕೆ ಎಲ್ಲ ವಯೋಮಾನದವರು ಭಕ್ತಿ ಭಾವದಿಂದ ಹೆಜ್ಜೆ ಹಾಕುತ್ತಾರೆ. ಮಧ್ಯಾಹ್ನ ಶುರುವಾಗುವ ಮೆರವಣಿಗೆ ಮರುದಿನ ಬೆಳಗಿನ ವರೆಗೆ ನಿರಂತರವಾಗಿ ನಡೆಯುತ್ತದೆ. ಇದನ್ನು ಕಣ್ತುಂಬಿಕೊಳ್ಳಲು ಅಪಾರ ಸಂಖ್ಯೆಯ ಜನ ಸೇರುತ್ತಾರೆ. ಅಕ್ಷರಶಃ ಐದೂ ದಿನಗಳು ನಗರ ಸೇರಿದಂತೆ ಇಡೀ ಜಿಲ್ಲೆ ಗಣೇಶನ ಭಕ್ತಿಯಲ್ಲಿ ಮುಳುಗಲಿದೆ.

'ಐದು ದಿನಗಳ ಗಣೇಶ ಉತ್ಸವಕ್ಕೆ ಎಲ್ಲ ರೀತಿಯ ಸಿದ್ಧತೆ ಮಾಡಿಕೊಳ್ಳಲಾಗಿದೆ. ಪ್ರತಿವರ್ಷದಂತೆ ಈ ವರ್ಷವೂ ಶಾಂತಿ, ಸೌಹಾರ್ದಯುತವಾಗಿ ಹಬ್ಬ ಆಚರಿಸಲಾಗುವುದು. ಮೆರವಣಿಗೆ ಕೂಡ ವಿಜೃಂಭಣೆಯಿಂದ ನಡೆಯಲಿದೆ' ಎಂದು ಗಣೇಶ ಮಹಾಮಂಡಳದ ಪ್ರಧಾನ ಕಾರ್ಯದರ್ಶಿ ಬಾಬುವಾಲಿ ತಿಳಿಸಿದ್ದಾರೆ.

## ಹುಮನಾಬಾದ್ ಹೊರವಲಯದಲ್ಲಿ ಕೆಮಿಕಲ್ ಕಾರ್ಖಾನೆಗಳಿಂದ ಹಳ್ಳ-ಕೊಳ್ಳಕ್ಕೆ ವಿಷಪೂರಿತ ರಾಸಾಯನಿಕ ವಿಸರ್ಜನೆ: ಸಾರ್ವಜನಿಕ ಆರೋಗ್ಯಕ್ಕೆ ಅಪಾಯ - ಅಧಿಕಾರಿಗಳ ನಿಷ್ಕ್ರಿಯತೆಗೆ ಸಾರ್ವಜನಿಕರ ಆಕ್ರೋಶ

ಮಲ್ಲಮ್ಮನುಡಿವಾರ್ತೆ ಹುಮನಾಬಾದ್, ಆ 28 : ಹುಮನಾಬಾದ್ ಹೊರವಲಯದಲ್ಲಿರುವ ಕೆಲವು ಖಾಸಗಿ ಕೆಮಿಕಲ್ ಕಾರ್ಖಾನೆಗಳು ಪರಿಸರ ನಿಯಮಗಳನ್ನು ಉಲ್ಲಂಘಿಸಿ ವಿಷಪೂರಿತ ರಾಸಾಯನಿಕ ದ್ರವಗಳನ್ನು ಹಳ್ಳ, ಕೊಳ್ಳ, ಮತ್ತು ರೈತರ ಜಮೀನುಗಳಲ್ಲಿ ವಿಸರ್ಜಿಸುತ್ತಿರುವ ಘಟನೆ ಬೆಳಕಿಗೆ ಬಂದಿದೆ. ಈ ಅಮಾನವೀಯ ಕೃತ್ಯದಿಂದಾಗಿ ಶುದ್ಧ ನೀರಿನ ಮೂಲಗಳು ಮಾಲಿನ್ಯಗೊಂಡಿದ್ದು, ಸಾರ್ವಜನಿಕರ ಆರೋಗ್ಯದ ಮೇಲೆ ತೀವ್ರ ಪರಿಣಾಮ ಉಂಟಾಗುವ ಭೀತಿ ವ್ಯಕ್ತವಾಗಿದೆ. ಸ್ಥಳೀಯರು ಈ ಬಗ್ಗೆ ಹಲವು ಬಾರಿ ಸ್ಥಳೀಯ ಆಡಳಿತ ಮತ್ತು ಸಂಬಂಧಪಟ್ಟ ಅಧಿಕಾರಿಗಳಿಗೆ ದೂರು ನೀಡಿದರೂ ಯಾವುದೇ ಕಠಿಣ ಕ್ರಮ ಕೈಗೊಂಡಿಲ್ಲ ಎಂಬ ಆರೋಪಗಳು ಕೇಳಿಬರುತ್ತಿವೆ.

"ನಾವು ಕುಡಿಯುವ ನೀರಿಗೆ ಕೆಮಿಕಲ್ ವಾಸನೆ ಬರುತ್ತಿದೆ. ಜಾನುವಾರುಗಳಿಗೆ ನೀರು ನೀಡಲು ಹೆದರುತ್ತಿದ್ದೇವೆ. ಇದು ನಿಷ್ಕ್ರಿಯತೆ ಮಾತ್ರವಲ್ಲ, ಅಪರಾಧ," ಎಂದು ಗ್ರಾಮಸ್ಥರು ಆರೋಪಿಸಿದ್ದಾರೆ. ಈ ಕುರಿತಂತೆ ವಿಧಾನಸಭಾ ಸದಸ್ಯರು ಮತ್ತು ಸಚಿವರು ತಕ್ಷಣ ಮಧ್ಯಪ್ರವೇಶಿಸಿ ಸೂಕ್ತ ಕ್ರಮ ಕೈಗೊಳ್ಳಬೇಕು ಎಂದು ಸ್ಥಳೀಯರು ಆಗ್ರಹಿಸುತ್ತಿದ್ದಾರೆ. ಪರಿಸರ ನಿಯಂತ್ರಣ ಮಂಡಳಿ, ಆರೋಗ್ಯ ಇಲಾಖೆ ಮತ್ತು ಜಿಲ್ಲಾಧಿಕಾರಿಗಳಿಂದ ಕೂಡಿದ ಸಮಿತಿಯು ತುರ್ತಾಗಿ ಈ ಬಗ್ಗೆ ತನಿಖೆ ನಡೆಸಬೇಕು ಎಂದು ಸಾರ್ವಜನಿಕರು ಒತ್ತಾಯಿಸಿದ್ದಾರೆ. "ಜನರ ಆರೋಗ್ಯದೊಂದಿಗೆ ಆಟವಾಡುವ ಈ ಕೆಮಿಕಲ್ ಕಾರ್ಖಾನೆಗಳನ್ನು ಕೂಡಲೇ ಬಂದ್ ಮಾಡಬೇಕು. ಪರ್ಯಾಯ ವ್ಯವಸ್ಥೆಯಾದರೂ ಮಾಡಿ ರಾಸಾಯನಿಕವನ್ನು ಶೋಧನೆ ನಂತರವಷ್ಟೇ ವಿಸರ್ಜಿಸಲು ಕಾನೂನುಬದ್ಧ ನಿಯಮ ಕಟ್ಟುನಿಟ್ಟಾಗಿ ಜಾರಿಗೆ ತರುವ ಅವಶ್ಯಕತೆ ಇದೆ," ಎಂದು ಹುಮನಾಬಾದ್‌ನ ಪರಿಸರ ಹಕ್ಕು ಹೋರಾಟಗಾರರು ಆಗ್ರಹಿಸಿದ್ದಾರೆ. ಈ ಪ್ರಕರಣವು ಇನ್ನಷ್ಟು ಗಂಭೀರ ಸ್ವರೂಪದತ್ತ ಸಾಗುವುದಕ್ಕೂ ಮುನ್ನ ಶಾಸಕರು, ಸಂಸದರು ಮತ್ತು ಜಿಲ್ಲಾಧಿಕಾರಿಗಳು ಸ್ಪಷ್ಟವಾದ ನಿಲುವು ತೆಗೆದುಕೊಂಡು ಸಾರ್ವಜನಿಕರಿಗೆ ಭರವಸೆ ನೀಡಬೇಕೆಂಬುದು ಜನರ ಒತ್ತಾಯವಾಗಿದೆ.

# ಹಾಸ್ಟೇಲ್‌ಗಳ ಅವ್ಯವಸ್ಥೆ ಕಂಡು ಉಪ ಲೋಕಾಯುಕ್ತ ಬಿ.ವೀರಪ್ಪ ಕೆಂಡಾಮಂಡಲ

ರಾಯಚೂರು ಆ 28 : ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಆಗಸ್ಟ್ 28ರಂದು ಇಡೀ ದಿನ ಕಚೇರಿಗಳ ಭೇಟಿ ತರುವಾಯ ರಾತ್ರಿ 8 ಗಂಟೆ ಸುಮಾರಿಗೆ ಸಮಾಜ ಕಲ್ಯಾಣ ಇಲಾಖೆಯ ಅಧೀನದಲ್ಲಿ ಮಂತ್ರಾಲಯ ರಸ್ತೆಯಲ್ಲಿರುವ ಸರ್ಕಾರಿ ಮೆಟ್ರಿಕ್ ನಂತರದ ಬಾಲಕರ ವಸತಿ ನಿಲಯಕ್ಕೆ ಭೇಟಿ ನೀಡಿದರು.

ಈ ದಿನ ಮಾತ್ರ ನಾವು ಒಳ್ಳೆಯ ಊಟ ಮಾಡಿದ್ದೇವೆ. ಇದುವರೆಗೆ ನಮಗೆ ಸರಿಯಾಗಿ ಊಟ ನೀಡಿಲ್ಲ ಎಂದು ವಿದ್ಯಾರ್ಥಿಗಳು ದೂರಿದಾಗ ಹಾಸ್ಟೆಲ್ ವಾರ್ಡನ ಹಾಗೂ ಅಧಿಕಾರಿಗಳ ಕಾರ್ಯವೈಖರಿ ಕಂಡು ಕೆಂಡಾಮಂಡಲರಾದರು.



ಕೈ ತೊಳೆಯುವ ಸ್ಥಳದಲ್ಲಿ ಎಲ್ಲೆಂದರಲ್ಲಿ ಅನ್ನ ಬಿದ್ದಿರುವುದನ್ನು ಕಂಡು ಹಾಸ್ಟೇಲ್ ಹೀಗೆ ಇರಬೇಕಾ ಎಂದು ವಾರ್ಡನ್ ಮತ್ತು ಅಡುಗೆ ಸಿಬ್ಬಂದಿ ವಿರುದ್ದ ತರಾಟೆ ತೆ-ಗೆದುಕೊಂಡರು.

ನಿಮ್ಮ ಮನೆ ಹೀಗೆ ಇಡ್ತೀರಾ.? ನಿಮ್ಮ ಮಕ್ಕಳಿಗೆ ಇದೆ ರೀತಿ ಊಟ ಕೊಡ್ತೀರಾ? ಎಂದು ಪ್ರಶ್ನಿಸಿದ ಉಪ ಲೋಕಾಯುಕ್ತರು, ಇಲ್ಲಿನ ಮಕ್ಕಳನ್ನು ತಮ್ಮ ಮಕ್ಕಳೆಂದು ಭಾವಿಸಿ ಅವರಿಗೆ ಸರಿಯಾಗಿ ಸೌಕರ್ಯ ಕಲ್ಪಿಸಬೇಕು ಎಂದು ಹಾಸ್ಟೆಲ್ ವಾರ್ಡನಗೆ ಎಚ್ಚರಿಕೆ ನೀಡಿದರು.

ಹಾಸ್ಟೆಲಗೆ ನಿಯಮಿತವಾಗಿ ಯಾಕೆ ಭೇಟಿ ನೀಡಿಲ್ಲ ಎಂದು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಅವರಿಗೆ ಉಪ ಲೋಕಾಯುಕ್ತರು ಪ್ರಶ್ನಿಸಿ, ಮಕ್ಕಳ ಬಗ್ಗೆ ಕಾಳಜಿ ವಹಿಸಲು ಸೂಚನೆ ನೀಡಿದರು.

ಚಪಾತಿ ಸರಿಯಾಗಿ ಬೇಯದಿರುವುದನ್ನು ಖುದ್ದು ಗಮನಿಸಿದ ಉಪ ಲೋಕಾಯುಕ್ತರು,

ಸರಿಯಾಗಿ ಅಡುಗೆ ಮಾಡದಿದ್ದಲ್ಲಿ ನಿಮ್ಮ ಮೇಲೆ ಕ್ರಮ ತೆಗೆದುಕೊಳ್ಳುವುದಾಗಿ ಅಡುಗೆದಾರರಿಗೆ ಎಚ್ಚರಿಕೆ ನೀಡಿದರು.

ವಿದ್ಯಾರ್ಥಿಗಳಿಗೆ

ಪಾಠ: ವಸತಿ ನಿಲಯದಲ್ಲಿನ ಎಲ್ಲ ವಿದ್ಯಾರ್ಥಿಗಳನ್ನು ಒಂದೆಡೆ ಸೇರಿಸಿದ ಉಪ ಲೋಕಾಯುಕ್ತರು, ವಸತಿ ನಿಲಯದಲ್ಲಿ ಶಿಸ್ತಿನಿಂದ ಇರಬೇಕು. ಸರಿಯಾಗಿ ಓದಬೇಕು. ವಸತಿ ನಿಲಯದ ನಿಯಮಗಳ ಪಾಲನೆ ಮಾಡಬೇಕು ಎಂದು ವಿದ್ಯಾರ್ಥಿಗಳಿಗೆ ಶಿಸ್ತಿನ ಪಾಠ ಮಾಡಿದರು.

# ರಸ್ತೆ, ಕೆರೆ ಒತ್ತುವರಿ ತಡೆಗೆ ಕ್ರಮವಹಿಸಿ: ಪಾಲಿಕೆಯ ಅಧಿಕಾರಿಗಳಿಗೆ ಉಪ ಲೋಕಾಯುಕ್ತರ ಸೂಚನೆ

ರಾಯಚೂರು ಆ 28 : ರಾಯಚೂರು ಪ್ರವಾಸದಲ್ಲಿದ್ದ ಉಪ ಲೋಕಾಯುಕ್ತರಾದ ನ್ಯಾ. ಬಿ ವೀರಪ್ಪ ಅವರು ಆಗಸ್ಟ್ 28ರಂದು ಊಟದ ವಿರಾಮದ ನಂತರ ನಗರದಲ್ಲಿನ ಹಳೆಯ ಮಹಾನಗರ ಪಾಲಿಕೆಯ ಕಚೇರಿಗೆ ಭೇಟಿ ನೀಡಿದರು.

ಬಹುಮುಖ್ಯವಾದ ಸರ್ಕಾರಿ ಸ್ವತ್ತಿನ ಅತಿಕ್ರಮಣವು ಕೂಡಲೇ ತೆರವಾಗಬೇಕು ಎಂದು ದಾಖಲಾದ, ದಾಖಲಾಗುವ ದೂರಿನ ಪ್ರಕರಣಗಳ ವಿಲೆಗೆ ಪಾಲಿಕೆಯ ಅಧಿಕಾರಿಗಳು ಮೊದಲಾದ್ಯತೆ ನೀಡಬೇಕು ಎಂದು ಭೇಟಿ



ವೇಳೆಯಲ್ಲಿ, ಉಪಲೋಕಾಯುಕ್ತರಾದ ಬಿ ವೀರಪ್ಪ ಅವರು ಅಧಿಕಾರಿಗಳು ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು. ನಗರದಲ್ಲಿನ ಸಾರ್ವಜನಿಕ ಆಸ್ತಿಗಳಾದ ಕೆರೆ, ಬಾವಿ ಜಾಗ, ರಸ್ತೆ ಪ್ರದೇಶವನ್ನು ಯಾರು ಸಹ ಒತ್ತುವರಿ ಮಾಡದಂತೆ ನೋಡಿಕೊಳ್ಳಬೇಕು. ಇದು ಪಾಲಿಕೆಯ ಬಹುಮುಖ್ಯ ಕಾರ್ಯ. ಕರ ವಸೂಲಿಯನ್ನು ಸಹ ನಿಯಮಿತವಾಗಿ ನಡೆಸಿ ಅದರಿಂದ ಬರುವ ಆದಾಯದಿಂದ ನಗರದ ನಿವಾಸಿಗಳಿಗೆ ಕುಡಿಯುವ ನೀರು, ಬೀದಿ ದೀಪ ಸೇರಿದಂತೆ ಸರಿಯಾದ ಮೂಲಭೂತ ಸೌಕರ್ಯ ಕಲ್ಪಿಸಲು ಒತ್ತು ನೀಡಬೇಕು ಎಂದು ಪಾಲಿಕೆಯ ಅಧಿಕಾರಿ ಮತ್ತು ಸಿಬ್ಬಂದಿಗೆ ಸೂಚನೆ ನೀಡಿದರು.

# ಸಮಾಜ ಕಲ್ಯಾಣ ಇಲಾಖೆಗೆ ಭೇಟಿ: ಆಯ್ಕೆಯಾದ ಎಲ್ಲ ಮಕ್ಕಳಿಗೆ ವಸತಿ ನೀಡಿದ್ದೀರಾ? ಎಂದು ಕೇಳಿದ ಉಪ ಲೋಕಾಯುಕ್ತರು



ರಾಯಚೂರು ಆ 28 : ಉಪ ಲೋಕಾಯುಕ್ತರಾದ ನ್ಯಾಯಮೂರ್ತಿ ಬಿ.ವೀರಪ್ಪ ಅವರು ಮಹಾನಗರ ಪಾಲಿಕೆಯ ಭೇಟಿ ನಂತರ ನೇರವಾಗಿ ರಂಗಮಂದಿರ ಹಿಂದಿನ ಸಮಾಜ ಕಲ್ಯಾಣ ಇಲಾಖೆಯ ಕಚೇರಿಗೆ ತೆರಳಿದರು.

2023ನೇ ಸಾಲಿನಿಂದ 2025ನೇ ಸಾಲಿನ ಮೂರು ವರ್ಷಗಳ ಅವಧಿಯಲ್ಲಿ ಸಮಾಜ ಕಲ್ಯಾಣ ಇಲಾಖೆಯ ವಸತಿ ನಿಲಯಗಳಿಗೆ ನೋಂದಣಿಯಾದ ವಿದ್ಯಾರ್ಥಿಗಳು ಎಷ್ಟು?

ಪಾಸಾದ ವಿದ್ಯಾರ್ಥಿಗಳು ಎಷ್ಟು? ಎಂದು ಮಾಹಿತಿ ಒದಗಿಸಬೇಕು. ಆಯಾ ವರ್ಷಗಳಲ್ಲಿ ಅನುತ್ತೀರ್ಣರಾದ ವಿದ್ಯಾರ್ಥಿಗಳು ಮುಂದೇನು ಮಾಡಿದರು? ಇಲಾಖೆಯ ವಸತಿ ನಿಲಯದಲ್ಲಿ ಅವರ ಪ್ರವೇಶ ಮುಂದುವರೆಯಿತಾ? ಅಥವಾ ಇಲ್ಲ? ಈ ಬಗ್ಗೆ ಇಲಾಖೆಯಿಂದ ಯಾವ ಕ್ರಮ ಆಯಿತು? ಎಂಬುದರ ಬಗ್ಗೆ ವರ್ಷವಾರು, ಗಂಡು ಮತ್ತು ಹೆಣ್ಣು ವಿಂಗಡಣೆವಾರು ಮಾಹಿತಿ ನೀಡಬೇಕು ಎಂದು ಇದೆ ವೇಳೆ ಉಪ ಲೋಕಾಯುಕ್ತರು ಸಮಾಜ ಕಲ್ಯಾಣ ಇಲಾಖೆಯ ಅಧಿಕಾರಿ ಸಿಂಧೂ ಅವರಿಗೆ ಸೂಚನೆ ನೀಡಿದರು.

ಇಲಾಖೆಯ ಅಧೀನದಲ್ಲಿನ ಎಲ್ಲ ವಸತಿ ನಿಲಯಗಳು ಸರಿಯಾಗಿ ನಿರ್ವಹಣೆ ಆಗಬೇಕು ಎಂದು ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.



ಬಸವಕಲ್ಯಾಣ :– ತಾಲೂಕಿನ ಸುಕ್ಷೇತ್ರ ಹಾರಕೂಡ ಶ್ರೀಮಠದ ದಾಸೋಹ ಮನೆಯಲ್ಲಿ ಗಣೇಶ ಚತುರ್ಥಿ ನಿಮಿತ್ಯ ಶ್ರೀ ಮಠದ ಪೀಠಾಧಿಪತಿಗಳಾದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ಶ್ರೀ ಗಣೇಶ ಮೂರ್ತಿಗೆ ಗೌರವ ಸಮರ್ಪಿಸಿದರು. ಈ ಸಂದರ್ಭದಲ್ಲಿ ಮಲ್ಲಿನಾಥ ಹಿರೇಮಠ ಹಾರಕೂಡ, ಅಲ್ಲಮ ಪ್ರಭು ಹಿರೇಮಠ, ಹೇಮಲತಾ ಎಂ. ಹಿರೇಮಠ, ನಿವೇದಿತ ಹಿರೇಮಠ ಮುಂತಾದವರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ)

# ಬನಶಂಕರಿ ಓಣಿಯಲ್ಲಿ ಗಣೇಶನ ಪ್ರತಿಷ್ಠಾಪನೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ ಪಟ್ಟಣದ ಬನಶಂಕರಿ ಓಣಿಯಲ್ಲಿ ಪ್ರತಿ ವರ್ಷದಂತೆ ಈ ವರ್ಷವೂ ಕೂಡ ಅತ್ಯಂತ ವೈಭವದಿಂದ ಗಣೇಶನನ್ನು ಪ್ರತಿಷ್ಠಾಪಿಸಲಾಗಿದೆ. ಬನಶಂಕರಿ ದೇವಾಲಯದ ಆವರಣದಲ್ಲಿ ಗಣೇಶನನ್ನು ಪ್ರತಿಷ್ಠಾಪಿಸಲಾಗಿದ್ದು ಬಡಾವಣೆಯ ಜನರು ಭಕ್ತಿ ಭಾವದಿಂದ ಗಣೇಶೋತ್ಸವದಲ್ಲಿ ಪಾಲ್ಗೊಂಡರು.

ಗಣೇಶ ಪ್ರತಿಷ್ಠಾಪನೆಗೂ ಮುನ್ನ ಗಣೇಶ್ ಮೂರ್ತಿಯನ್ನು ಪಟ್ಟಣದ ಪ್ರಮುಖ ಬೀದಿಗಳಲ್ಲಿ ಮೆರವಣಿಗೆ ಮಾಡಲಾಯಿತು.

ಈ ಸಂದರ್ಭದಲ್ಲಿ ಹರ ಹರ ಮಹಾದೇವ ಶ್ರೀ ವೀರಭದ್ರ ಕಾಳಿ ಸೇರಿದಂತೆ ಇತರ ದೇವರುಗಳ ಹಾಗೂ ಪುರವಂತರ ಸೇವೆ ವೀಕ್ಷಕರ ಗಮನ ಸೆಳೆಯಿತು. ಯುವ ಪಡೆ ಕುಣಿದು ಕುಪ್ಪಳಿಸಿತು. ಐದು ದಿನಗಳ ಬಳಿಕ ವಿಸರ್ಜನೆ ನಡೆಯಲಿದೆ ಎಂದು ಗಣೇಶ್ ಉತ್ಸವ ಆಚರಣೆ ಸಮಿತಿ ಮಾಹಿತಿ ನೀಡಿದೆ.

# ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ:ಯಾವುದೇ ಜಾತಿಗಳು ಬಿಟ್ಟು ಹೋಗಿದ್ದರೆ ಮಾಹಿತಿ ನೀಡಲು ಸೆ.1 ರವರೆಗೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 28–ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳು, ಇತರೆ ಜಾತಿಗಳು ಅನುಸೂಚಿತ ಜಾತಿ ಮತ್ತು ಪಂಗಡಗಳು ಸೇರಿದಂತೆ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಸರ್ಕಾರದ ಆದೇಶಾನುಸಾರ ಕೈಗೊಂಡಿದೆ. ಈ ಹಿನ್ನೆಲೆಯಲ್ಲಿ, ಹಿಂದುಳಿದ ವರ್ಗಗಳು ಮತ್ತು ಇತರೆ ಜಾತಿ/ಉಪಜಾತಿಗಳ ಬಗ್ಗೆ ಸಾರ್ವಜನಿಕರ ಮಾಹಿತಿಗಾಗಿ ದಿನಾಂಕ: 22.08.2025 ರಂದು ಪತ್ರಿಕೆಗಳಲ್ಲಿ ಪ್ರಕಟಣೆ ನೀಡಿ ಯಾವುದೇ ಜಾತಿ/ ಉಪಜಾತಿಗಳು ಬಿಟ್ಟು ಹೋಗಿದ್ದಲ್ಲಿ, ಅಂತಹ ಅಂಶಗಳ ಬಗ್ಗೆ ಸಲಹೆ, ಸೂಚನೆಗಳು ಇದ್ದಲ್ಲಿ, 07 ದಿನಗಳ ಒಳಗೆ ನೀಡಲು ಕೋರಲಾಗಿತ್ತು.

ಸಾರ್ವಜನಿಕರು ಹಾಗೂ ವಿವಿಧ ಸಂಘ ಸಂಸ್ಥೆಗಳು ಈ ಅವಧಿಯನ್ನು ವಿಸ್ತರಿಸಲು ಕೋರಿರುವ ಕಾರಣ, ಈ ಬಗ್ಗೆ ಸಲಹೆ/ಸೂಚನೆ ಮನವಿಗಳನ್ನು ನೀಡುವ ಅವಧಿಯನ್ನು ದಿನಾಂಕ: 01.09.2025 ರ ಸಂಜೆ 5.00 ಘಂಟೆಯವರೆಗೆ ವಿಸ್ತರಿಸಲಾಗಿದೆ ಎಂದು ಈ ಮೂಲಕ ಪ್ರಕಟಿಸಲಾಗಿದೆ. ಸಂಗ್ರಹಿಸಲಾದ ಜಾತಿ/ ಉಪಜಾತಿಗಳ ಪಟ್ಟಿಯನ್ನು ಸೆಪ್ಟೆಂಬರ್ ತಿಂಗಳಲ್ಲಿ ಪ್ರಾರಂಭವಾಗಲಿರುವ ಸಮೀಕ್ಷೆಗಾಗಿ ಮಾತ್ರ ಉಪಯೋಗಿಸಲಾಗುವುದು.

ಸಾರ್ವಜನಿಕರು ತಮ್ಮ ಸಲಹೆ/ಸೂಚನೆ/ ಮನವಿಗಳನ್ನು ಸದಸ್ಯ ಕಾರ್ಯದರ್ಶಿಗಳು,ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ನಂ.16, ಡಿ.ದೇವರಾಜ ಅರಸು ಭವನ,ಮಿಲ್ಲರ್ಸ್ ಟ್ಯಾಂಕ್ ಬಂಡ್ ಪ್ರದೇಶ, ವಸಂತ ನಗರ,ಬೆಂಗಳೂರು ಅಥವಾ kscbcb@gmail.com ಇ–ಮೇಲ್ ವಿಳಾಸಕ್ಕೆ ಕಳುಹಿಸಬಹುದಾಗಿದೆ. ಹೆಚ್ಚಿನವಿವರಗಳಿಗೆ ದೂ.ಸಂಖ್ಯೆ 080–29506668 ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

# ಸದ್ಭಾವನೆಗಳ ಕೃಷಿಕರಾಗಿ – ಹಾರಕೂಡ ಶ್ರೀ



(ವರದಿ. ಡಿ. ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ

ಬಸವಕಲ್ಯಾಣ :– ಆ 28 ಪ್ರತಿಯೊಬ್ಬರು ಸದ್ಭಾವನೆಗಳ ಕೃಷಿಕರಾದಾಗ ಸಮಾಜ ಧರ್ಮದ ಉಗ್ರಾಣವಾಗಿ ಮಾರ್ಪಡುತ್ತದೆ ಎಂದು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ನುಡಿದರು.

ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಗದಲೇಗಾಂವ ಬಿ. ಗ್ರಾಮದ ಭಕ್ತಾದಿಗಳಿಂದ ಆಯೋಜಿಸಿದ 868ನೇ ತುಲಾಭಾರ ಹಾಗೂ ಶ್ರಾವಣ ಮಾಸದ ನಿತ್ಯ ಪಾದಯಾತ್ರೆ ಮಹಾಮಂಗಲ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿದ ಶ್ರೀಗಳು, ಮನುಷ್ಯ ಭಾವನಾ ಜೀವಿಯಾಗಿದ್ದು, ಆತನಲ್ಲಿ ಹುಟ್ಟುವ ಭಾವನೆಗಳು ಭಗವದೀಯವಾಗಿದ್ದಲ್ಲಿ ವೈಯಕ್ತಿಕ ಹಾಗೂ ಸಾಮಾಜಿಕ ಜೀವನ ಸುಂದರ ಹಾಗೂ ಶ್ರೇಯಸ್ಸಿನಿಂದ ಕೂಡಿರುತ್ತದೆ.

ಬೇರೆಯವರ ಉನ್ನತಿ ಕಂಡು ಅಸೂಯೆ ಪಡದೆ, ಅವರಿಂದ ಪ್ರೇರಣೆ ಪಡೆದಾಗ ತೂಕದ ಬದುಕು ಸಾಗಿಸಲು ಸಾಧ್ಯವಾಗುತ್ತದೆ.

ಪಾದಯಾತ್ರೆ ಭಿನ್ನತೆ ತೊಲಗಿಸಿ ಭಾವೈಕ್ಯದ ಸದ್ಭಾವನೆ ಅರಳಿಸುತ್ತದೆ.

ಎಲ್ಲರೂ ಕೂಡಿ ನಡೆಯುವಾಗ, ಉಂಟಾಗುವ ಸಾಮರಸ್ಯದ ಭಾವ ಬಾಳಿಗೊಂದು ಸಹಜತೆಯ, ಸರಳತೆಯ ಪಾಠ ಬೋಧಿಸುತ್ತದೆ.

ಹಾರಕೂಡ ಗುರುಪೀಠದ ಮೇಲೆ ಇಟ್ಟಿರುವ ನಿಷ್ಠೆ ಭಕ್ತಿಯಿಂದ ಗದಲೇಗಾಂವ ಬಿ. ಗ್ರಾಮದ ಹಾಗೂ ಎಲ್ಲಾ ಭಕ್ತರ ಜೀವನ ಶುಭದಿಂದ ಕೂಡಿರಲಿ ಎಂದು ಹಾರೈಸಿದರು. ಈ ಸಂದರ್ಭದಲ್ಲಿ

ಮಲ್ಲಿನಾಥ ಹಿರೇಮಠ ಹಾರಕೂಡ, ಮಹಾಂತಪ್ಪ ಶ್ರೀಚಂದ, ನಾಗಣ್ಣ ಪಾಟೀಲ, ಗೋಪಾಲರಾವ ರಾಯಜಿ, ರಾಘವೇಂದ್ರರೆಡ್ಡಿ ಚುಮ್ಮನಚೂಡ, ವಿಜಯಕುಮಾರ ಬೈಟ ಪಾಟೀಲ, ತುಕಾರಾಮ ರೆಡ್ಡಿ ಬಾಕಾರೆ, ಸೋಮನಾಥ ಪೊಲೀಸ್ ಪಾಟೀಲ, ಶಿವಲಿಂಗಪ್ಪ ಪೊಲೀಸ್ ಪಾಟೀಲ, ಗೋವಿಂದ ರೆಡ್ಡಿ ಸೇಳಗೆ, ಕಲ್ಯಾಣರಾವ ಬೆಳಮಗೆ ಮುಂತಾದವರು ಉಪಸ್ಥಿತರಿದ್ದರು.

ಕಾರ್ತಿಕ ಸ್ವಾಮಿ ಯಲ್ಲದಗುಂಡಿ ಪ್ರಾರ್ಥನಾ ಗೀತೆ ಹಾಡಿದರು.

ಮಾನಸಿ ಸೂರ್ಯವಂಷಿ ಸಾಂಸ್ಕೃತಿಕ ನೃತ್ಯ ರೂಪಕ ಪ್ರಸ್ತುತಪಡಿಸಿದ್ದರು.

ಆನಂದಿ ಹರಿದಾಸ ಮತ್ತು ಮಾನಸಿ ಗದಲೇಗಾಂವ ಭರತನಾಟ್ಯ ಮಾಡಿದರು.

ಸಂತೋಷಿ ಹಡಪದ ಭಕ್ತಿ ಗೀತೆ ಹಾಡಿದರು.

ವಿಠಲ ಹೂಗಾರ ಸ್ವಾಗತಿಸಿ, ನಿರೂಪಿಸಿದರು.

ಮಹದೇವ ಪಾಟೀಲ ವಂದಿಸಿದರು.

# ಬಸವ ತತ್ವ ಬಿತ್ತಿದವರು ಲಿಂಗಾನಂದ ಸ್ವಾಮಿಗಳು: ಶ್ರೀ ಬಸವಲಿಂಗ ಪಟ್ಟದ್ದೇವರು.





ಮಲ್ಲಮ್ಮ ನುಡಿ ವಾರ್ತೆ

ವರದಿ. ಡಿ. ಕೆ. ಪ್ರಹ್ಲಾದ ಜಿ.)

ಬಸವಕಲ್ಯಾಣ: ನನ್ನ ಹೃದಯದಲ್ಲಿ ಬಸವ ತತ್ವದ ಬೀಜ ಬಿತ್ತಿದವರೇ ಪರಮ ಪೂಜ್ಯ ಲಿಂಗಾನಂದ ಮಹಾಸ್ವಾಮಿಗಳು ಎಂದು ಅನುಭವ ಮಂಟಪದ ಟ್ರಸ್ಟಿನ ಅಧ್ಯಕ್ಷರಾದ ಪೂಜ್ಯಶ್ರೀ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.

ನಗರದ ಬಸವ ಧರ್ಮ ಪೀಠದ ಆವರಣದಲ್ಲಿ ಹಮ್ಮಿಕೊಂಡ ಪ್ರವಚನ ಪಿತಾಮಹ ಲಿಂ. ಲಿಂಗಾನಂದ ಮಹಾಸ್ವಾಮಿಗಳವರ 95 ನೆಯ ಜಯಂತೋತ್ಸವ, ಪೂಜ್ಯ ಮಹಾಜಗದ್ಗುರು ಡಾ.ಗಂಗಾದೇವಿ ಮಾತಾಜಿಯವರ 67ನೆ ವರ್ದಂತಿ, ಹಾಗೂ ರಾಷ್ಟ್ರೀಯ ಬಸವದಳದ ಹುಟ್ಟು ಹಬ್ಬ ಕಾರ್ಯಕ್ರಮವನ್ನು ಬಸವಜ್ಯೋತಿ ಪ್ರಜ್ವಲಿಸಿ ಮಾತನಾಡಿದ ಶ್ರೀಗಳು 45 ವರ್ಷ ಕಾಲ ಪ್ರವಚನಗಳ ಮುಖಾಂತರ ಬಸವ ಧರ್ಮ ಮನೆ, ಮನಗಳಿಗೆ ಪ್ರಸಾರ ಮಾಡಿ,"ಬಸವ ತತ್ವ ಜನಮಾನಸದಲ್ಲಿ ಬಿತ್ತಿದವರು ಪ್ರವಚನ ಪಿತಾಮಹ ಲಿಂಗಾನಂದ ಮಹಾಸ್ವಾಮಿಗಳವರು. ಅವರ ಲಿಂಗಾಯತ ಧರ್ಮ ನಿಷ್ಠೆ ಎಂದೆಂದಿಗೂ ಸ್ಮರಣೀಯವಾದದ್ದು.

ಪ್ರವಚನದ ಮುಖಾಂತರ ಬಸವ ಧರ್ಮ ಜಾಗೃತಿ ಮೂಡಿಸಿದವರಲ್ಲಿ ಲಿಂಗಾನಂದ ಸ್ವಾಮಿಗಳು ಪ್ರಮುಖ ಸಂತರಾಗಿ ನಮಗೆಲ್ಲರಿಗೂ ಮಾರ್ಗದರ್ಶಿಗಳಾಗಿದ್ದಾರೆ ಎಂದರು. ಹುಲಸೂರಿನ ಶ್ರೀ ಗುರು ಬಸವೇಶ್ವರ ಸಂಸ್ಥಾನ ಮಠದ ಪೂಜ್ಯ ಶ್ರೀ ಶಿವಾನಂದ ಮಹಾಸ್ವಾಮಿಜಿಗಳು ಮಾತನಾಡಿ, ರಾಷ್ಟ್ರೀಯ ಬಸವದಳದ ಕಾರ್ಯಕರ್ತರು ಅತ್ಯಂತ ಶಿಸ್ತು ಮತ್ತು ಪ್ರಾಮಾಣಿಕತೆಯಿಂದ ಕೆಲಸ ಕಾರ್ಯಗಳನ್ನು ಮಾಡಿ ಧರ್ಮವನ್ನು ಸಂಘಟಿಸುವಲ್ಲಿ ಪ್ರಾಮಾಣಿಕ ಸೇವೆಯನ್ನು ಮಾಡುತ್ತಿದ್ದಾರೆ ಎಂದು ತಿಳಿಸಿದರು.

ಕಾರ್ಯಕ್ರಮದ ದಿವ್ಯ ನೇತೃತ್ವ ವಹಿಸಿದ ಪೂಜ್ಯ ಗಂಗಾ ಮಾತಾಜಿ ಮಾತನಾಡಿ ಬರುವ ಅಕ್ಟೋಬರ್ ತಿಂಗಳ 10,11,12 (ಈ ಮೂರು ದಿನಗಳ ಕಾಲ) ರಂದು 24 ನೇಯ ಕಲ್ಯಾಣ ಪರ್ವ ಉತ್ಸವವು ಅತ್ಯಂತ ಅರ್ಥಪೂರ್ಣವಾಗಿ ಅಷ್ಟೇ ವೈಚಾರಿಕವಾಗಿ ಆಚರಣೆ ಮಾಡೋಣ ಎಂದು ತಿಳಿಸಿದರು. ಇದೇ ಸಂದರ್ಭದಲ್ಲಿ

ಸ್ವಾಗತಸಮಿತಿಯಗೌರವಾದ್ಯಕ್ಷರಾಗಿ ಬಸವರಾಜ್ ಬುಳ್ಳ, ಕಾರ್ಯಾದ್ಯಕ್ಷರಾಗಿ ಕಂಟೆಪ್ಪಾ ಗಂದಿಗುಡಿ, ಪ್ರದಾನ ಕಾರ್ಯದರ್ಶಿಯಾಗಿ ಶಿವರಾಜ್ ನರಶೆಟ್ಟಿಯವರನ್ನು ಆಯ್ಕೆಮಾಡಿ ಗೌರವಿಸಲಾಯಿತು.

ಇದೇ ಸಂದರ್ಭದಲ್ಲಿ ಉಪ ಸಮಿತಿಯ ಇತರೆ ಸದಸ್ಯರಾಗಿ ಪ್ರಮುಖರಾದ ಸೋಮಶೇಖರ್ ಪಾಟೀಲ್ ಗಾದಗಿ, ಕುಶಾಲ್ ರಾವ್ ಪಾಟೀಲ್ ಕಾಜಾಪುರೆ, ರಾಜೇಂದ್ರ ಜೊನ್ನೀಕೇರಿ, ರಾಜೇಂದ್ರ ಜೊನ್ನೀಕೇರಿ, ರಾಜೇಂದ್ರ ಗಂದಗೆ, ಆರ್ ಜಿ ಶೆಟಗಾರ್, ಸಂಗಮೇಶ ಎನ್ ಜವಾದಿ, ಅನಿಲ್ ಪಾಟೀಲ್, ಶಂಕ್ರಪ್ಪ ಪಾಟೀಲ್, ವಿಜಯಕುಮಾರ್ ಮೇಳಕುಂದಿ, ಮಹಾದೇವ್ ಬೇಲೂರೆ, ಸಿದ್ರಾಮಪ್ಪ ಲದ್ದೆ, ರವಿ ಪಾಪಡೆ, ರವೀಂದ್ರ ಕೋಳಕೂರ, ಗಣೇಶ್ ಬಿರಾದಾರ್ ಸೇರಿ 42 ಜನ ಶರಣರನ್ನು ಆಯ್ಕೆಮಾಡಿ ಘೋಷಿಸಲಾಯಿತು. ಅಲ್ಲದೆ ಕಲ್ಯಾಣ ಪರ್ವ ಉತ್ಸವದ ಬಿತ್ತಿಪತ್ರ ಬಿಡುಗಡೆ ಮಾಡಿ ಪ್ರಚಾರಕ್ಕೆ ಚಾಲನೆ ನೀಡಲಾಯಿತು.

ಈ ಸಂದರ್ಭದಲ್ಲಿ ಬಸವ ಧರ್ಮ ಪೀಠದ ಹಾಲಿ ಕಾರ್ಯಾದ್ಯಕ್ಷರಾದ ಪೂಜ್ಯ ಶ್ರೀ ಡಾ. ಗಂಗಾದೇವಿ ಮಾತಾಜಿ ರವರ 67ನೇ ಜನ್ಮದಿನ ಹಾಗೂ ನಾಡೋಜ ಡಾ. ಬಸವಲಿಂಗ ಪಟ್ಟದ್ದೇವರ ಸುವರ್ಣ ಮಹೋತ್ಸವ ವರ್ದಂತಿಯ ನಿಮಿತ್ತ ಇಬ್ಬರೂ ಪೂಜ್ಯರಿಗೆ ಗೌರವಿಸಿ, ಸನ್ಮಾನಿಸಲಾಯಿತು ಎಂದು ಬಸವ ಮಹಾನೆಯ ಪೂಜ್ಯ ಶ್ರೀ ಸಿದ್ದರಾಮೇಶ್ವರ ಸ್ವಾಮಿಜಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಸಡಗರ ಸಂಭ್ರಮದಿಂದ ಜರುಗಿದ ಶ್ರೀ ರಾಚೋಟೇಶ್ವರ ದೇವರ ಪಲ್ಲಕ್ಕಿ ಉತ್ಸವ





ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ: ಆ.28– ತಾಲ್ಲೂಕಿನ ಮುತ್ತಂಗಿ ಗ್ರಾಮದ ಆರಾಧ್ಯದೈವ ಶ್ರೀ ರಾಚೋಟೇಶ್ವರ ದೇವರ ಪಲ್ಲಕ್ಕಿ ಉತ್ಸವ ಮಳೆಯಲ್ಲಿಯೇ ಸಾವಿರಾರು ಭಕ್ತರ ಮಧ್ಯೆ ಬುಧವಾರ ಸಡಗರ ಸಂಭ್ರಮದಿಂದ ಜರುಗಿ–ತ್ತು. ಮಲ್ಲಿಕಾರ್ಜುನ ಪೊಲೀಸ್ ಪಾಟೀಲ್ ಮಾತನಾಡಿ, ಪ್ರತಿ ವರ್ಷ ಶ್ರಾವಣ ಮಾಸದ ಮುಕ್ತಾಯದ ದಿನ ನಡೆಯುವ ಜಾತ್ರೆ, ಪಲ್ಲಕ್ಕಿ ಉತ್ಸವವು ಸುತ್ತಲಿನ ಗ್ರಾಮಗಳಲ್ಲಿ ಪ್ರಸಿದ್ಧಿ ಪಡೆದಿದೆ. ಮೂರು ದಿನಗಳ ಜಾತ್ರೆಯಲ್ಲಿ ಸೋಮವಾರ ದೇವರ ನಂದಿಕೋಲ ಮಹಾ ಪೂಜೆ, ರುದ್ರಾಭಿಷೇಕ ವೈದಿಕ ಪದ್ಧತಿಯಲ್ಲಿ ನಡೆಯಿತು. ಮಂಗಳವಾರ ಬೆಳಿಗ್ಗೆ ರಾಚೋಟೇಶ್ವರ ದೇವರಿಗೆ ಸಂಗೀತ ರುದ್ರ ಪೂಜೆ ನಡೆಸಲಾಯಿತು. ಉತ್ಸವದಲ್ಲಿ ಭಾಗಿಯಾದ ಭಕ್ತರಿಗೆ ಹಾಲು ಹುಗ್ಗಿಯ ಪ್ರಸಾದ ವಿತರಣೆ ಕಾರ್ಯಕ್ರಮವನ್ನು ಬೆಳಿಗ್ಗೆಯಿಂದಲೇ ದೇವರಿಗೆ ವಿಶೇಷ ಪೂಜೆ, ಧಾರ್ಮಿಕ ಕಾರ್ಯಕ್ರಮಗಳು. ದೇವರ ಪಲ್ಲಕ್ಕಿ ಉತ್ಸವದ ವೇಳೆ ಭಕ್ತರಿಂದ ಭಜನೆ ಹಾಗೂ ಪ್ರವಚನ ಕಾರ್ಯಕ್ರಮಗಳು ಸೇರಿದಂತೆ ಮಕ್ಕಳಿಂದ ಕೋಲಾಟ, ಸಿಡಿಮದ್ದು ಗುಂಡುಗಳು ಪಲ್ಲಕ್ಕಿ ಉತ್ಸವಕ್ಕೆ ಮೆರಗು ನೀಡಿದವು. ಪುರವಂತರು ಕೈ, ತುಟಿಗಳಿಗೆ ಸೂಜಿ ಹಾಯಿಸಿ ಕೊಳ್ಳುವ ಮೂಲಕ ಭಕ್ತರ ಗಮನ ಸೆಳೆದರು. ಮುತ್ತಂಗಿ ಶ್ರೀ ರಾಚೋಟೇಶ್ವರ ಬೇಡಿದವರಿಗೆ ಬೇಡಿದ ವರ ನೀಡುತ್ತಾನೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಸುಭಾಷ ಪಾಲಾಟಿ, ಶಿವಪುತ್ರ ಸಾದಾ, ಪುಂಡಲೀಕಪ್ಪ ಚಿಂಚೋಳಿಕರ್, ಕುಪೇಂದ್ರನಾಥ ಐನಾಪುರ್, ಶ್ರೀಕಾಂತರೆಡ್ಡಿ ಪುಟ್ಟ, ಶಿವಕುಮಾರ್ ಪಾಟೀಲ್, ಜಗನಾಥ ಭೂರನಾಪುರ್, ಜಗದೀಶ್ ಬಿರಾದಾರ್, ಸಂಜೂಕುಮಾರ್ ಒಳಂಕಿ, ನಾಗೇಂದ್ರರಾವ ದಾಸ್, ಷಣ್ಮುಖಪ್ಪ ಭೂರನಾಪುರ್, ಪಿಂಟು ಬೆಳಕೇರಿ ಸೇರಿದಂತೆ ನೆರೆಯ ತೆಲಂಗಾಣ, ಆಂಧ್ರಪ್ರದೇಶ, ಮಹಾರಾಷ್ಟ್ರಗಳಿಂದ ಭಕ್ತರು ದೇವರ ದರ್ಶನ ಪಡೆದರು.

# ನಾಸೀರ್ ಹುಸೇನ್ ಗೆ ಅಭಿಮಾನಿಗಳ ಗೌರವ ಸನ್ಮಾನ



ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ, ಆ.28: ರಾಜ್ಯ ಸಭಸ ಸದಸ್ಯ ಡಾ.ಸೈಯದ್ ನಾಸೀರ್ ಹುಸೇನ್ ಅವರ 55 ನೇ ಹುಟ್ಟು ಹಬ್ಬದ ಅಂಗವಾಗಿ ಅವರಿಗೆ ಕುರುಗೋಡು ಭಾಗದ ಕಾಂಗ್ರೆಸ್ ಮುಖಂಡರು, ಬಳ್ಳಾರಿ ಗ್ರಾಮಾಂತರ ಜಿಲ್ಲಾ ಕಾಂಗ್ರೆಸ್ ಸಮಿತಿಯ ಹಿಂದುಳದ ವರ್ಗಗಳ ವಿಭಾಗದ ಅಧ್ಯಕ್ಷ ಕೆ.ಮಲ್ಲಿಕಾರ್ಜುನ ಮೊದಲಾದವರು ಗೌರವ ಸನ್ಮಾನ ಮಾಡಿ ಶುಭಕೋರಿದರು.

# ಗವಿಮಠದಲ್ಲಿ ವಿಶೇಷ ಉಪನ್ಯಾಸ ಮಾಲೆ ಸಮಾರೋಪ ಸಮಾರಂಭ

(ವರದಿ. ಡಿ. ಕೆ. ಪ್ರಹ್ಲಾದ ಜಿ.)

ಮಲ್ಲಮ್ಮ ನುಡಿ ವಾರ್ತೆ



ಬಸವಕಲ್ಯಾಣ : – ಆಧ್ಯಾತ್ಮ, ಸತ್ಸಂಗ,ಪ್ರವಚನ ದಲ್ಲಿ ಮನುಷ್ಯನ ಮನಸ್ಸಿಗೆ ನೆಮ್ಮದಿ ಸಿಗುತ್ತದೆ ಎಂದು ನಗರದ ಸಂಸ್ಥಾನ ಗವಿಮಠದ ಪೂಜ್ಯಶ್ರೀ ಷ. ಬ್ರ. ಡಾ. ಅಭಿನವ ಘನಲಿಂಗ ರುದ್ರಮುನಿ ಶಿವಾಚಾರ್ಯರು ನುಡಿದರು.

ಪವಿತ್ರ ಶ್ರಾವಣ ಮಾಸ ಅಂಗವಾಗಿ ಪ್ರತಿವರ್ಷದಂತೆ ನಗರದ ಶ್ರೀ ಜಗದ್ಗುರು ಘನಲಿಂಗ ರುದ್ರಮುನಿ ಶಿವಾಚಾರ್ಯ ಸಂಸ್ಥಾನ ಗವಿಮಠದಲ್ಲಿ ಗವಿಮಠ ಟ್ರಸ್ಟ್ ವತಿಯಿಂದ ಆಯೋಜಿಸಿದ್ದ ಸಿದ್ಧಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ಕುರಿತ ವಿಶೇಷ ಉಪನ್ಯಾಸ ಮಾಲೆ ಸಮಾರೋಪ ಸಮಾರಂಭದ ದಿವ್ಯಸಾನಿಧ್ಯ ವಹಿಸಿ ಆಶೀರ್ವಚನ ನೀಡಿದ ಪ್ರವಚನದಿಂದ ಸುವಿಚಾರಿಗಳು ಹಾಗೂ ಬದುಕಿಗೆ ಉಪಯುಕ್ತವಾದ ಸಾರ್ಥಕ ಸಂದೇಶವನ್ನು ಕೇಳಿ ಮನಸ್ಸು ಪವಿತ್ರವಾಗುತ್ತದೆ. ಸಂಸಾರಿಕ ಹಾಗೂ ವ್ಯವಹಾರಿಕ ಸಮಸ್ಯೆಗಳಿಗೆ ಸೌಹಾರ್ದಯುತ ಪರಿಹಾರ ಸಿಗುತ್ತದೆ ಹೀಗಾಗಿ ಶ್ರೀಮಠದಲ್ಲಿ ನಿರಂತರ ದಾಸೋಹ ಪೂಜೆ ಜಪ ಪ್ರವಚನ ಭಜನೆ ಹೀಗೆ ಹತ್ತು ಹಲವಾರು ಕಾರ್ಯಕ್ರಮಗಳು ನಿರಂತರವಾಗಿ ಜರುಗುತ್ತಿರುವುದು ಭಕ್ತ–ರಿಂದ ಭಕ್ತರ ಭಕ್ತಿ ದೊಡ್ಡದು ಎಂದು ಉಪದೇಶಿಸಿದರು.

ಮುಖ್ಯ ಅತಿಥಿಗಳಾಗಿ ಶಿಕ್ಷಕರಾದ ಮಲ್ಲಿಕಾರ್ಜುನ ಅಲಗುಡೆ ಮಾತನಾಡಿ ಹರ ಮುನಿದರೆ ಗುರು ಕಾಯುವನು ಗುರು ಮುನಿದರೆ ಹರ ಕಾಯಲಾರ ಗುರುವಿನಗಿಂತ ದೊಡ್ಡವರು ಯಾರು ಇಲ್ಲ ನಾವೆಲ್ಲರೂ ಕೂಡಿಕೊಂಡು ಗವಿಮಠದ ಬೆಳವಣಿಗೆಗೆ ಸನ್ನದ್ಧರಾಗೋಣ ನಾವ್ ಬರುವಾಗಲೂ ಏನು ತೆಗೆದುಕೊಂಡು ಬಂದಿಲ್ಲ ಹೋಗುವಾಗಲೂ ಏನು ತೆಗೆದು–ಕೊಂಡು ಹೋಗುವುದಿಲ್ಲ ಆದರೆ ಗವಿಮಠದ ಶ್ರೀ ಘನಲಿಂಗ ರುದ್ರಮುನಿ ಶಿವಯೋಗಿಗಳ ಆಶೀರ್ವಾದ ಪೂಜ್ಯ ಅಭಿನವ ಶ್ರೀಗಳ ಆಶೀರ್ವಾದ ನಮ್ಮ ಮೇಲೆ ಯಾವತ್ತು ಇರಲಿ ಎಂದು ಬೇಡಿಕೊಂಡರು.

ವಿಶೇಷ ಸನ್ಮಾನ ಸ್ವೀಕರಿಸಿದ ರಾಜೀವ್ ಗಾಂಧಿ ಕಾಲೇಜಿನ ಉಪನ್ಯಾಸಕರಾದ ಪ್ರೋ. ರುದ್ರೇಶ್ವರ ಗೋರ್ಟಾ ಮಾತನಾಡಿ ಒಂದು ತಿಂಗಳ ಪರಂತರವಾಗಿ ವಿಶೇಷ ಉಪನ್ಯಾಸಗಳು ಬಹಳ ಅದ್ದೂರಿಯಾಗಿ ಜರುಗಿದವು ಪರಮಪೂಜ್ಯರ ಆಶ್ರಯದಂತೆ ವಿಶೇಷ ಉಪನ್ಯಾಸಮಾಲೆಯು ಬಹಳ ಸುಸೂತ್ರವಾಗಿ ಅರ್ಥಪೂರ್ಣವಾಗಿ ಮೌಲ್ವಿಕವಾಗಿ ಜರುಗಿವೆ ಪರಮಪೂಜ್ಯರ ಸತ್ಯ ಸಂಕಲ್ಪ ಸಿದ್ದಾಂತ ಶಿಖಾಮಣಿ ಹಾಗೂ ವಚನ ಸಾಹಿತ್ಯ ವಿಶೇಷ ಉಪನ್ಯಾಸಮಾಲೆಯು ಪ್ರತಿ ವರ್ಷ ನಡೆಯುತ್ತಿರುವುದು ನಮ್ಮೆಲ್ಲರ ಹೆಮ್ಮೆ ನಾವು ಪರಮ ಪೂಜ್ಯರ ಜೊತೆ ಯಾವತ್ತೂ ಕೂಡ ಇದ್ದೇವೆ ಅವರು ತೆಗೆದುಕೊಳ್ಳುವಂತಹ ನಿರ್ಧಾರಕ್ಕೆ ನಾವು ಬದ್ಧರಾಗಿದ್ದೇವೆ ಎಂದು ನುಡಿದು ಕೃತಜ್ಞತೆ ಸಲ್ಲಿಸಿದರು.

ಅಧ್ಯಕ್ಷತೆ ವಹಿಸಿದ್ದ ನಿವೃತ್ತ ಜಲಾನಯನ ಅಧಿಕಾರಿಗಳಾದ ಬಸವಂತಪ್ಪ ಲವಾರೆ ಮಾತನಾಡಿ ಗವಿಮಠದಲ್ಲಿ ಒಂದು ಅದ್ಭುತವಾಗಿರುವಂತ ಶಕ್ತಿ ನಮ್ಮೆಲ್ಲರನ್ನ ಒಂದುಗೂಡಿಸುತ್ತಿದೆ ಇಲ್ಲಿ ಬಂದು ಸ್ವಲ್ಪ ಹೊತ್ತು ಕೂತಿದ್ದರೆ ಅವರ ಮನಸ್ಸಿಗೆ ನೆಮ್ಮದಿ ಸಿಗುತ್ತದೆ ಎಷ್ಟೇ ಕಷ್ಟ ತಾಪತ್ರೆಗಳು ಬಂದರೂ ಕೂಡ ಈ ಗವಿಮಠದ ಸ್ಥಳದಲ್ಲಿ ಅದ್ಭುತವಾಗಿರುವಂತ ಶಕ್ತಿ ಇದೆ ತಿಳಿದುಕೊಂಡವರಿಗಷ್ಟೇ ಗೊತ್ತು ಇಲ್ಲಿ ನಡೆದಿರುವಂತಹ ಭಕ್ತಾದಿಗಳಿಗೆ ಒಂದೊಂದು ಆಶೀರ್ವಾದ ಆಗಿವೆ ಅಂಥಹ ಒಂದು ಗುರುವಿನ ಸೇವೆ ನಾವು ನೀವೆಲ್ಲರೂ ಕೂಡ ಮಾಡುತ್ತಾ ಇರೋಣ ಎಂದು ನುಡಿದರು.

ಅತಿಥಿಯಾಗಿ ಅನೀಲಕುಮಾರ ಬಾಗೇವಾಡಿ ಮಾತನಾಡಿ ಗವಿಮಠ ಮೊದಲು ಕೂಡ ನೋಡಿದ್ದೇವೆ ಈಗಲೂ ನೋಡುತ್ತಿದ್ದೇವೆ ಮನುಷ್ಯ ಏನು ಬಯಸಿ ಬರುತ್ತಾನೊ ಅವನ ಕೆಲಸ ಸರಳ ಗೊಳ್ಳುವಲ್ಲಿ ಎರಡು ಮಾತಿಲ್ಲಾ ಅಂಧಕಾರದಲ್ಲಿ ಬಂದಂತಹ ವ್ಯಕ್ತಿಗಳಿಗೆ ಜ್ಞಾನದ ಮಾರ್ಗವನ್ನು ತಿಳಿಸುವಂತಹ ಪೂಜ್ಯರು ಅಭಿನವ ಶ್ರೀಗಳು ಅಂತವರು ನಮ್ಮ ನಿಮ್ಮೆಲ್ಲರಿಗೂ ಸಿಕ್ಕಿರುವಂಥದ್ದು ನಮ್ಮೆಲ್ಲರ ಭಾಗ್ಯ ಎಂದು ಸಂತಸ ವ್ಯಕ್ತಪಡಿಸಿದರು

ಅತಿಥಿಯಾಗಿ ರಾಕೇಶ ಪುರವಂತ.

ಪೂಜ್ಯಶ್ರೀಗಳು ಶ್ರೀಮಠದಲ್ಲಿ ಒಂದು ತಿಂಗಳ ಪರಿಯಂತರ ಪ್ರಸಾದ ಸೇವೆ, ರುದ್ರಾಭಿಷೇಕ ಪೂಜೆ, ಪೂಜ್ಯ ಗುರುಗಳ ಸೇವೆ ಮಾಡಿರುವಂತಹ ಸೇವಕರಿಗೆ ಸನ್ಮಾನಿಸಲಾಯಿತು,

ಬೇಲೂರ ಗ್ರಾಮದ ಭಜನಾ ಮಂಡಳಿಯಿಂದ ಭಜನೆ ಕಾರ್ಯಕ್ರಮ ಜರುಗಿತು.

ಅಭಿಷೇಕ ಶಿವಶಂಕರ ರಾಮಣ್ಣನವರ ಹಾಗೂ ಶರಣಬಸಪ್ಪ ಅಲಗುಡೆ ಮಂಗಲ ಗೀತೆ ಹಾಡಿದರು.

ಈ ಸಂದರ್ಭದಲ್ಲಿ ಬಾಪು ರಾಯ ಸಾಹುಕಾರ ಚನ್ನೂರ, ಲಿಂಗನಗೌಡ ಪೊಲೀಸ್ ಪಾಟೀಲ, ದೇವನಗೌಡ ಪಾಟೀಲ, ರುದ್ರಮುನಿ ಹಿರೇಮಠ, ಸಿದ್ದಲಿಂಗಪ್ಪ ಸಾಹುಕಾರ, ಶಿವಕುಮಾರ ಪಾಟೀಲ, ಪ್ರದೀಪ ಬಿರಾದಾರ, ಸರಸ್ವತಿ ಬೆಂಬಲಗೆ, ಶಕುಂತಲಾ ಮಠ, ಜ್ಯೋತಿ ಸಂಗಮೇಶ ಪಾಟೀಲ, ಸವಿತಾ ರಮೇಶ ಸ್ವಾಮಿ, ರೇಖಾ ಚಿಟ್ಟೆ, ಪ್ರೇಮಲಾ ರಾಮಣ್ಣಾ, ಸುರೇಖಾ ಸಜ್ಜನಶೆಟ್ಟಿ, ಪಾರ್ವತಿ ಶಂಕರ ರೋಜೆ, ಸುನೀತಾ ಸಂಗಪ್ಪಾ ಭಾಲ್ಕೆ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. ಸುಮಾರು ಭಕ್ತರು ಪಾಲ್ಗೊಂಡು ಗುರುಗಳ ದರ್ಶನ, ಆಶೀರ್ವಾದ ಪಡೆದು ಮಹಾ ಪ್ರಸಾದ ಸ್ವೀಕರಿಸಿದರು.

# ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಜಾಗೃತಿ ಕಾರ್ಯಕ್ರಮ




ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಅಧಿಕಾರಿಗಳ ಕಛೇರಿ, ಜಿಲ್ಲಾ ಅಂಧತ್ವ ನಿಯಂತ್ರಣಾಧಿಕಾರಿಗಳ ಕಛೇರಿ, ತಾಲೂಕಾ ಆರೋಗ್ಯಾಧಿಕಾರಿಗಳ ಕಛೇರಿ ಹಾಗೂ ಶ್ರೀ ಗವಿಸಿದ್ದೇಶ್ವರ ಆಯುರ್ವೇದಿಕ್ ಮೆಡಿಕಲ್ ಕಾಲೇಜ್, ಕೊಪ್ಪಳ ಇವರ ಸಂಯುಕ್ತಾಶ್ರಯದಲ್ಲಿ ಕಾಲೇಜಿನ ಸಭಾಭವನದಲ್ಲಿ ಆಗಸ್ಟ್ 26 ರಂದು ತಾಲೂಕಾ ಮಟ್ಟದ ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಜಾಗೃತಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು.

ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಜಿಲ್ಲಾ ಅಂ–ಧತ್ವ ನಿಯಂತ್ರಣಾಧಿಕಾರಿಗಳಾದ ಡಾ. ಪ್ರಕಾಶ ಹೆಚ್. ಇವರು ರಾಷ್ಟ್ರೀಯ ನೇತ್ರದಾನ ಪಾಕ್ಷಿಕ ಕಾರ್ಯಕ್ರಮವನ್ನು ಪ್ರತಿ ವರ್ಷ ಆಗಸ್ಟ್ 25 ರಿಂದ ಸೆಪ್ಟೆಂಬರ್ 8 ರವರೆಗೆ ಆಚರಿಸಲಾಗುತ್ತದೆ. ಈ ಕಾರ್ಯಕ್ರಮದ ಉದ್ದೇಶ ಸಾವಿನ ನಂತರ ಕಣ್ಣುಗಳನ್ನು ದಾನ ಮಾಡುವ ಕಾರ್ಯವನ್ನು ಉತೇ–ೀಜಿಸಿ, ಜಾಗೃತಿ ಮೂಡಿಸುವುದಾಗಿದೆ. ಇದು ಸಂಪೂರ್ಣವಾಗಿ ಒಂದು ದಾನದ ಕೆಲಸವಾಗಿದ್ದು, ಸಮಾಜದ ಪ್ರಯೋಜನಕ್ಕಾಗಿದೆ ಮತ್ತು ಇದು ಸಂಪೂರ್ಣ ಸ್ವ–ಇಚ್ಛೆಯಿಂದ ಕೂಡಿದೆ. ಸಾಧಾರಣ ಕಣ್ಣಿನ ದೃಷ್ಟಿ ಇಲ್ಲದವರಿಗೆ ಮತ್ತು ದಿನದ ಬೆಳಕನ್ನು ಎಂದೂ ನೋಡಿರಲಾರದ ಅಂ–ಧರಿಗೆ ದೃಷ್ಠಿ ನೀಡುವ ಅತ್ಯಂತ ಮಹತ್ವದ ಕೆಲಸವಾಗಿದೆ. ದಾನ ಮಾಡಲಾದ ಪ್ರತಿಯೊಂದು ಜೋಡಿ ಕಣ್ಣುಗಳಿಂದ ಇಬ್ಬರು ಅಂಧ ವ್ಯಕ್ತಿಗಳು ದೃಷ್ಠಿಯನ್ನು ಮತ್ತು ಅವರ ಜೀವನದಲ್ಲಿ ಬೆಳಕನ್ನು ಪಡೆಯುತ್ತಾರೆ. ಈ ಕಾರ್ಯ ನಿಜಕ್ಕೂ ಮಹತ್ತರವಾದದ್ದು. ನೇತ್ರದಾನದ ಪ್ರಾಮುಖ್ಯತೆ ಮತ್ತು ಮಹತ್ವಕ್ಕೆ ಹೆಚ್ಚು ಒತ್ತು ನೀಡಲು ಮತ್ತು ಅದರ ಪ್ರಯೋಜನವನ್ನು ಸಮುದಾಯಲ್ಲಿರುವ ಅಂಧರಿಗೆ ಒದಗಿಸಲು ದೇಶಾದ್ಯಂತ ವಿವಿಧ ಪಟ್ಟದಲ್ಲಿ ಸರ್ಕಾರಿ, ಖಾಸಗಿ ಸಂಘಟನೆಗಳು, ಆಸ್ಪತ್ರೆಗಳು, ವೈದ್ಯಕೀಯ ಕಾಲೇಜುಗಳು ಮತ್ತು ಇತರ ಪಾಲುದಾರರು ಈ ಜಾಗೃತಿ ಕಾರ್ಯಕ್ರಮವನ್ನು ಕೈಗೊಂಡು, ಅರಿವು ಮೂಡಿಸಲಾಗುತ್ತದೆ. ಎಲ್ಲಾ ದಾನಕ್ಕಿಂತ ನೇತ್ರದಾನ ಮಾಹಾದಾನವಾಗಿದೆ. ನಿಮ್ಮ ನೇತ್ರಗಳು ಸದಾ ಜೀವಂತವಾಗಿರಲಿ ನೇತ್ರದಾನ ಮಾಡಿ, ಅಂಧರ ಬಾಳಿಗೆ ಬೆಳಕಾಗಿ ಎಂದು ವಿದ್ಯಾರ್ಥಿಗಳಿಗೆ ಕರೆ ನೀಡಿದರು.

ತಾಲೂಕಾ ಆರೋಗ್ಯಾಧಿಕಾರಿಗಳಾದ ಡಾ. ರಾಮಾಂಜನೇಯ ಅವರು ಮಾತನಾಡಿ, ಅಂಗಾಂಗ ದಾನ ಮಹಾದಾನ. ಮೆದುಳು ನಿಷ್ಕ್ರಿಯಗೊಂಡ ಒಬ್ಬ ಮನುಷ್ಯನ ಅಂಗಾಂಗಗಳು 8 ಜನರ ಜೀವನಕ್ಕೆ ಬೆಳಕಾಗುತ್ತವೆ. ರಾಷ್ಟ್ರೀಯ ಅಂಧತ್ವ ನಿಯಂತ್ರಣ ಕಾರ್ಯಕ್ರಮದಡಿಯಲ್ಲಿ ಕಾರ್ನಿಯ ದಾನ ಮತ್ತು ಕಸಿ ಕುರಿತು ಜಾಗೃತಿ ಮೂಡಿಸುವುದು ನೇತ್ರದಾನ ಪಾಕ್ಷಿಕ ಕಾರ್ಯಕ್ರಮದ ಉದ್ದೇಶವಾಗಿದೆ. ಪ್ರತಿ ವರ್ಷ ರಾಜ್ಯದಲ್ಲಿ ಸರಾಸರಿ 5,600 ಕಣ್ಣುಗಳನ್ನು ದಾನ ಮಾಡಲಾಗುತ್ತದೆ. ದೇಶಾದ್ಯಂತ 1.25 ಲಕ್ಷ ಜನರು ನೇತ್ರದಾನಿಗಳಾಗಿ ಕಾಯುತ್ತಿದ್ದಾ–ರೆ. ಕರ್ನಾಟಕದಲ್ಲಿ 48 ಕಣ್ಣಿನ ಬ್ಯಾಂಕ್‌ಗಳು ಕಾರ್ಯನಿರ್ವಹಿಸುತ್ತಿದ್ದು, ಅದರಲ್ಲಿ 8 ಬ್ಯಾಂಕ್‌ಗಳು ಸರ್ಕಾರಿ ವಲಯಗಳಲ್ಲಿವೆ. ಯಾವುದೇ ವಯಸ್ಸು, ಲಿಂಗ, ಧರ್ಮ ಅಥವಾ ರಕ್ತದ ಗುಂಪಿನ ಬೇಧವಿಲ್ಲದೆ ಯಾರಾದರೂ ಕಣ್ಣುಗಳನ್ನು ದಾನ ಮಾಡಬಹುದು. ಕಣ್ಣುಗಳ ಸಂಗ್ರಹಕ್ಕೆ ಕೇವಲ 20 ನಿಮಿಷ ಬೇಕಾಗುತ್ತದೆ ಮತ್ತು ಇದು ಮುಖದ ಚಹರೆಯನ್ನು ಬದಲಿಸುವುದಿಲ್ಲ. ಮರಣದ ಆರು ಗಂಟೆಯೊಳಗೆ ಕಣ್ಣುಗಳನ್ನು ಸಂಗ್ರಹಿಸಬೇಕು, ಮರಣದ ನಂತರ ಮಾತ್ರ ದಾನವನ್ನು ಮಾಡಲು ಸಾಧ್ಯ. ನಮ್ಮ ಮರಣದ ನಂತರವೂ ನಮ್ಮ ಕಣ್ಣುಗಳು ಇತರರಿಗೆ ಸಹಾಯವಾಗಲೆಂದು ತಿಳಿಸಿದರು. ಧೂಮಪಾನ, ಮದ್ಯಪಾನ ಹಾಗೂ ಆಲ್ಕೋಹಾಲ್ ಸೇವನೆಯಿಂದ ಆರೋಗ್ಯದ ಮೇಲಾಗುವ ದುಷ್ಪರಿಣಾಮಗಳ ಕುರಿತು ಜಾಗೃತಿ ಮೂಡಿಸಬೇಕು. ಈ ವಿಷಯದ ಬಗ್ಗೆ ಪ್ರತಿಯೊಬ್ಬ ವಿದ್ಯಾರ್ಥಿಗಳು ತಮ್ಮ ಸುತ್ತ–ಮುತ್ತಲಿನ ಸಾರ್ವಜನಿಕರಿಗೆ ಅರಿವು ಮೂಡಿಸುವಂತೆ ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶ್ರೀ ಗವಿಸಿದ್ದೇಶ್ವರ ಆಯುರ್ವೇದಿಕ ಮೆಡಿಕಲ್ ಕಾಲೇಜಿನ ಪ್ರಾಂಶುಪಾಲರಾದ ಡಾ. ಮಹಾಂತೇಶ ಸಾಲಿಮಠ ಅವರು ಮಾತನಾಡಿ, ನೇತ್ರದಾನ ಮಾಡುವುದು ಮತ್ತು ಮಾಡಿಸುವುದು ಪ್ರತಿಯೊಬ್ಬ ವಿದ್ಯಾರ್ಥಿಯ ಜವಾಬ್ದಾರಿ. ಇಲಾಖೆಗಳು ಜಾಗೃತಿ ಮೂಡಿಸಿದರೆ ಸಾಲದು, ಜನಪ್ರತಿನಿಧಿಗಳು, ಸಂಘ ಸಂಸ್ಥೆಗಳಿಂದ ನಿರಂತರ ಅರಿವು ಮೂಡಿಸಬೇಕು. ಆರೋಗ್ಯ ಇಲಾಖೆಯ ಜಾಗೃತಿ ಕಾರ್ಯಕ್ರಮಗಳು ಬಹಳಷ್ಟು ಉಪಯುಕ್ತವಾಗಿವೆ. ಇದರ ಸದುಪಯೋಗ ಪಡೆದುಕೊಳ್ಳುವಂತೆ ವಿದ್ಯಾರ್ಥಿಗಳಿಗೆ ತಿಳಿಸಿದರು. ಕಾರ್ಯಕ್ರಮದಲ್ಲಿ ಜಿಲ್ಲಾ ಆರೋಗ್ಯ ಶಿಕ್ಷಣಾಧಿಕಾರಿಗಳಾದ ಶಿವಾನಂದ ವ್ಹಿ.ಪಿ, ನ.ಪ್ರಾ.ಆ.ಕೇಂದ್ರದ ವೈದ್ಯಾಧಿಕಾರಿಗಳಾದ ಡಾ. ಮಹೇಶ ಉಮಚಗಿ, ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ಶಶಿಕಲಾ, ಡಾ. ಅನಿತಾ, ಡಾ. ಗುರುರಾಜ, ಡಾ. ಪ್ರೀತಿ, ವಿದ್ಯಾರ್ಥಿಗಳು ಹಾಗೂ ಸಿಬ್ಬಂದಿಗಳು ಭಾಗವಹಿಸಿದ್ದರು.

### ಪುನರ್ವಸತಿ ಕಾರ್ಯಕರ್ತರ ಖಾಲಿ ಹುದ್ದೆ

## ಗೌರವಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ವಿಕಲಚೇತನರಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 28– ಯಾದಗಿರಿ ಜಿಲ್ಲೆಯ ಗುರುಮಠಕಲ್ ತಾಲೂಕಿನ ಕಿಲನಕೇರಾ, ಕಡೆಚೂರು ಗ್ರಾಮ ಪಂಚಾಯತ್‌ನಲ್ಲಿ ಗ್ರಾಮೀಣ ಪುನರ್ವಸತಿ ಯೋಜನೆಯಡಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ಗೌರವಧನ ಆಧಾರದ ಮೇಲೆ ಕರ್ತವ್ಯ ನಿರ್ವಹಿಸಲು ಆಸಕ್ತಿಯುಳ್ಳ ವಿಕಲಚೇತನರಿಂದ ಅರ್ಜಿ ಆಹ್ವಾನಿಸಲಾಗಿದೆ ಎಂದು ಯಾದಗಿರಿ ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಕಲ್ಯಾಣಾಧಿಕಾರಿ ಶರಣಪ್ಪ ಅವರು ತಿಳಿಸಿದ್ದಾರೆ.

ಕಿಲನಕೇರಾ, ಕಡೇಚೂರು ಗ್ರಾಮ ಪಂಚಾಯತ್ ಕಛೇರಿಯಲ್ಲಿ ಖಾಲಿ ಇರುವ ಗ್ರಾಮೀಣ ಪುನರ್ವಸತಿ ಕಾರ್ಯಕರ್ತರ ಸ್ಥಾನಕ್ಕೆ ತಾತ್ಕಾಲಿಕ ಗೌರವ ಧನ ಆಧಾರದ ಮೇಲೆ ಕಾರ್ಯನಿರ್ವಹಿಸಲು ಕಿಲನಕೇರಾ, ಕಡೆಚೂರು ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ವಾಸಿಸುತ್ತಿರುವ ಅರ್ಹ ವಿಕಲಚೇತನರಿಂದ ಅರ್ಜಿ ಆಹ್ವಾನಿಸಿದೆ.

**ದಾಖಲೆಗಳು:** ಎಸ್.ಎಸ್.ಎಲ್.ಸಿ ಅಂಕಪಟ್ಟಿ, ಶಾಲಾ ವರ್ಗಾವಣಾ ಪ್ರಮಾಣ ಪತ್ರ ಸಲ್ಲಿಸಬೇಕು, ವಿಕಲಚೇತನ ಗುರುತಿನ ಪ್ರಮಾಣ ಪತ್ರ, ತಹಸೀಲ್ದಾರರಿಂದ ಪಡೆದ ವಾಸಸ್ಥಳ ಪ್ರಮಾಣ ಪತ್ರ, ಜಾತಿ ಮತ್ತು ಆದಾಯ ಪ್ರಮಾಣ ಪತ್ರ, 1 ಪೋಟೋ ಸಲ್ಲಿಸಬೇಕು, 2025ರ ಸೆಪ್ಟೆಂಬರ್ 6ರ ಒಳಗೆ ಸಂಜೆ 5.30 ಗಂಟೆಯ ಒಳಗೆ ಅರ್ಜಿ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಕೊಠಡಿ ಸಂಖ್ಯೆ ಬಿ11, ಬಿ12, ನೆಲಮಹಡಿ, ಜಿಲ್ಲಾಡಳಿತ ಭವನ, ಯಾದಗಿರಿಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾರ್ಚ್ 31ಕ್ಕೆ ಸ್ಥಗಿತಗೊಂಡಿರುವ ಸೌಹಾರ್ದ ಸಹಕಾರಿ ಸಮಾಪನೆ : ಆಕ್ಷೇಪಣೆ ಅರ್ಜಿ ಅವಕಾಶ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಆಗಸ್ಟ್ 28– ಯಾದಗಿರಿ ಜಿಲ್ಲೆಯಲ್ಲಿ 2025ರ ಮಾರ್ಚ್ 31ಕ್ಕೆ ಸ್ಥಗಿತಗೊಂಡಿರುವ ಸೌಹಾರ್ದ ಸಹಕಾರಿಗಳನ್ನು ಸಮಾಪನೆಗೊಳಿಸಲಾಗುತ್ತಿದ್ದು, ಆಕ್ಷೇಪಣೆ ಅರ್ಜಿ ಅವಕಾಶ ಕಲ್ಪಿಸಿದೆ ಎಂದು ಸಹಕಾರ ಸಂಘಗಳ ಉಪ ನಿಬಂಧಕರು ಅವರು ತಿಳಿಸಿದ್ದಾರೆ.

ಯಾದಗಿರಿ ಜಿಲ್ಲೆಯ ಸಹಕಾರಿಗಳ ಸದಸ್ಯರುಗಳಿಗೆ ಮತ್ತು ಸಾರ್ವಜನಿಕರಿಗೆ ಗಮನಕ್ಕೆ 2025ರ ಮಾರ್ಚ್ 31ಕ್ಕೆ ಇದ್ದಂತೆ ಒಟ್ಟು 3 ವಿವಿಧ ರೀತಿಯ ಸಹಕಾರಿಗಳು ಕರ್ನಾಟಕ ಸೌಹಾರ್ದ ಸಹಕಾರಿ ಕಾಯ್ದೆ 1997ರ ಅಡಿಯಲ್ಲಿ ನೋಂದಣಿಗೊಂಡು ಸಂಘದ ಬೈಲಾ ರಿತ್ಯ ಕಾರ್ಯನಿರ್ವಹಿಸದೆ ಇರುವುದರಿಂದ ಸ್ಥಗಿತಗೊಂಡಿರುತ್ತದೆ, ಈ ಸ್ಥಗಿ–ತಗೊಂಡ ಸಹಕಾರಿಗಳನ್ನು ಸಮಾಪನೆ ಮಾಡಲು ಕ್ರಮವಹಿಸಲಾಗುತ್ತಿದೆ, ಈ ಬಗ್ಗೆ ತಮ್ಮ ಆಕ್ಷೇಪಣೆಗಳು ಏನಾದರೂ ಇದ್ದಲ್ಲಿ ಸಹಕಾರ ಸಂಘಗಳ ಉಪ ನಿಬಂಧಕರು ಯಾದಗಿರಿ, ಸಹಕಾರ ಸಂಘಗಳ ಸಹಾಯಕ ನಿಬಂಧಕರ ಕಛೇರಿ ಯಾದಗಿರಿ ಇಲ್ಲಿಗೆ ದಾಖಲಾತಿಗಳೊಂದಿಗೆ ಈ ಪ್ರಕಟಣೆ ಹೊರಡಿಸಿದ 15 ದಿನಗಳ ಒಳಗೆ ಸಲ್ಲಿಸಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ತಹಶೀಲ್ದಾರ್ ಕಚೇರಿಗೆ ಉಪ ಲೋಕಾಯುಕ್ತರು ದಿಢೀರ್ ಭೇಟಿ; ಪರಿಶೀಲನೆ




ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 28 :ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ರಾಯಚೂರ ಜಿಲ್ಲಾ ಪ್ರವಾಸದ ವೇಳೆಯಲ್ಲಿ ತಹಸೀಲ್ದಾರ್ ಕಚೇರಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದರು. ಮೊದಲಿಗೆ ಕಚೇ–ರಿಯ ಸಿಬ್ಬಂದಿಯ ಹಾಜರಾತಿ ಪುಸ್ತಕ ಪರಿಶೀಲಿಸಿದರು. ಸುಧೀರ್ಘ ರಜೆ ಇರುವವರಿಗೆ ನೋಟಿಸ್ ನೀಡಲು ಸೂಚನೆ ನೀಡಿದರು.

ಎಲ್ಲ ಸಿಬ್ಬಂದಿಯು ಸರಿಯಾದ ಸಮಯಕ್ಕೆ ಕಚೇರಿಗೆ ಹಾಜರಾಗಬೇಕು. ಕಚೇರಿಯಲ್ಲಿ ಬಯೋಮೆಟ್ರಿಕ್ ಕಡ್ಡಾಯ ಬಳಸಬೇಕು. ಇದು ಪ್ರತಿ ದಿನ ಪಾಲನೆಯಾಗಬೇಕು ಎಂದು ಸಿಬ್ಬಂದಿಗೆ ತಿಳಿಸಿದರು.

ಕೆಲ ಸಿಬ್ಬಂದಿಯ ಬ್ಯಾಂಕು ವಾಹಿವಾಟಿನ ವಿವರವನ್ನು ಇದೆ ವೇಳೆ ಲೋಕಾಯುಕ್ತರು ಪರಿಶೀಲಿಸಿದರು.

ತಹಸೀಲ್ದಾರ್ ಕಚೇರಿಯಲ್ಲಿ ಬಾಕಿ ಇರುವ ಕೆಲವು ಕಡತಗಳನ್ನು ಬೇಗನೆ ವಿಲೇವಾರಿ ಮಾಡಬೇಕು. ಕಚೇರಿ ವ್ಯಾಪ್ತಿಯ ರೈತರು ಕೇಳಿರುವ ಮಾಹಿತಿಯನ್ನು ನಿಗಧಿತ ಸಮಯದಲ್ಲಿ ಅವರಿಗೆ ನೀಡಬೇಕು. ಒಂದು ವೇಳೆ ನಿರ್ಲಕ್ಷ್ಯ ಮಾಡಿದಲ್ಲಿ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಉಪ ಲೋಕಾಯುಕ್ತರು ಎಚ್ಚರಿಕೆ ನೀಡಿದರು.

## ನಾಲಂದಾ ಪ್ರೌಢ ಶಾಲೆ ಮಕ್ಕಳು ತಾಲೂಕು ಮಟ್ಟಕ್ಕೆ ಆಯ್ಕೆ




ಮಲ್ಲಮ್ಮ ನುಡಿ ವಾರ್ತೆ

ಔರಾದ(ಬಾ) : 2025 – 26 ನೇಯ ಶೈಕ್ಷಣಿಕ ವರ್ಷದ ಪ್ರೌಢ ಶಾಲಾ ವಿಭಾಗದಲ್ಲಿ ಔರಾದ(ಬಾ) ಹೋಬಳಿ ಮಟ್ಟದ [ಔರಾದ(ಬಾ) ಪೂರ್ವ ಮತ್ತು ಪಶ್ಚಿಮ ವಲಯ ಮಟ್ಟದ] ವಿವಿಧ ಕ್ರೀಡೆಗಳಲ್ಲಿ ಪಟ್ಟಣದ ನಾಲಂದಾ ಪ್ರೌಢ ಶಾಲೆ ಮಕ್ಕಳು ಅಪ್ರತಿಮ ಸಾಧನೆಗೈದು, ತಾಲೂಕು ಮಟ್ಟಕ್ಕೆ ಆಯ್ಕೆಯಾಗಿದ್ದಾರೆ.

ಹೋಬಳಿ ಮಟ್ಟದಲ್ಲಿ ಏರ್ಪಡಿಸಿದ್ದ ಕಬ್ಬಡ್ಡಿ ಮತ್ತು ಖೋ – ಖೋ ಉಭಯ ಆಟಗಳಲ್ಲಿ ಬಾಲಕರು ಪರಸ್ಪರ ಎದುರಾಳಿ ತಂಡದೊಂದಿಗೆ ಜಿದ್ದಾಜಿದ್ದಿನಿಂದ ಸೆಣಸಾಡಿ ಪ್ರಥಮ ಸ್ಥಾನಗಳಿಸಿದರೆ, ಇನ್ನು ಬಾಲಕಿಯರು ನಾವೇನೂ ಕಮ್ಮಿ ಇಲ್ಲ ಎಂಬಂತೆ ಕಬ್ಬಡ್ಡಿಯಲ್ಲಿ ಪ್ರಥಮ ಸ್ಥಾನ ಗಳಿಸಿ ಎಲ್ಲರ ಮೆಚ್ಚುಗೆಗೆ ಪಾತ್ರರಾಗಿದ್ದಾರೆ. ಅಥ್ಲೇಟಿಕ್ಸ್ ಆಟಗಳಾದ 100 ಮೀ. ಓಟದಲ್ಲಿ ಸಂದೀಪ್ ಉದ್ಧವ್ ಗೆ ಪ್ರಥಮ, 200 ಮೀ. ಓಟದಲ್ಲಿ ಆಕಾಶ ದೇವಿದಾಸ ಪ್ರಥಮ ಮತ್ತು ರಾಮೇಶ್ವರ ರಮೇಶ ದ್ವಿತೀಯ ಸ್ಥಾನ ಪಡೆದಿದ್ದಾರೆ. ಶಾಟ್ಪುಟ್ ಎಸೆತದಲ್ಲಿ ಆಕಾಶ ದೇವಿದಾಸ ಪ್ರಥಮ ಸ್ಥಾನ ಬಾಚಿಕೊಂಡಿದ್ದು ಮತ್ತೊಂದು ವಿಶೇಷ. ಇನ್ನು ಬಾಲಕಿಯರ 3,000 ಮೀ. ಓಟದಲ್ಲಿ ಶೋಭಾ ಸಂತೋಷ ಪ್ರಥಮ ಹಾಗೂ 1,600 ಮೀ. ಓಟದಲ್ಲೂ ಈಕೆಯೇ ದ್ವಿತೀಯ ಸ್ಥಾನದಗರಿ ಮುಡಿಗೇರಿಸಿಕೊಂಡಿದ್ದಾಳೆ. ಬಾಲಕಿಯರ ಕುಸ್ತಿಯಲ್ಲೂ ಶೋಭಾ ಸಂತೋಷ ಎದುರಾಳಿಗೆ ಮಣ್ಣು ಮುಕ್ಕಿಸಿ ಛಲ ಬಿಡದೆ ಹೋಬಳಿ ಮಟ್ಟದಲ್ಲಿ ಪ್ರಥಮ ಸ್ಥಾನಗಿಟ್ಟಿಸಿಕೊಂಡು ಶಾಲೆಗೆ ಕೀರ್ತಿ ತಂದು ಕೊಟ್ಟಿದ್ದಾಳೆ, ಭವಿಷ್ಯದಲ್ಲೂ ಸಹ ರಾಜ್ಯ, ರಾಷ್ಟ್ರ ಹಾಗೂ ಅಂತರರಾಷ್ಟ್ರೀಯ ಮಟ್ಟದಲ್ಲೂ ಅಪ್ರತಿಮ ಸಾಧನೆ ಮೇರೆಯಲೆಂದು ಹಗಲಿರುಳೆನ್ನದೆ ಕಠಿಣಾತೀಕಠಿಣ ಪರಿಶ್ರಮದಲ್ಲಿ ತೊಡಗಿರುವ ಈ ಬಾಲೆ ಶೋಭಾ ಇದೀಗ ಎಲ್ಲರಿಂದಲೂ ಸೈ ಎನಿಸಿಕೊಂಡು ತಾನು ಇಟ್ಟುಕೊಂಡಿರುವ ಕನಸನ್ನು ನನಸಾಗಿಸಲೆಂದೇ ಗು–ರಿಯ ಬೆನ್ನಟ್ಟಿದ್ದಾಳೆ.

ಮಕ್ಕಳನ್ನು ಮಾನಸಿಕವಾಗಿ ಉತ್ತೇಜಿಸಿ, ಸಾಕಷ್ಟು ವಿಶೇಷ ತರಬೇತಿಯನ್ನು ಆಯೋಜಿಸುತ್ತಲೇ, ಸಕರಾತ್ಮಕವಾಗಿ ಮಾರ್ಗದರ್ಶನ ನೀಡಿರುವುದರ ಜತೆಗೆ ವಿವಿಧ ಕ್ರೀಡೆಗಳಲ್ಲಿ ದಿಗ್ವಿಜಯ ಸಾಧಿಸಲು ಕ್ರೀಡಾಕ್ಷೇತ್ರದಲ್ಲಿ ಸದಾ ಕ್ರೀಯಾಶೀಲ ದೈಹಿಕ ಶಿಕ್ಷಕರಾಗಿರುವ ಸುನೀಲಕುವಾರ.ಬಿ.ವಾಗಮೋಡೆಯವರ ಅವಿರತ ಪರಿಶ್ರಮವೇ ಮಕ್ಕಳ ಸಾಧನೆಗೆ ಸ್ಪೂರ್ತಿ ಎಂದು ಎಸ್.ಪಿ.ಕೆ ಸಂಸ್ಥೆಯ ಅಧ್ಯಕ್ಷರಾದ ಕೆ. ಪುಂಡಲೀಕರಾವ ಶೆಟ್ಟೀಬಾ ಶ್ಲಾಘೀಸಿದರು.

ಪ್ರೌಢ ಶಾಲೆಯ ಮುಖ್ಯಗುರು ಶ್ರೀ ಜಗನ್ನಾಥ.ಎಸ್.ಬಿರಾದಾರ ಕ್ರೀಡಾಸಾಧಕ ವಿದ್ಯಾರ್ಥಿಗಳಿಗೆ ಸಿಹಿ ಹಂಚಿ, ಹೂಗುಚ್ಛ ನೀಡಿ ಶುಭ ಹಾರೈಸಿದರು. ಸಹ ಶಿಕ್ಷಕರಾದ ದಿಲೀಪಕುಮಾರ. ಎಸ್.ಮೇತ್ರೆ, ಮಲ್ಲಿಕಾರ್ಜುನ.ವ್ಹಿ. ಕೋಟೆ, ಪರಮೇಶ್ವರ.ಬಿ.ಬಿರಾದಾರ, ಸಿದ್ಧಾರ್ಥ.ಜೆ.ಕಾಂಬಳೆ, ಬಾಲಾಜಿ ರಣವೀರಕರ್, ಅಸ್ಪಾಕಮಿಯ್ಯಾ. ಎಸ್.ಬೇಗ್ ಹಾಗೂ ಸಹ ಶಿಕ್ಷಕಿಂ–ಯರಾದ ಪ್ರೀಯಾ.ಎಮ್.ಬಿರಾದಾರ, ಜ್ಯೋತಿ.ಡಿ.ಘೂಳೆ, ಮುಂಡೆ.ಜ್ಞಾನೇಶ್ವರಿ. ಎಸ್ ಹಾಗೂ ಬೋಧಕೇತರ ಸಿಬ್ಬಂಧಿ ವರ್ಗದವರು ಮಕ್ಕಳ ಸಾಧನೆಗೆ ಹರ್ಷಿಸಿ, ಮನದುಂಬಿ ಅಭಿನಂದಿಸಿದರು.

## ತಹಶೀಲ್ದಾರ್ ಕಚೇರಿಗೆ ಉಪ ಲೋಕಾಯುಕ್ತರು ದಿಢೀರ್ ಭೇಟಿ; ಪರಿಶೀಲನೆ

ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಆಗಸ್ಟ್ 28 :ಉಪ ಲೋಕಾಯುಕ್ತರಾದ ಬಿ.ವೀರಪ್ಪ ಅವರು ರಾಯಚೂರ ಜಿಲ್ಲಾ ಪ್ರವಾಸದ ವೇಳೆಯಲ್ಲಿ ತಹಸೀಲ್ದಾರ್ ಕಚೇರಿಗೆ ದಿಢೀರ್ ಭೇಟಿ ನೀಡಿ ಪರಿಶೀಲನೆ ಮಾಡಿದರು.

ಮೊದಲಿಗೆ ಕಚೇರಿಯ ಸಿಬ್ಬಂದಿಯ ಹಾಜರಾತಿ ಪುಸ್ತಕ ಪರಿಶೀಲಿಸಿದರು. ಸುಧೀರ್ಘ ರಜೆ ಇರುವವರಿಗೆ ನೋಟಿಸ್ ನೀಡಲು ಸೂಚನೆ ನೀಡಿದರು.

ಎಲ್ಲ ಸಿಬ್ಬಂದಿಯು ಸರಿಯಾದ ಸಮಯಕ್ಕೆ ಕಚೇರಿಗೆ ಹಾಜರಾಗಬೇಕು. ಕಚೇರಿಯಲ್ಲಿ ಬಯೋಮೆಟ್ರಿಕ್ ಕಡ್ಡಾಯ ಬಳಸಬೇಕು. ಇದು ಪ್ರತಿ ದಿನ ಪಾಲನೆಯಾಗಬೇಕು ಎಂದು ಸಿಬ್ಬಂದಿಗೆ ತಿಳಿಸಿದರು.

ಕೆಲ ಸಿಬ್ಬಂದಿಯ ಬ್ಯಾಂಕು ವಾಹಿವಾಟಿನ ವಿವರವನ್ನು ಇದೆ ವೇಳೆ ಲೋಕಾಯುಕ್ತರು ಪರಿಶೀಲಿಸಿದರು.

ತಹಸೀಲ್ದಾರ್ ಕಚೇರಿಯಲ್ಲಿ ಬಾಕಿ ಇರುವ ಕೆಲವು ಕಡತಗಳನ್ನು ಬೇಗನೆ ವಿಲೇವಾರಿ ಮಾಡಬೇಕು. ಕಚೇರಿ ವ್ಯಾಪ್ತಿಯ ರೈತರು ಕೇಳಿರುವ ಮಾಹಿತಿಯನ್ನು ನಿಗಧಿತ ಸಮಯದಲ್ಲಿ ಅವರಿಗೆ ನೀಡಬೇಕು. ಒಂದು ವೇಳೆ ನಿರ್ಲಕ್ಷ್ಯ ಮಾಡಿದಲ್ಲಿ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಕ್ರಮ ಜರುಗಿಸಲಾಗುವುದು ಎಂದು ಉಪ ಲೋಕಾಯುಕ್ತರು ಎಚ್ಚರಿಕೆ ನೀಡಿದರು.

### ರಾಜ್ಯದ ಜಲಮೂಲಗಳ ಸಮಗ್ರ ನಿರ್ವಹಣೆಗೆ ಉಪಗ್ರಹ ಹಾಗೂ ಎಐ ತಂತ್ರಜ್ಞಾನದ

## ಡಿಜಿಟಲ್ ವಾಟರ್ ಸ್ಟಾಕ್ ಅಳವಡಿಕೆ: ಸಚಿವರಾದ ಎನ್ ಎಸ್ ಭೋಸರಾಜು

ಬೆಂಗಳೂರು ಆಗಸ್ಟ್ 28: ರಾಜ್ಯದಲ್ಲಿರುವ ಜಲಮೂಲಗಳ ಸಮಗ್ರ ನಿರ್ವಹಣೆ ಹಾಗೂ ನೀರಿನ ನಿರ್ವಹಣೆಯಲ್ಲಿ ಪಾರದರ್ಶಕತೆ ಮತ್ತು ಹೊಣೆಗಾರಿಕೆಯನ್ನು ತರುವ ನಿಟ್ಟಿನಲ್ಲಿ ಉಪಗ್ರಹ ದತ್ತಾಂಶ ಹಾಗೂ ಎಐ ತಂತ್ರಜ್ಞಾನ ಆಧಾರಿತ ಡಿಜಿಟಲ್ ವಾಟರ್ ಸ್ಟಾಕ್ ಯೋಜನೆ ಅಳವಡಿಸಲು ಚಿಂತನೆ ನಡೆಸಲಾಗುತ್ತಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದ್ದಾರೆ.

ಈ ಬಗ್ಗೆ ಮಾಧ್ಯಮ ಪ್ರಕಣೆಯನ್ನು ನೀಡಿರುವ ಅವರು, ರಾಜ್ಯದ ಹಲವಾರು ಜಿಲ್ಲೆಗಳಲ್ಲಿ ಅಂತರ್ಜಲದ ಮಟ್ಟ ಕುಸಿತಗೊಂಡಿರುವ ಹಾಗೆಯೇ, ನೀರಿನ ಲಭ್ಯತೆ ಅಸಮರ್ಪಕವಾಗಿರುವ ಸಂಧರ್ಭದಲ್ಲಿ ದೇಶದಲ್ಲೆ ಮೊದಲ ಬಾರಿಗೆ, ಕರ್ನಾಟಕ ಸರ್ಕಾರ 'ಡಿಜಿಟಲ್ ವಾಟರ್ ಸ್ಟಾಕ್' (ಆಘಖ) ಎಂಬ ನೂತನ ತಂತ್ರಜ್ಞಾನ ಆಧಾರಿತ ನೀರಿನ ನಿರ್ವಹಣಾ ವೇದಿಕೆಯನ್ನು ಅನುಷ್ಠಾನಗೊಳಿಸುತ್ತಿದೆ.

ಕರ್ನಾಟಕ ಟ್ಯಾಂಕ್ ಸಂರಕ್ಷಣಾ ಮತ್ತು ಅಭಿವೃದ್ಧಿ ಪ್ರಾಧಿಕಾರ (KTCDA) ಈ ಯೋಜನೆಯಲ್ಲಿ ಪ್ರಮುಖ ಪಾತ್ರವಹಿಸಲಿದ್ದು, ರಾಜ್ಯದ ಕೆರೆಗಳು ಮತ್ತು ಇನ್ನಿತರ ಜಲಮೂಲಗಳನ್ನು ಡಿಜಿಟಲ್ ವಾಟರ್ ಸ್ಟಾಕ್ (ಆಘಖ) ಚಟುವಟಿಕೆ ಅಡಿಯಲ್ಲಿ ಸಮರ್ಪಕವಾಗಿ ಸರ್ವೇ ಸೇರಿದಂತೆ ಮೇಲ್ವಿಚಾರಣೆ ಹಾಗೂ ಅವುಗಳನ್ನು ಸಮರ್ಪಕವಾಗಿ ನಿರ್ವಹಿಸುವುದನ್ನು ಖಚಿತಪಡಿಸಲಿದೆ.

ಉಪಗ್ರಹ ಸೆನ್ಸಾರ್ ಹಾಗೂ ಇಮೇಜಿಂಗ್ ಮತ್ತು ಕೃತಕ ಬುದ್ಧಿಮತ್ತೆ (ಂಖ) ತಂತ್ರಜ್ಞಾನಗಳ ಮೂಲಕ ರಾಜ್ಯದ ಸರೋವರಗಳು, ಕೆರೆಗಳು ಮತ್ತು ಭೂಗರ್ಭದ ಜಲಧಾರೆಗಳ (ಚಿಡಣುಜಿಜಡಿ) ಗಳ ಸಮಗ್ರ ನಿರ್ವಹಣೆಯ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇದಾಗಿದೆ. ವಿವಿಧ ಇಲಾಖೆಗಳಲ್ಲಿ ಹಂಚಿಹೋಗಿರುವ ಜಲಮೂಲಗಳ ದತ್ತಾಂಶಗಳನ್ನು ಒಗ್ಗೂಡಿಸುವ ಮೂಲಕ ಒಂದೇ ವೇದಿಕೆಯಡಿಯಲ್ಲಿ ನಿರ್ವಹಿಸುವುದು ಇದರ ಮುಖ್ಯ ಉದ್ದೇಶವಾಗಿವೆ.

ರಾಜ್ಯದಲ್ಲಿ 41,000ಕ್ಕೂ ಹೆಚ್ಚು ನೀರಿನ ಮೂಲಗಳಿದ್ದು, 34,000ಕ್ಕೂ ಹೆಚ್ಚು ಕೆರೆಗಳನ್ನು ಈಗಾಗಲೇ ಸಮೀಕ್ಷೆ ಮಾಡಲಾಗಿದೆ ಮತ್ತು 31,000ಕ್ಕೂ ಹೆಚ್ಚು ಜಿಯೋಟ್ಯಾಗ್ ಮಾಡಲಾಗಿದೆ. 42,678 ಎಕರೆ ಅಕ್ರಮ ಅತಿಕ್ರಮಣ ಗುರುತಿಸಲಾಗಿದ್ದು, 29,000 ಎಕರೆ ಪ್ರದೇಶದಲ್ಲಿ ಅತಿಕ್ರಮಣ ತೆರವುಗೊಳಿಸಲಾಗಿದೆ. ಮೊದಲ ಹಂತದಲ್ಲಿ ಅಂತರ್ಜಲದ ನೀರಿನ ಅತಿಯಾದ ಬಳಕೆ ಮಾಡುತ್ತಿರುವ 41 ತಾಲ್ಲೂಕುಗಳಲ್ಲಿ ಡಿಜಿಟಲ್ ವಾಟರ್ ಸ್ಟಾಕ್ ಯೋಜನೆಯನ್ನು ಜಾರಿಗೆ ತರಲಾಗುವುದು. ರಾಜ್ಯದ ಜಲಮೂಲಗಳನ್ನು ನೈಸರ್ಗಿಕವಾದ ಉಳಿತಾಯ ಖಾತೆಗಳಂತೆ ಪರಿವರ್ತಿಸಲು ಹಾಗೆಯೇ, ಲಭ್ಯವಿರುವಂತಹ ಜಲಮೂಲಗಳ ಸಮರ್ಪಕ ನಿರ್ವಹಣೆ ಮಾಡುವುದಕ್ಕೆ ನಮ್ಮ ಸರಕಾರ ಬದ್ದವಾಗಿದೆ. ಈ ನಿಟ್ಟಿನಲ್ಲಿ ಈ ಯೋಜನೆ ಬಹಳಷ್ಟು ಸಹಕಾರಿಯಾಗಿರಲಿದೆ ಎಂದು ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್ ಎಸ್ ಭೋಸರಾಜು ತಿಳಿಸಿದ್ದಾರೆ.

ಏನಿದು ಡಿಜಿಟಲ್ ವಾಟರ್ ಸ್ಟಾಕ್: ಉಪಗ್ರಹಗಳ ಸೆನ್ಸರ್‌ಗಳಿಂದ ಪಡೆದ ದತ್ತಾಂಶಗಳು, ಎಐ ಹಾಗೂ ಮಷಿನ್ ಲರ್ನಿಂಗ್‌ನಿಂದ ಇಮೇಜಿಂಗ್‌ನ ವಿಶ್ಲೇಷಣೆ ಮಾಡುವ ತಂತ್ರಜ್ಞಾನ ಇದಾಗಿದೆ. ಇದರಿಂದ ಜಲಮೂಲಗಳ ಐದು ವರ್ಷಗಳ ಹಿಂದಿನ ದತ್ತಾಂಶವನ್ನು ಪಡೆದು–ಕೊಂಡು, ಪ್ರಸ್ತುತ ಇರುವ ಸ್ಥಿತಿಗತಿಗಳ ಹೋಲಿಕೆ ಮಾಡಬಹುದಾಗಿದೆ. ಅಲ್ಲದೇ, ಯಾವುದೇ ಜಲಮೂಲದ ಸ್ವರೂಪ, ನೀರಿನ ಶೇಖರಣೆಯಲ್ಲಿ ಆಗುತ್ತಿರುವ ವ್ಯತ್ಯಾಸವನ್ನು ಗುರುತಿಸುವ ಮೂಲಕ ಅದನ್ನು ಸರಿಪಡಿಸುವ ಕಾರ್ಯ ಮಾಡಲು ಇದು ಅನುವು ಮಾಡಿಕೊಡಲಿದೆ.

ಮಾಸ್ಟರ್ ವಾಟರ್ ಅಟ್ಲಸ್ ಮತ್ತು ಡ್ಯಾಶ್‌ಬೋರ್ಡ್: ಡಿಜಿಟಲ್ ವಾಟರ್ ಸ್ಟಾಕ್ ಮೂಲಕ ರಾಜ್ಯಮಟ್ಟದ ನೀರಿನ ನಿರ್ವಹಣೆಯ ಡ್ಯಾಶ್‌ಬೋರ್ಡ್ ಮತ್ತು "ಮಾಸ್ಟರ್ ವಾಟರ್ ಅಟ್ಲಸ್" ರಚಿಸಲಾಗುವುದು. ಇದು ಅಂತರ್ಜಲದ ಮಟ್ಟ, ಮಳೆಯ ಪ್ರಮಾಣ, ಮೇಲ್ಮೈ ಹರಿವು, ಬಳಕೆ ಮತ್ತು ನೀರಿನ ಗುಣಮಟ್ಟದ ಡೇಟಾವನ್ನು ಸಂಗ್ರಹಿಸಿ, ನಿಖರ ದತ್ತಾಂಶಗಳ ಮೂಲಕ ನೀರಿನ ಮೂಲಗಳ ಸ್ಥಿತಿಯನ್ನು ನಿರ್ವಹಿಸಲು ಅನುವು ಮಾಡಿಕೊಡಲಿದೆ.

ಈ ಯೋಜನೆಯ ಮೂಲಕ ನಗರೀಕರಣ ಹಾಗೂ ಕೃಷಿ ಒತ್ತಡದಿಂದ ಉಂಟಾಗುವ ನೀರಿನ ಮೂಲಕ ಕುಸಿತ, ಮಾಲಿನ್ಯ ಮತ್ತು ಅತಿಕ್ರಮಣಗಳನ್ನು ಸರಿಯಾದ ಸಮಯದಲ್ಲಿ ಗುರುತಿಸಲು ಹಾಗೂ ತಕ್ಷಣದ ಕ್ರಮ ಕೈಗೊಳ್ಳಲು ಅನುವು ಮಾಡಿಕೊಡುತ್ತದೆ ಎಂದು ಸಚಿವರು ತಮ್ಮ ಮಾಧ್ಯಮ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರದಲ್ಲಿ ವಿಜೃಂಭಣೆಯಿಂದ ಜರುಗಿದ ತುಂಗಭದ್ರ ಆರತಿ ಮಹೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಸುಪ್ರಸಿದ್ಧ ಧಾರ್ಮಿಕ ಕ್ಷೇತ್ರ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರದಲ್ಲಿ ಮಂಗಳವಾರ ಸಂಜೆ ನಡೆದ ತುಂಗಾರತಿ ಮಹೋತ್ಸವವು ವಿಜೃಂಭಣೆಯಿಂದ ಜರುಗಿತು.

ಹಿಂದೂ ಧಾರ್ಮಿಕ ದತ್ತಿ ಇಲಾಖೆ, ಕೊಪ್ಪಳ ಜಿಲ್ಲಾಡಳಿತ ಹಾಗೂ ಹುಲಿಗಿ ಗ್ರಾಮದ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಇದೇ ಪ್ರಥಮ ಬಾರಿಗೆ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರದ ತುಂಗಭದ್ರಾ ನದಿತೀರದಲ್ಲಿ ತುಂಗಭದ್ರ ಆರತಿ ಮಹೋತ್ಸವ ಕಾರ್ಯಕ್ರಮವನ್ನು ಪವಿತ್ರ ತೀರ್ಥ ಕ್ಷೇತ್ರ ಕಾಶಿಯಲ್ಲಿ ನಡೆಯುವ ಗಂಗಾ ಆರತಿ ಮಾದರಿಯಲ್ಲಿ ಹಮ್ಮಿಕೊಳ್ಳಲಾಗಿತ್ತು. ಗಂಗಾ ಆರತಿಯ 15 ಅರ್ಚಕರು ಈ ತುಂಗಭದ್ರಾ ಆರತಿ ಮಹೋತ್ಸವವನ್ನು ನೆರವೇರಿಸಿದರು. ಈ ಕಾರ್ಯಕ್ರಮ ವಾರಣಾಸಿಯ ಗಂಗಾರತಿಯನ್ನು ನೆನಪಿಸುವಂತಿತ್ತು. ತುಂಗಭದ್ರಾ ಆರತಿಗಾಗಿ ಸಾರ್ವಜನಿಕರಿಗೂ ಅವಕಾಶ ಕಲ್ಪಿಸುವ ಉದ್ದೇಶದಿಂದ ಶ್ರೀ ಕ್ಷೇತ್ರದ ವತಿಯಿಂದ ಸುಮಾರು ಎರಡು ಸಾವಿರ ಆರತಿಗಳನ್ನು ಭಕ್ತಾದಿಗಳಿಗೆ ಉಚಿತವಾಗಿ ನೀಡಲಾಗಿತ್ತು.

ತುಂಗಾರತಿಗೂ ಮುನ್ನ ಸಾರಿಗೆ ಮತ್ತು ಮುಜರಾಯಿ ಇಲಾಖೆಯ ಸಚಿವರು ಹಾಗೂ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಮಲಿಂಗಾರೆಡ್ಡಿ ಮತ್ತು ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಉಪಾಧ್ಯಕ್ಷರು ಆಗಿರುವ ಹಿಂದುಳಿದ ವರ್ಗಗಳ ಕಲ್ಯಾಣ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ತಂಗಡಗಿ ಶಿವರಾಜ ಸಂಗಪ್ಪ ಹಾಗೂ ರಾ.ಬ.ಕೊ.ವಿ ಹಾಲು ಉತ್ಪಾದಕರ ಸಹಕಾರ ಸಂಘದ ಅಧ್ಯಕ್ಷರು ಮತ್ತು ಕೊಪ್ಪಳ ಶಾಸಕರಾದ ಕೆ.ರಾಘವೇಂದ್ರ ಹಿಟ್ನಾಳ ಹಾಗೂ ಸಂಸದರಾದ ಕೆ.ರಾಜಶೇಖರ ಹಿಟ್ನಾಳ ಮತ್ತು ವಿಧಾನ ಪರಿಷತ್ ಸದಸ್ಯರಾದ ಹೇಮಲತಾ ನಾಯಕ ಹಾಗೂ ಇತರೆ ಜನಪ್ರತಿನಿಧಿಗಳು ತುಂಗಭದ್ರಾ ನದಿಗೆ ಬಾಗಿನ ಸಮರ್ಪಣೆ ಮಾಡಿದರು.

ತುಂಗಭದ್ರ ಆರತಿ ಮಹೋತ್ಸವದ ಪ್ರಯುಕ್ತ ಚಂಡಿಕಾ ಹೋಮ, ಭಕ್ತರಿಗೆ ವಿಶೇಷ ಅನ್ನ ಸಂತರ್ಪಣೆ ಕಾರ್ಯಕ್ರಮ, ಮಾಹಿಳೆಯರಿಂದ ವಿಶೇಷ ಕುಂಭ ಮೆರವಣಿಗೆ, ನದಿತೀರದಲ್ಲಿ ದೇವಸ್ಥಾನದ ಉತ್ಸವ ಮೂರ್ತಿಯ ಪ್ರತಿಷ್ಠಾಪನೆ ಮತ್ತು ವಿಶೇಷ ಪೂಜೆ ನಡೆಯಿತು. ಇದಲ್ಲದೆ ಮಹಿಳೆಯರಿಗೆ ಉಡಿ ತುಂಬುವ ಕಾರ್ಯಕ್ರಮ, ಹೊಸಪೇಟೆಯ ಅಂಜಲಿ ಕಲಾತಂಡದವರಿಂದ ಭರತನಾಟ್ಯ ಹಾಗೂ ನದಿ ತಟದ ವೇದಿಕೆಯಲ್ಲಿ ವಿವಿಧ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು.

ಕಾರ್ಯಕ್ರಮದಲ್ಲಿ ಪಂಚಮಸಾಲಿ ಜಗದ್ಗುರು ಪೀಠ ಹರಿಹರದ ವಚನಾನಂದ ಸ್ವಾಮಿಗಳು ಹಾಗೂ ವಿವಿಧ ಮಠಾಧೀಶರು, ಮಾಜಿ ಸಂಸದರಾದ ಕರಡಿ ಸಂಗಣ್ಣ, ಮಾಜಿ ಶಾಸಕರಾದ ಕೆ.ಬಸವರಾಜ ಹಿಟ್ನಾಳ ಹಾಗೂ ಅಮರೆಗೌಡ ಪಾಟೀಲ ಬಯ್ಯಾಪುರ, ಮುನಿರಾಬಾದ್ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರ ತುಂಗಭದ್ರಾ ಯೋಜನೆಯ ಅಧ್ಯಕ್ಷರಾದ ಹಸನಸಾಬ ನಭಿಸಾಬ ದೋಟಿಹಾಳ, ಹುಲಿಗಿ ಗ್ರಾಮ ಪಂಚಾಯತ್ ಅಧ್ಯಕ್ಷರಾದ ನೀಲಮ್ಮ ಗವಿಸಿದ್ದಪ್ಪ ಗುಂಗಾಡಿ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೆಗೀ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಕ್ಯಾಪ್ಟನ್ ಮಹೇಶ ಮಾಲಗಿತ್ತಿ, ತಹಶಿಲ್ದಾರ ವಿಠ್ಠಲ ಚೌಗಲಾ ಹಾಗೂ ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಕಾರ್ಯದರ್ಶಿ ಯಂ.ಹೆಚ್.ಪ್ರಕಾಶ್ ರಾವ್, ಶ್ರೀ ಹುಲಿಗೆಮ್ಮ ದೇವಿ ಕ್ಷೇತ್ರ ಅಭಿವೃದ್ಧಿ ಪ್ರಾಧಿಕಾರದ ಸದಸ್ಯರು ಸೇರಿದಂತೆ ಇತರೆ ಹಲವಾರು ಜನಪ್ರತಿನಿಧಿಗಳು, ಶ್ರೀ ಹುಲಿಗೆಮ್ಮ ದೇವಿಯ ಅಪಾರ ಸಂಖ್ಯೆಯ ಭಕ್ತಾದಿಗಳು ಹಾಗೂ ಮತ್ತಿತರರು ಉಪಸ್ಥಿತರಿದ್ದರು.

## ಇಂದು ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ರಾಜ್ಯ ಸರ್ಕಾರದ 5 ಗ್ಯಾರಂಟಿ ಯೋಜನೆಗಳ ಅನುಷ್ಠಾನದ ಕುರಿತು ಪ್ರಗತಿ ಪರಿಶೀಲನಾ ಸಭೆಯನ್ನು ಆಗಸ್ಟ್ 29 ರಂದು ಬೆಳಿಗ್ಗೆ 11 ಗಂಟೆಗೆ ಕೊಪ್ಪಳ ಜಿಲ್ಲಾ ಪಂಚಾಯತ್‌ನ ಜಿ.ಹೆಚ್.ಪಟೇಲ್ ಸಭಾಂಗಣದಲ್ಲಿ ಆಯೋಜಿಸಲಾಗಿದೆ.

ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷರಾದ ರೆಡ್ಡಿ ಶ್ರೀನಿವಾಸ ಅವರು ಸಭೆಯ ಅಧ್ಯಕ್ಷತೆ ವಹಿಸುವರು. ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳು ಅಗತ್ಯ ಮಾಹಿತಿಯೊಂದಿಗೆ ಕಡ್ಡಾಯವಾಗಿ ಸಭೆಗೆ ಹಾಜರಾಗಬೇಕು. ಸಮಿತಿಯ ಉಪಾಧ್ಯಕ್ಷರು, ಸದಸ್ಯರು ಸಭೆಯಲ್ಲಿ ಪಾಲ್ಗೊಳ್ಳುವಂತೆ ಕೊಪ್ಪಳ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಂಚಾರಿ ಇ-ಚಾನೆಲ್ ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.28–ರಾಜ್ಯಸರ್ಕಾರವು ಪೊಲೀಸ್ ಇಲಾಖೆಯ ಸಂಚಾರಿ ಇ–ಚಾನೆಲ್ ನಲ್ಲಿ ದಾಖಲಾಗಿರುವ ಬಾಕಿ ಪ್ರಕರಣಗಳ ದಂಡದ ಮೊತ್ತದಲ್ಲಿ ಶೇ.50 ರಷ್ಟು ರಿಯಾಯಿತಿ ನೀಡಿ ಆದೇಶಿಸಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್. ಹೊಸಮನೆ ಅವರು ತಿಳಿಸಿದ್ದಾರೆ.

ಸೆಪ್ಟೆಂಬರ್ 12 ರ ವರೆಗೆ ಈ ರಿಯಾಯಿತಿ ಸೌಲಭ್ಯವು ಇರಲಿದ್ದು, ಸೆಪ್ಟೆಂಬರ್ 13 ರಂದು ನಡೆಯಲಿರುವ ರಾಷ್ಟ್ರೀಯ ಲೋಕ್ ಅದಾಲತ್ ಪ್ರಯುಕ್ತ ಈ ರಿಯಾಯಿತಿ ನೀಡಲಾಗಿದೆ. ಹಾಗಾಗಿ ಸಾರ್ವಜನಿಕರು ಈ ಸೌಲಭ್ಯವನ್ನು ಸದ್ಬಳಕೆ ಮಾಡಿಕೊಳ್ಳಬೇಕು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸಾಮಾಜಿಕ ಶೈಕ್ಷಣಿಕ ಸಮೀಕ್ಷೆ:

## ಯಾವುದೇ ಜಾತಿಗಳು ಬಿಟ್ಟು ಹೋಗಿದ್ದರೆ ಮಾಹಿತಿ ನೀಡಲು ಸೆ.01 ರವರೆಗೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.28–ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು ಕರ್ನಾಟಕ ರಾಜ್ಯದಲ್ಲಿರುವ ಹಿಂದುಳಿದ ವರ್ಗಗಳು, ಇತರೆ ಜಾತಿಗಳು ಅನುಸೂಚಿತ ಜಾತಿ ಮತ್ತು ಪಂಗಡಗಳು ಸೇರಿದಂತೆ ಎಲ್ಲ ಜಾತಿಗಳ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆ ಕೈಗೊಂಡಿದ್ದು, ಹಿಂದುಳಿದ ವರ್ಗಗಳ ಯಾವುದೇ ಜಾತಿ/ಉಪಜಾತಿಗಳು ಬಿಟ್ಟು ಹೋಗಿದ್ದಲ್ಲಿ, ಅಂತಹ ಅಂಶಗಳ ಬಗ್ಗೆ ಸಲಹೆ, ಸೂಚನೆ ನೀಡಲು ಸೆ.01 ರ ಸಂಜೆ 5.00 ಗಂಟೆಯವರೆಗೆ ಕಾಲಾವಕಾಶ ನೀಡಲಾಗಿದೆ. ಸಂಗ್ರಹಿಸಲಾದ ಜಾತಿ/ಉಪಜಾತಿಗಳ ಪಟ್ಟಿಯನ್ನು ಸೆಪ್ಟೆಂಬರ್ ತಿಂಗಳಲ್ಲಿ ಪ್ರಾರಂಭವಾಗಲಿರುವ ಸಮೀಕ್ಷೆಗಾಗಿ ಮಾತ್ರ ಉಪಯೋಗಿಸಲಾಗುವುದು.

ಸಾರ್ವಜನಿಕರು ತಮ್ಮ ಸಲಹೆ/ಸೂಚನೆ/ ಮನವಿಗಳನ್ನು ಸದಸ್ಯ ಕಾರ್ಯದರ್ಶಿಗಳು, ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗ, ನಂ.16, ಡಿ.ದೇವರಾಜ ಅರಸು ಭವನ, ಮಿಲ್ಲರ್ಸ್ ಟ್ಯಾಂಕ್ ಬಂಡ್ ಪ್ರದೇಶ, ವಸಂತ ನಗರ, ಬೆಂಗಳೂರು ಅಥವಾ kscbcb@gmail.com ಇ–ಮೇಲ್ ವಿಳಾಸಕ್ಕೆ ಕಳುಹಿಸಬಹುದಾಗಿದೆ. ಹೆಚ್ಚಿನ ವಿವರಗಳಿಗೆ ದೂ.ಸಂಖ್ಯೆ 080–29506668 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆ ತಿಳಿಸಿದೆ.

## ಪಶುಪಾಲನಾ ಇಲಾಖೆಯಿಂದ ತರಬೇತಿ: ರೈತರು ಭಾಗವಹಿಸುವಂತೆ ಮನವಿ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಪಶುಪಾಲನಾ ಮತ್ತು ಪಶುವೈದ್ಯಕೀಯ ಸೇವಾ ಇಲಾಖೆಯ ವತಿಯಿಂದ 2 ದಿನಗಳ ಆಧುನಿಕ ಕುರಿ ಮತ್ತು ಮೇಕೆ ಸಾಕಾಣಿಕೆ ತರಬೇತಿಯನ್ನು ಹಮ್ಮಿಕೊಳ್ಳಲಾಗಿದ್ದು, ಆಸಕ್ತ ರೈತರು, ರೈತ ಮಹಿಳೆಯರು ತರಬೇತಿಯಲ್ಲಿ ಭಾಗವಹಿಸಬಹುದು.

ಪಶು ಆಸ್ಪತ್ರೆ ಆವರಣದಲ್ಲಿರುವ ಕೊಪ್ಪಳ ಪಶು ಆಸ್ಪತ್ರೆ ಆವರಣದಲ್ಲಿರುವ ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದಲ್ಲಿ ಆಗಸ್ಟ್ 29 ಮತ್ತು 30 ರಂದು ತರಬೇತಿಯನ್ನು ನೀಡಲಾಗುತ್ತದೆ. ತರಬೇತಿಗೆ ಆಗಮಿಸುವವರಿಗೆ ಯಾವುದೇ ಪ್ರೋತ್ಸಾಹಧನ ಮತ್ತು ಭತ್ಯೆಗಳನ್ನು ನೀಡಲಾಗುವುದಿಲ್ಲ. ತರಬೇತಿಗೆ ಹಾಜರಾಗುವ ರೈತರು ಆಧಾರ್ ಕಾರ್ಡ್ ಜೆರಾಕ್ಸ್, ಪಾಸ್‌ಪೋರ್ಟ್ ಅಳತೆಯ 2 ಭಾವಚಿತ್ರಗಳು ಮತ್ತು ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡದವರು ಜಾತಿ ಪ್ರಮಾಣ ಪತ್ರದ ಜೆರಾಕ್ಸ್ ಪ್ರತಿಯನ್ನು ತರಬೇಕು.

ಹೆಚ್ಚಿನ ವಿವರಗಳಿಗಾಗಿ ಹತ್ತಿರದ ಪಶು ಚಿಕಿತ್ಸಾ ಕೇಂದ್ರಗಳಿಗೆ ಭೇಟಿ ನೀಡಿ ಮಾಹಿತಿ ಪಡೆಯಬಹುದು. ಈ ತರಬೇತಿಯು ಕೊಪ್ಪಳ ಜಿಲ್ಲೆಯ ರೈತರಿಗೆ ಮಾತ್ರ ಎಂದು ಪಶುಪಾಲನಾ ಮತ್ತು ಪಶುವೈದ್ಯಕೀಯ ತರಬೇತಿ ಕೇಂದ್ರದ ಮುಖ್ಯ ಪಶು ವೈದ್ಯಾಧಿಕಾರಿಗಳು (ಆಡಳಿತ) ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸರ್ಕಾರಿ ಗೋದಾಮಿನಲ್ಲಿಯೇ ಗೋಲಮಾಲ..!

## ಪಡಿತರ ಅಕ್ಕಿ ಸಾಗಾಣಿಕೆಗೆ ಯತ್ನ , ಉನ್ನತಮಟ್ಟದ ತನಿಖೆಗೆ ಕರವೇ ಆಗ್ರಹ..!

(ವೀರಯ್ಯ ವಿ ಹಿರೇಮಠ )

ಮಲ್ಲಮ್ಮ ನುಡಿವಾರ್ತೆ



ಕೊಪ್ಪಳ :ಗಂಗಾವತಿ ನಗರದ ಕರ್ನಾಟಕ ರಾಜ್ಯ ಉಗ್ರಾಣ ನಿಗಮದ ಗೋದಾಮಿನಲ್ಲಿ ಸಾಗಾಣೆಯಾಗುತ್ತಿದ್ದ ಅನ್ನಭಾಗ್ಯ ಯೋಜನೆಯ 275 ಕ್ವಿಂಟಾಲ್ ಅಕ್ಕಿ ಚೀಲಗಳನ್ನು ಆಹಾರ ಇಲಾಖೆಯ ಅಧಿಕಾರಿಗಳು ಮಂಗಳವಾರ ವಶಕ್ಕೆ ಪಡೆದು ಗೋದಾಮು ಜಪ್ತಿ ಮಾಡಿರುವುದನ್ನು ನೋಡಿದರೆ, ಅಧಿಕಾರಿಗಳ ಜಾಣ ನಡೆಯಿಂದ ಪ್ರಭಾವಿಗಳನ್ನು ರಕ್ಷಿಸುವ ಹುನ್ನಾರ ಅಡಗಿದೆ ಎಂದು ಕರ್ನಾಟಕ ರಕ್ಷಣಾ ವೇದಿಕೆ ಜಿಲ್ಲಾಧ್ಯಕ್ಷ ಬಿ.ಗಿರೀಶಾನಂದ ಜ್ಞಾನಸುಂದರ ಆರೋಪಿಸಿದ್ದಾರೆ. ಪ್ರಕರಣವೂ ಸೋಮವಾರವೇ ಬೆಳಕಿಗೆ ಬಂದರೂ ತಡವಾಗಿ ಪ್ರಕರಣವನ್ನು ದಾಖಲು ಮಾಡಿರುವುದನ್ನು ನೋಡಿದರೆ ಪ್ರಭಾವಿ ರಾಜಕಾರಣಿಗಳ ಒತ್ತಡಕ್ಕೆ ಮಣಿದು ಪ್ರಕರಣವನ್ನು ಮುಚ್ಚಿ ಹಾಕಲೆತ್ನಿಸಿದ್ದಾರೆಂದು ಶಂಕೆ ವ್ಯಕ್ತವಾಗುತ್ತಿದೆ. ಸುಮಾರು ವರ್ಷಗಳಿಂದ ಅಕ್ರಮ ಪಡಿತರ ಅಕ್ಕಿ ಸಾಗಾಣಿಕೆಯು ಜಿಲ್ಲೆಯಲ್ಲಿ ಸಾಗರೋಪಾದಿಯಲ್ಲಿ ಸಾಗಿರುವುದನ್ನು ಕರವೇ ಜಿಲ್ಲಾ ಘಟಕವು ಸಾಕಷ್ಟು ಬಾರಿ ಖಂಡಿಸಿ ಸಂಬಂಧಿಸಿದ ಅಧಿಕಾರಿಗಳಲ್ಲಿ ದೂರು ನೀಡಿದರೂ ಸಹ ಜಿಲ್ಲಾಡಳಿತ ನಿದ್ರಾವ್ಯಸ್ಥೆಯಲ್ಲಿದೆ.

ಅನ್ನಭಾಗ್ಯ ಯೋಜನೆಯ ಅಕ್ಕಿಯನ್ನು ಬಡವರಿಂದ ಕಸಿದುಕೊಂಡು ಬೇರೆಡೆಗೆ ಸಾಗಾಟ ಮಾಡುವ ಜಾಲವು ಜಿಲ್ಲೆಯಲ್ಲಿ ಸಕ್ರೀಯವಾಗಿದ್ದು, ಕಾಳ ಸಂತೆಯಲ್ಲಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುವುದನ್ನೇ ಕೆಲವರು ದಂಧೆಯನ್ನಾಗಿ ಮಾಡಿಕೊಂಡಿರುವುದನ್ನು ಬಲವಾಗಿ ಖಂಡಿಸಿದ ಅವರು ಬಡವರ ಹೊಟ್ಟೆಗೆ ಸೇರಬೇಕಾದ ಅನ್ನ ದಂಧೆಕೋರರ ಪಾಲಾಗುತ್ತಿದೆ. ಪಡಿತರದಾಸ್ತಾನಿನ ಗೋದಾಮಿನಲ್ಲಿ ಲಾಲಾ ರೈಸ್ ಹೆಸರಿನ ಖಾಸಗಿ ಕಂಪನಿಯ ಚೀಲದಲ್ಲಿ ಅಕ್ಕಿ ತುಂಬಿರುವುದು ಅನುಮಾನಕ್ಕೆ ಕಾರಣವಾಗಿದ್ದು, ಆದರೆ ಕಂಪನಿಯ ಮಾಲೀಕ ಅಥವಾ ವಾರಸುದಾರರ ಮಾಹಿತಿ ನಿಗೂಢವಾಗಿದೆ. ಅಧಿಕಾರಿಗಳಲ್ಲಿಯೂ ಸಮರ್ಪಕವಾದ ಉತ್ತರವಿಲ್ಲದಿರುವುದನ್ನು ನೋಡಿದರೆ ಆಹಾರ ಇಲಾಖೆಯ ಅಧಿಕಾರಿಗಳ ನಡೆ ಅನುಮಾನಕ್ಕೆ ಕಾರಣವಾಗಿದೆ. ಆದ ಕಾರಣ ಪ್ರಕರಣವು ಗಂಭೀರ ಸ್ವರೂಪದಾಗಿದ್ದೂ ಉನ್ನತಮಟ್ಟದ ತನಿಖೆ ನಡೆಸಿ ತಪ್ಪಿತಸ್ಥರನ್ನು ಶಿಕ್ಷೆಗೆ ಒಳಪಡಿಸಿ ಅಕ್ರಮ ಚಟುವಟಿಕೆಗಳ ಮೇಲೆ ಕ್ರಮ ಕೈಗೊಂಡು ಪಡಿತರ ಅಕ್ಕಿಯ ಅಕ್ರಮ ಸಾಗಾಣಿಕೆಯನ್ನು ತಡೆಗಟ್ಟಬೇಕು. ಇಲ್ಲದಿದ್ದರೆ ಕರವೇ ಜಿಲ್ಲೆಯಾದ್ಯಂತ ಬೀದಿಗಿಳಿದು ಪ್ರತಿಭಟಿಸಬೇಕಾಗುತ್ತದೆ ಎಂದು ಮಲ್ಲಮ್ಮ ನುಡಿ ಪತ್ರಿಕೆಯೊಂದಿಗೆ ಮಾತಾಡಿ ತಮ್ಮ ಆಕ್ರೋಶ ಹೊರಹಾಕಿದ್ದಾರೆ.

## ಇಂದು ಬಳ್ಳಾರಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.28–ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆ, ಶಾಲಾ ಶಿಕ್ಷಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಆ.29 ರಂದು ಬೆಳಿಗ್ಗೆ 10.30 ಗಂಟೆಗೆ ನಗರದ ಜಿಲ್ಲಾ ಕ್ರೀಡಾಂಗಣದಲ್ಲಿ ಬಳ್ಳಾರಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾ–ಕೂಟ–2025 ಹಮ್ಮಿಕೊಳ್ಳಲಾಗಿದೆ.

ವಸತಿ, ವಕ್ಫ್ ಮತ್ತು ಅಲ್ಪಸಂಖ್ಯಾತರ ಕಲ್ಯಾಣ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಬಿ.ಜಡ್.ಜಮೀರ್ ಅಹ್ಮದ್ ಖಾನ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಬಳ್ಳಾರಿ ಗ್ರಾಮೀಣ ಶಾಸಕ ಬಿ.ನಾಗೇಂದ್ರ ಅವರು ಅಧ್ಯಕ್ಷತೆ ವಹಿಸುವರು.

ಸಂಸದರಾದ ಈ.ತುಕಾರಾಮ್, ಡಾ.ಸೈಯದ್ ನಾಸೀರ್ ಹುಸೇನ್, ವಿಧಾನ ಪರಿಷತ್ ಶಾಸಕ ಚಂದ್ರಶೇಖರ ಬಿ.ಪಾಟೀಲ, ಶಾಸಕ ನಾರಾ ಭರತ್ ರೆಡ್ಡಿ, ವಿಧಾನ ಪರಿಷತ್ ಶಾಸಕರಾದ ಶಶೀಲ್ ಜಿ.ನಮೋಶಿ, ವೈ.ಎಂ.ಸತೀಶ್, ಬಾಬು ಜಗಜೀವನರಾಮ್ ಚರ್ಮ ಕೈಗಾರಿಕಾ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷ ಮುಂಡರಗಿ ನಾಗರಾಜ, ಮಹಾನಗರ ಪಾಲಿಕೆಯ ಮೇಯರ್ ಮುಲ್ಲಂಗಿ ನಂದೀಶ್, ಬಳ್ಳಾರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಜೆ.ಎಸ್.ಆಂಜನೇಯಲು, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಕೆ.ಇ.ಚಿದಾನಂದಪ್ಪ ಸೇರಿದಂತೆ ಇತರರು ಮುಖ್ಯ ಅತಿಥಿಗಳಾಗಿ ಭಾಗವಹಿಸುವರು.

ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಶೋಭಾರಾಣಿ ವಿ.ಜೆ., ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಮಹಮ್ಮದ್ ಹಾರಿಸ್ ಸುಮೇರ್, ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಬಿ.ಉಮಾದೇವಿ, ಬಳ್ಳಾರಿ ಪೂರ್ವ ವಲಯ ಕ್ಷೇತ್ರ ಶಿಕ್ಷಣಾಧಿಕಾರಿ ಡಿ.ಕಸ್ತೂರಿ, ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕರಾದ ಕೆ.ಗ್ರೇಸಿ ಸೇರಿದಂತೆ ಇತರರು ಉಪಸ್ಥಿತರಿರುವರು ಎಂದು ಪ್ರಕಟಣೆ ತಿಳಿಸಿದೆ.

ಬ್ರಹ್ಮಶ್ರೀ ನಾರಾಯಣಗುರು, ವಿಶ್ವಕರ್ಮ ಜಯಂತಿ ಆಚರಣೆಯ ಪೂರ್ವಭಾವಿ ಸಭೆ

## ಮಹನೀಯರ ಜಯಂತಿ ಅರ್ಥಪೂರ್ಣ ಆಚರಣೆ: ಎಸಿ ಪಿ.ಪ್ರಮೋದ್

ಮಲ್ಲಮ್ಮ ನುಡಿ ವಾರ್ತೆ



ಬಳ್ಳಾರಿ,ಆ.28–ಜಿಲ್ಲಾಡಳಿತ ವತಿಯಿಂದ ವಿವಿಧ ಮಹನೀಯರ ಜಯಂತಿಯ ಕಾರ್ಯಕ್ರಮಗಳನ್ನು ಜಿಲ್ಲಾ ಕೇಂದ್ರದಲ್ಲಿ ಅರ್ಥಪೂರ್ಣವಾಗಿ ಆಚರಿಸಲಾಗುವುದು ಎಂದು ಸಹಾಯಕ ಆಯುಕ್ತ ಪಿ.ಪ್ರಮೋದ್ ಅವರು ಹೇಳಿದರು.

ನಗರದ ಸಹಾಯಕ ಆಯುಕ್ತರ ಸಭಾಂಗಣದಲ್ಲಿ ವಿವಿಧ ಮಹನೀಯರ ಜಯಂತಿ ಆಚರಣೆ ಕುರಿತು ಗುರುವಾರ ಏರ್ಪಡಿಸಿದ್ದ ಪೂರ್ವಭಾವಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಆಶ್ರಯದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಸೆ.07 ರಂದು ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಮತ್ತು ಸೆ.17 ರಂದು ವಿಶ್ವಕರ್ಮ ಜಯಂತಿಯ ಕಾರ್ಯಕ್ರಮಗಳನ್ನು ಅರ್ಥಪೂರ್ಣವಾಗಿ, ಅಚ್ಚುಕಟ್ಟಾಗಿ ಆಯೋಜಿಸಲಾಗುವುದು ಎಂದರು.

ಎಲ್ಲರೂ ಭಾಗವಹಿಸಿ ಆಚರಿಸಿದರೆ ಜಯಂತಿ ಕಾರ್ಯಕ್ರಮಗಳಿಗೆ ಮೆರಗು. ಹಾಗಾಗಿ ಎಲ್ಲ ಸಮುದಾಯದವರು, ಸಂಘ–ಸಂಸ್ಥೆಗಳ ಮುಖಂಡರು, ಸಾರ್ವಜನಿಕರು ಕಾರ್ಯಕ್ರಮಗಳಲ್ಲಿ ಭಾಗವಹಿಸಿ ಯಶಸ್ವಿಗೊಳಿಸುವಂತೆ ಮನವಿ ಮಾಡಿದರು.

ಸೆ.07 ರಂದು ಬ್ರಹ್ಮಶ್ರೀ ನಾರಾಯಣಗುರು ಜಯಂತಿ ಕಾರ್ಯಕ್ರಮವಿದ್ದು, ಶಿಷ್ಠಾಚಾರದಂತೆ ಆಹ್ವಾನ ಪತ್ರಿಕೆಯನ್ನು ಮುದ್ರಿಸಿ ಗಣ್ಯರನ್ನು ಆಹ್ವಾನಿಸಬೇಕು ಎಂದು ತಿಳಿಸಿದ ಅವರು, ವೇದಿಕೆ ಮತ್ತು ಮೆರವಣಿಗೆ ಕಾರ್ಯಕ್ರಮದಲ್ಲಿ ಕುಡಿಯುವ ನೀರಿನ ವ್ಯವಸ್ಥೆ, ಸ್ವಚ್ಛತೆ ಕೈಗೊಳ್ಳಬೇಕು ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.

ಸೆ.17 ರಂದು ವಿಶ್ವಕರ್ಮ ಜಯಂತಿ ಅಂಗವಾಗಿ ಮೆರವಣಿಗೆಯು ನಡೆಯಲಿದ್ದು, ಅಂದು ಬೆಳಿಗ್ಗೆ 09.30 ಗಂಟೆಗೆ ಕಾಳಿಕಾ ಕಮಠೇಶ್ವರ ದೇವಸ್ಥಾನದಿಂದ ಬೆಂಗಳೂರು ರಸ್ತೆ, ಹಳೇ ಬ್ರೂಸ್‌ಪೇಟೆ ಪೊಲೀಸ್ ಠಾಣೆ, ತೇರು ಬೀದಿ, ಹೆಚ್.ಆರ್. ಗವಿಯಪ್ಪ ವೃತ್ತದಿಂದ ಜೋಳದರಾಶಿ ದೊಡ್ಡನಗೌಡ ರಂಗಮಂದಿರದ ವೇದಿಕೆ ಕಾರ್ಯಕ್ರಮದವರೆಗೆ ಮೆರವಣಿಗೆ ನಡೆಯಲಿದೆ. ಮೆರವಣಿಗೆಯಲ್ಲಿ ವಿವಿಧ ಸಾಂಸ್ಕೃತಿಕ ಕಲಾ ತಂಡಗಳು ಒಳಗೊಂಡಿರುತ್ತವೆ ಎಂದು ಅವರು ತಿಳಿಸಿದರು.

ವೇದಿಕೆ ಕಾರ್ಯಕ್ರಮದಲ್ಲಿ ಸಂಗೀತ ಗಾಯನ, ಭಕ್ತಿಗೀತೆ ಕಾರ್ಯಕ್ರಮ ನಡೆಯಲಿದೆ. ಮಹನೀಯರ ಕುರಿತು ನುರಿತ ಸಂಪನ್ಮೂಲ ವ್ಯಕ್ತಿಗಳಿಂದ ವಿಶೇಷ ಉಪನ್ಯಾಸ ಏರ್ಪಡಿಸಬೇಕು. ನಂತರದಲ್ಲಿ ಲಘು ಉಪಾಹಾರ ವ್ಯವಸ್ಥೆ ಕೈಗೊಳ್ಳಬೇಕು ಎಂದು ಅವರು ಹೇಳಿದರು.

ಸಭೆಯಲ್ಲಿ ಸಮುದಾಯದ ಮುಖಂಡರು ಜಯಂತಿ ಕಾರ್ಯಕ್ರಮ ಅದ್ದೂ–ರಿಯಾಗಿ ಹಾಗೂ ಯಶಸ್ವಿಗೊಳಿಸಲು ತಮ್ಮ ಅಭಿಪ್ರಾಯ ನೀಡಿದರು.

ಈ ಸಂದರ್ಭದಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಬಿ.ನಾಗರಾಜ ಸೇರಿದಂತೆ ಮಹಾನಗರ ಪಾಲಿಕೆ, ಶಾಲಾ ಶಿಕ್ಷಣ, ಪದವಿ ಪೂರ್ವ ಶಿಕ್ಷಣ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳು, ಸಮುದಾಯದ ಮುಖಂಡರು ಹಾಗೂ ಇನ್ನಿತರರು ಉಪಸ್ಥಿತರಿದ್ದರು.

## ಮಂಗಳೂರಲ್ಲಿ ಯೂರಿಯಾ ಗೊಬ್ಬರಕ್ಕಾಗಿ ರೈತರ ಪ್ರತಿಭಟನೆ

ಮಲ್ಲಮ್ಮ ನುಡಿವಾರ್ತೆ



ಕೊಪ್ಪಳ : ಜಿಲ್ಲೆಯ ಕುಕನೂರ ತಾಲೂಕಿನ ಮಂಗಳೂರು ಗ್ರಾಮದ ರೈತ ಸಂಪರ್ಕ ಕೇಂದ್ರದ ಮುಂಭಾಗದಲ್ಲಿ ಮಂಗಳೂರು ಗ್ರಾಮದ ಹಾಗೂ ಸುತ್ತಮುತ್ತಲಿನ ಗ್ರಾಮದ ರೈತರು ರೈತ ಸಂಪರ್ಕ ಕೇಂದ್ರದ ಕಚೇರಿಯನ್ನು ಬಂದ್ ಮಾಡಿ ಬೃಹತ್ ಪ್ರತಿಭಟನೆ ಮಾಡಿದರು ನಂತರ ಪ್ರತಿಭಟನಾ ಸ್ಥಳಕ್ಕೆ ಯಲಬುರ್ಗಾ ತಾಲೂಕ ಸಹಾಯಕ ಕೃಷಿ ನಿರ್ದೇಶಕರಾದ ಪ್ರಮೋದ ಅವರು ಭೇಟಿ ಮಾಡಿ ರೈತರೊಂದಿಗೆ ಮಾತನಾಡಿ ಮೂರು ನಾಲ್ಕು ದಿನಗಳ ಒಳಗಾಗಿ ಸಮರ್ಪಕ ರಸಗೊಬ್ಬರ ಪೂರೈಸುವುದಾಗಿ ಈ ಸಂದರ್ಭದಲ್ಲಿ ನೆರೆದಿದ್ದ ರೈತರಿಗೆ ಭರವಸೆ ನೀಡಿದರು ನಂತರ ಅಧಿಕಾರಿಗಳ ಮಾತಿಗೆ ರೈತರು ಗೌರವ ಕೊಟ್ಟು ಪ್ರತಿಭಟನೆಯನ್ನು ಹಿಂಪಡೆದರು.

ಈ ಸಂದರ್ಭದಲ್ಲಿ ಮಂಗಳೂರು ರೈತ ಸಂಪರ್ಕ ಕೇಂದ್ರದ ಕೃಷಿ ಅಧಿಕಾರಿ ನಿಂಗಪ್ಪ ಹಿರೇಹಾಳ, ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷರು ಶರಣಪ್ಪ ಹ್ಯಾಟಿ, ನಿರ್ದೇಶಕರಾದ ಮಹಾಲಿಂಗಯ್ಯ ಕಲ್ಮಠ, ಗಂಗಾಧರ ಬಡಿಗೇರ, ಲಿಂಗರಾಜ ವಿವೇಕಿ, ಸಿಇಓ ಹನಮಗೌಡ್ರ ಈಳಗೇರ, ಸಿಬ್ಬಂದಿ ವರ್ಗದವರು, ರೈತರಾದ ಮಂಗಳೇಶಪ್ಪ ಬಗನಾಳ, ಶಂಕ್ರಗೌಡ್ರ ಕೀರ್ತಗೌಡ್ರ, ಗವಿಸಿದ್ದಯ್ಯ ಅರಳಲೆಹಿರೇಮಠ, ಮುತ್ತಣ್ಣ ಬಾರಿನರ, ದುರುಗೇಶ ಹಳ್ಳಿ, ಮಂಗಳೇಶಪ್ಪ ಕಿನ್ನಾಳ, ರವೀಂದ್ರನಾಥ ಕೊಟ್ರಪ್ಪ ತೋಟದ, ಶಿವಪುತ್ರಪ್ಪ ಪೂಜಾರ, ಪುತ್ರಪ್ಪ ಕುದ್ರಿಮೋತಿ, ಖಾಜಾಸಾಬ ನೂರಭಾಷ, ಮಲ್ಲಪ್ಪ ಎಮ್ಮಿ, ಮಂಗಳಪ್ಪ ಕುಂಬಾರ, ಖಾಜಾಸಾಬ ಹಂಚಿನಾಳ, ಮುತ್ತಣ್ಣ ತಳವಾರ, ಇತರ ರೈತರು ಹಾಜರಿದ್ದರು.

## ಯುವತಿ ಕಾಣೆ: ಪತ್ತೆಗೆ ಸಹಕರಿಸಲು ಮನವಿ

ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ : ಕುಷ್ಟಗಿ ಪಟ್ಟಣದಲ್ಲಿ ವಾಸವಿರುವ ಧಾರವಾಡ ಮೂಲದ 27 ವರ್ಷದ ಮಧುರಾ ತಂದೆ ವೆಂಕಟನರಸಿಂಹಚಾರ್ಯ ಜೋಶಿ ಎಂಬ ಯುವತಿ 2025 ರ ಆಗಸ್ಟ್ 15 ರಿಂದ ಕಾಣೆಯಾಗಿದ್ದು, ಈವರೆಗೂ ಪತ್ತೆಯಾಗಿರುವುದಿಲ್ಲ. ಈ ಬಗ್ಗೆ ಕುಷ್ಟಗಿ ಪೊಲೀಸ್ ಠಾಣೆಯಲ್ಲಿ ಗುನ್ನೆ ನಂ:193/2025, ಕಲಂ 00ಎಂಪಿ ಭಾರತೀಯ ನ್ಯಾಯ ಸಂಹಿತೆ 2023 ಮಹಿಳೆ ಕಾಣೆ ರೀತ್ಯ ಪ್ರಕರಣ ದಾಖಲಾಗಿದೆ.

**ಕಾಣೆಯಾದವ್ಯಕ್ತಿಯಚಹರೆ:** ಕಾಣೆಯಾದ ಮಹಿಳೆಯು 4.10 ಅಡಿ ಎತ್ತರ, ದುಂಡು ಮುಖ, ಗೋಧಿ ಮೈ ಬಣ್ಣ, ತೆಳ್ಳನೆಯ ಮೈಕಟ್ಟು ಹೊಂದಿದ್ದು, ಕಾಣೆಯಾದಾಗ ಕೇಸರಿ ಬಣ್ಣದ ಚೂಡಿದಾರ ಧರಿಸಿದ್ದರು. ಕನ್ನಡ, ಹಿಂದಿ ಮತ್ತು ಇಂಗ್ಲಿಷ್ ಭಾಷೆ ಮಾತನಾಡುತ್ತಾರೆ. ಮೇಲ್ಕಂಡ ಚಹರೆಯ ಮಹಿಳೆಯ ಬಗ್ಗೆ ಯಾರಿಗಾದರೂ ಮಾಹಿತಿ ಇದ್ದಲ್ಲಿ ಅಥವಾ ದೊರೆತಲ್ಲಿ ಕುಷ್ಟಗಿ ಪೊಲೀಸ್ ಠಾಣೆ ಸಿ.ಪಿ.ಐ ದೂ.ಸಂ: 9480803732, ಕುಷ್ಟಗಿ ಪೊಲೀಸ್ ಠಾಣೆ ಪಿ.ಎಸ್.ಐ ದೂ.ಸಂ: 9480803757, ಗಂಗಾವತಿ ಡಿ.ಎಸ್.ಪಿ ದೂ.ಸಂ: 9480803721 ಹಾಗೂ ಕೊಪ್ಪಳ ಎಸ್‌ಪಿ ಕಚೇರಿ ಸಂಖ್ಯೆ: 08539–230111 ಗೆ ಸಂಪರ್ಕಿಸಿ ಮಾಹಿತಿ ನೀಡಬೇಕು ಎಂದು ಕುಷ್ಟಗಿ ಪೊಲೀಸ್ ಠಾಣೆಯ ಪ್ರಕಟಣೆ ಕೋರಿದೆ.

## ನಾಗಪುರ ದೀಕ್ಷಾ ಭೂಮಿಗೆ ಹೋಗಿಬರಲು ಯಾತ್ರಾರ್ಥಿಗಳಿಂದ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.28–ಪ್ರಸ್ತಕ ಸಾಲಿನಲ್ಲಿ ಡಾ.ಬಿ.ಆರ್.ಅಂಬೇಡ್ಕರ್ ಅವರ ಅನುಯಾಯಿಗಳನ್ನು ಮಹಾರಾಷ್ಟ್ರದ ನಾಗಪುರದಲ್ಲಿನ ದೀಕ್ಷಾ ಭೂಮಿಗೆ ಅಕ್ಟೋಬರ್ 02 ರಂದು ನಡೆಯಲಿರುವ ಪ್ರವರ್ತನಾ ದಿನಕ್ಕೆ ಹೋಗಿಬರಲು ಅರ್ಹ ಪರಿಶಿಷ್ಟ ಜಾತಿಯ ಯಾತ್ರಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಬಳ್ಳಾರಿ, ಕಂಪ್ಲಿ, ಕುರುಗೋಡು ತಾಲ್ಲೂಕುಗಳಿಂದ ಅರ್ಹರನ್ನು ಆಯ್ಕೆ ಮಾಡಿ ಸೆಪ್ಟೆಂಬರ್ 30 ರಿಂದ ಅಕ್ಟೋಬರ್ 04 ರವರೆಗೆ ಕೆಕೆಆರ್‌ಟಿಸಿ ಅಥವಾ ಇತರೆ ಸಾರಿಗೆ ಬಸ್ ಮತ್ತು ರೈಲಿನ ಮೂಲಕ ಹೋಗಿಬರಲು ಕಳುಹಿಸಿಕೊಡಲಾಗುವುದು.

ಅರ್ಜಿ ಸಲ್ಲಿಸಲು ಸೆ.09 ಕೊನೆಯ ದಿನವಾಗಿದೆ. ಅರ್ಜಿಗಳನ್ನು ಸಮಾಜ ಕಲ್ಯಾಣ ಇಲಾಖೆಯ ಆನ್ ಲೈನ್ ವೆಬ್ ಸೈಟ್ https://swd.karnataka.gov.in/ ನಲ್ಲಿ ಸಲ್ಲಿಸಿ, ಅದರ ಒಂದು ಕಾಪಿಯನ್ನು ಸಹಾಯಕ ನಿರ್ದೇಶಕರು ಗ್ರೇಡ್–1 ರವರ ಕಚೇರಿ, ಸಮಾಜ ಕಲ್ಯಾಣ ಇಲಾಖೆ, ಡಾ.ಬಿ.ಆರ್.ಅಂಬೇಡ್ಕರ್ ಭವನ, ಬಳ್ಳಾರಿ ಇಲ್ಲಿಗೆ ಸಲ್ಲಿಸಬೇಕು ಎಂದು ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## "ಸುದ್ದಿ ಮಾಧ್ಯಮದಲ್ಲಿ ಅಂಬೇಡ್ಕರ್ ದೃಷ್ಟಿಕೋನ": ಆ.30 ರಂದು ವಿಚಾರ ಸಂಕಿರಣ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಆ.28–ಕರ್ನಾಟಕ ಮಾಧ್ಯಮ ಅಕಾಡೆಮಿ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ, ಕರ್ನಾಟಕ ಎಸ್, ಎಸ್‌ಟಿ ಪತ್ರಿಕಾ ಸಂಪಾದಕರ ಸಂಘ ಹಾಗೂ ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘ ಇವರ ಸಂಯುಕ್ತ ಆಶ್ರಯದಲ್ಲಿ "ಸುದ್ದಿ ಮಾಧ್ಯಮದಲ್ಲಿ ಅಂಬೇಡ್ಕರ್ ದೃಷ್ಟಿಕೋನ" ವಿಷಯ ಕುರಿತು ಒಂದು ದಿನದ ವಿಚಾರ ಸಂಕಿರಣ ಕಾರ್ಯಕ್ರಮವನ್ನು ಆ.30 ರಂದು ಬೆಳಿಗ್ಗೆ 10 ಗಂ–ಟೆಗೆ ಚಿತ್ರದುರ್ಗ ನಗರದ ಪತ್ರಿಕಾ ಭವನದ "ಡಾ.ಬಿ.ಆರ್.ಅಂಬೇಡ್ಕರ್ ಸಭಾಂಗಣ"ದಲ್ಲಿ ಆಯೋಜಿಸಲಾಗಿದೆ.

ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಚಿತ್ರದುರ್ಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ.ಸುಧಾಕರ್ ಅವರು ಕಾರ್ಯಕ್ರಮ ಉದ್ಘಾಟಿಸುವರು.

ಡಾ.ಬಿ.ಆರ್.ಅಂಬೇಡ್ಕರ್ ಅವರ ಕ್ರಾಂತಿಕಾರಿ ಚಿಂತನೆಗಳು, ಇಂದಿನ ದಿನದಲ್ಲಿಯೂ ಅವುಗಳ ಪ್ರಸ್ತುತತೆ, ಪತ್ರಕರ್ತರಾಗಿ ಅವರ ಕೊಡುಗೆ ಮತ್ತು ಎಲ್ಲರನ್ನೂ ಒಳಗೊಂಡ ಸಮಾಜ ನಿರ್ಮಾಣಕ್ಕೆ ಮುಂದಿನ ಹಾದಿ ಮುಂತಾದ ವಿಷಯಗಳ ಚರ್ಚೆಗೆ ಈ ವಿಚಾರಸಂಕಿರಣವು ವೇದಿಕೆಯಾಗಲಿದೆ ಎಂದು ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಆಯೇಶಾ ಖಾನಂ ಅವರು ತಿಳಿಸಿದ್ದಾರೆ.

ಕಾರ್ಯಕ್ರಮದಲ್ಲಿ ಸಂಸದ ಗೋವಿಂದ ಎಂ.ಕಾರಜೋಳ ಅವರು ಘನ ಉಪಸ್ಥಿತಿ ವಹಿಸುವರು. ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ.ಪ್ರಭಾಕರ್ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ಹಿರಿಯ ಪತ್ರಕರ್ತ ಡಿ.ಉಮಾಪತಿ ಅವರು ದಿಕ್ಸೂಚಿ ಭಾಷಣ ಮಾಡುವರು.

ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಆಯೇಶಾ ಖಾನಂ ಅವರು ಅಧ್ಯಕ್ಷತೆ ವಹಿಸಲಿದ್ದು, ಪ್ರಾಸ್ತಾವಿಕವಾಗಿ ಮಾತನಾಡುವರು.


ಗೌರವಾನ್ವಿತ ಅತಿಥಿಗಳಾಗಿ ಚಿತ್ರದುರ್ಗ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿ, ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷರು ಹಾಗೂ ಹೊಸದುರ್ಗ ಶಾಸಕ ಬಿ.ಜಿ.ಗೋವಿಂದಪ್ಪ, ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಚಳ್ಳಕೆರೆ ಶಾಸಕ ಟಿ.ರಘುಮೂರ್ತಿ, ಮೊಳಕಾಲ್ಮೂರು ಶಾಸಕ ಎನ್.ವೈ.ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ.ಗೌಡ, ಕೆ.ಎಸ್.ನವೀನ್, ಡಿ.ಟಿ.ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ.ಬಿ.ಯೋಗೇಶ ಬಾಬು, ಆದಿಜಾಂಬವ ಅಭಿವೃದ್ಧಿ ನಿಗಮ ಮಂಡಳಿ ಅಧ್ಯಕ್ಷ ಜಿ.ಎಸ್. ಮಂಜುನಾಥ, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್ ಪೀರ್, ಚಿತ್ರದುರ್ಗ ನಗರಸಭೆ ಅಧ್ಯಕ್ಷೆ ಬಿ.ಎನ್.ಸುಮಿತ ರಾಘವೇಂದ್ರ, ಚಿತ್ರದುರ್ಗ ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಆರ್.ಶಿವಣ್ಣ ಮತ್ತು ಚಿತ್ರದುರ್ಗ ಜಿಲ್ಲಾಧಿಕಾರಿ ಟಿ.ವೆಂಕಟೇಶ್, ಜಿ.ಪಂ ಸಿಇಓ ಡಾ.ಎಸ್.ಆಕಾಶ್, ಜಿಲ್ಲಾ ಪೊಲೀಸ್ ಅಧೀಕ್ಷಕ ರಂಜಿತ್ ಕುಮಾರ್ ಬಂಡಾರು, ಕರ್ನಾಟಕ ರಾಜ್ಯ ಎಸ್ಸಿ, ಎಸ್ಟಿ ಪತ್ರಿಕಾ ಸಂಪಾದಕರ ಸಂಘದ ಅಧ್ಯಕ್ಷ ಚೆಲುವರಾಜು, ಚಿತ್ರದುರ್ಗ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದ ಅಧ್ಯಕ್ಷ ದಿನೇಶ್ ಗೌಡಗೆರೆ ಮುಂತಾದ ಗಣ್ಯಮಾನ್ಯರು ಭಾಗವಹಿಸುವರು.

ಕಾರ್ಯಕ್ರಮದ ಅಂಗವಾಗಿ ಅಂದು ಬೆಳಿಗ್ಗೆ 11.30 ಗಂಟೆಗೆ ಜರುಗುವ ಮೊದಲ ಗೋಷ್ಠಿಯಲ್ಲಿ ಶಿವಮೊಗ್ಗ ಟೆಲೆಕ್ಸ್ ದಿನಪತ್ರಿಕೆ ಸಂಪಾದಕ ರವಿಕುಮಾರ್.ಎನ್ ಅವರು "ಅಂಬೇಡ್ಕರ್ ಅವರ ಪತ್ರಿಕಾ ವೃತ್ತಿ" ಕುರಿತು ಹಾಗೂ ಸಾಮಾಜಿಕ ಚಿಂತಕ ವಿ.ಎಲ್.ನರಸಿಂಹಮೂರ್ತಿ ಅವರು "ಪತ್ರಕರ್ತರಾಗಿ ಅಂಬೇಡ್ಕರ್ ಅವರ ಬರವಣಿಗೆಗಳು" ಕುರಿತು ವಿಷಯ ಮಂಡಿಸುವರು.

ಮಧ್ಯಾಹ್ನ 2 ಗಂಟೆಗೆ ನಡೆಯುವ ಎರಡನೆ ಗೋಷ್ಠಿಯಲ್ಲಿ ಶಿವಮೊಗ್ಗದ ಕನ್ನಡ ಸಹಪ್ರಾಧ್ಯಾಪಕರಾದ ಡಾ.ಭಾರತಿದೇವಿ.ಪಿ ಅವರು "ಅಂಬೇಡ್ಕರ್ ದೃಷ್ಟಿಯಲ್ಲಿ ಲಿಂಗಸಮಾನತೆ" ಕುರಿತು ಹಾಗೂ ಬೆಳಗಾವಿಯ ದಿ ಹಿಂದೂ ಪತ್ರಿಕೆಯ ಹಿರಿಯ ಸಹಾಯಕ ಸಂಪಾದಕ ರಿಷಿಕೇಶ್ ಬಹದ್ದೂರ್ ದೇಸಾಯಿ ಅವರು "ಪತ್ರಕರ್ತರಲ್ಲಿ ಸಾಮಾಜಿಕ ನ್ಯಾಯದ ಪ್ರಜ್ಞೆ" ಕುರಿತು ವಿಷಯ ಮಂಡಿಸುವರು.

ಬಳಿಕ ಸಂಜೆ 04 ಗಂಟೆಗೆ ಜರುಗುವ ಸಮಾರೋಪ ಸಮಾರಂಭದಲ್ಲಿ ಹಿರಿಯ ಪತ್ರಕರ್ತರು ಹಾಗೂ ಅಂಕಣಕಾರರಾದ ಸನತ್ ಕುಮಾರ್ ಬೆಳಗಲಿ ಸಮಾರೋಪ ಭಾಷಣ ಮಾಡುವರು. ಚಿತ್ರದುರ್ಗ ಅಪರ ಜಿಲ್ಲಾಧಿಕಾರಿ ಬಿ.ಟಿ.ಕುಮಾರಸ್ವಾಮಿ ಹಾಗೂ ಡಾ.ಜೆ.ಕರಿಯಪ್ಪ ಮಾಳಿಗೆ ಅವರು ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು. ಕರ್ನಾಟಕ ಮಾಧ್ಯಮ ಅಕಾಡೆಮಿ ಅಧ್ಯಕ್ಷರಾದ ಆಯೇಶಾ ಖಾನಂ ಅವರು ಅಧ್ಯಕ್ಷತೆ ವಹಿಸುವರು. ಪತ್ರಕರ್ತರು ಹಾಗೂ ಆಸಕ್ತರು ಈ ಕಾರ್ಯಕ್ರಮದಲ್ಲಿ ಭಾಗವಹಿಸಬಹುದಾಗಿದೆ ಎಂದು ಕಾರ್ಯಕ್ರಮದ ಸಂಯೋಜಕರು ಹಾಗೂ ಮಾಧ್ಯಮ ಅಕಾಡೆಮಿ ಸದಸ್ಯರಾದ ಎಂ.ಎನ್.ಅಹೋಬಳಪತಿ ಹಾಗೂ ಅಕಾಡೆಮಿಯ ಕಾರ್ಯದರ್ಶಿ ಎಂ. ಸಹನಾ ಅವರು ತಿಳಿಸಿದ್ದಾರೆ.

## ಕವಲೂರು ಗ್ರಾಮದಲ್ಲಿ ದಾಲ್ ಮಿಲ್ ಘಟಕ ಉದ್ಘಾಟನೆ: ಸಂಜಿವಿನಿ ಸ್ವಸಹಾಯ ಸಂಘದ ಮಹಿಳೆಯರಿಂದ ಕಾರ್ಯನಿರ್ವಹಣೆ



ಮಲ್ಲಮ್ಮ ನುಡಿವಾರ್ತೆ

ಕೊಪ್ಪಳ:ಸಂಜೀವಿನಿ–ರಾಷ್ಟ್ರೀಯ ಗ್ರಾಮೀಣ ಜೀವನೋಪಾಯ ಅಭಿಯಾನ ಯೋಜನೆಯಡಿ ಬರುವ ಪ್ರಧಾನ ಮಂತ್ರಿ ವನಧನ ವಿಕಾಸ ಕೇಂದ್ರದಡಿ ಕವಲೂರು ಗ್ರಾಮದಲ್ಲಿ ಪ್ರಾರಂಭಿಸಿದ ದಾಲ್ ಮಿಲ್ ಘಟಕವನ್ನು ಮಂಗಳವಾರದಂದು ಕವಲೂರು ಗ್ರಾಮ ಪಂಚಾಯತ್ ಅಧ್ಯಕ್ಷರಾದ ಮಲ್ಲಮ್ಮ ಬಿಸರಹಳ್ಳಿ ರಿಬ್ಬನ್ ಕಟ್ ಮಾಡುವ ಮೂಲಕ ವನಧನ ವಿಕಾಸ ಕೇಂದ್ರದ ದಾಲ್ ಮಿಲ್ ಘಟಕಕ್ಕೆ ಚಾಲನೆ ನೀಡಿದರು.

ಕೊಪ್ಪಳ ತಾಲೂಕ ಪಂಚಾಯಯ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ ಮಾತನಾಡಿ, ಮಹಿಳೆಯರು ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಸಂಜೀವಿನಿ–ಎನ್‌ಆರ್‌ಎಲ್‌ಎಂ ಯೋಜನೆಯು ತುಂಬಾ ಸಹಕಾರಿಯಾಗಿದೆ. ಪ್ರಧಾನ ಮಂತ್ರಿ ವನಧನ ವಿಕಾಸ ಕೇಂದ್ರದಡಿ ಪರಿಶಿಷ್ಟ ಪಂಗಡ ವರ್ಗಕ್ಕೆ ಸೇರಿದ ಸ್ವಸಹಾಯ ಸಂಘದ ಮಹಿಳೆಯರಿಗಾಗಿ ದಾಲ್ ಮಿಲ್ ಘಟಕವನ್ನು ಪ್ರಾರಂಭಿಸಿದ್ದು, ಕೃಷಿ ಉತ್ಪನ್ನವನ್ನು ಮೌಲ್ಯವರ್ಧನೆ ಮಾಡಿ ಮಾರುಕಟ್ಟೆಗೆ ಸರಬರಾಜು ಮಾಡುವುದು ಯೋಜನೆಯ ಉದ್ದೇಶವಾಗಿದ್ದು ಇದನ್ನು ಸರಿಯಾಗಿ ಮುನ್ನಡೆಸಿಕೊಂಡು ಹೋಗಿ, ಉತ್ತಮ ಗುಣಮಟ್ಟದ ತೊಗರಿ ಬೇಳೆ, ಹೆಸರು ಬೇಳೆ, ಕಡ್ಲೆ ಬೇಳೆ ತಯಾರು ಮಾಡಿ ಮಾರುಕಟ್ಟೆಗೆ ಪೂರೈಕೆ ಮಾಡುವಂತೆ ಕರೆ ನೀಡಿದರು. ಇದರಿಂದ ಸಂಘದ ಮಹಿಳೆಯರು ತಮ್ಮ ಜೀವನ ಮಟ್ಟವನ್ನು ಸುಧಾರಿಸಿಕೊಳ್ಳಲು ಸಹಕಾರಿಯಾಗಿದೆ. ಈ ಯೋಜನೆಯನ್ನು ಸರಿಯಾಗಿ ಬಳಸಿಕೊಂಡು ಆರ್ಥಿಕ ಸಬಲರಾಗುವಂತೆ ಕರೆ ನೀಡಿದರು.

ಕಾರ್ಯಕ್ರಮದಲ್ಲಿ ಗ್ರಾಮ ಪಂಚಾಯತ್ ಉಪಾಧ್ಯಕ್ಷರಾದ ಅನ್ನಪೂರ್ಣ ಪೂಜಾರ್, ಪಂಚಾಯತ್ ಅಭಿವೃದ್ಧಿ ಅಧಿಕಾರಿ ಅನಿತಾ ಕಿಲ್ಲೇದ್, ಕಾರ್ಯದರ್ಶಿ ನೀಲಮ್ಮ, ಸಂಜೀವಿನಿ ಯೋಜನೆಯ ತಾಲೂಕ ಕಾರ್ಯಕ್ರಮ ವ್ಯವಸ್ಥಾಪಕ ಸುನೀಲ್, ಯುವ ವೃತ್ತಿಪರ ಮಂಜುನಾಥ, ಶರಣಪ್ಪ, ಕಲ್ಪವೃಕ್ಷ ಸಂಜೀವಿನಿ ಗ್ರಾಮ ಪಂಚಾಯತ್ ಮಟ್ಟದ ಒಕ್ಕೂಟದ ಅಧ್ಯಕ್ಷರಾದ ರೇಣುಕಾ ಜೋಗಿನ್, ಉಪಾಧ್ಯಕ್ಷರಾದ ಗೀತಾ, ಕಾರ್ಯದರ್ಶಿ ಹುಸೇನ್ ಬೀ, ಒಕ್ಕೂಟದ ಸರ್ವ ಸದಸ್ಯರು, ಒಕ್ಕೂಟದ ಸಿಬ್ಬಂದಿಗಳು ಸ್ವ ಸಹಾಯ ಸಂಘದ ಸದಸ್ಯರು ಉಪಸ್ಥಿತರಿದ್ದರು.

# ಶಿರೂರ ಪಿಕೆಪಿಎಸ್‌ಗೆ 9 ಲಕ್ಷ ರೂ. ನಿವ್ವಳ ಲಾಭ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.28–ಶಿರೂರ ಪಟ್ಟಣದ ಪ್ರಾಥಮಿಕ ಕೃಷಿ ಪತ್ತಿನ ಸಹಕಾರಿ ಸಂಘ ಕಳೆದ ಮಾರ್ಚ ಅಂತ್ಯಕ್ಕೆ 9 ಲಕ್ಷ ರೂ.ಗಳ ನಿವ್ವಳ ಲಾಭ ಗಳಿಸಿದೆ ಎಂದು ಸಂಘದ ಅಧ್ಯಕ್ಷ ಸಿದ್ದಪ್ಪ ಹಂಡರಗಲ್ಲ ತಿಳಿಸಿದರು.

ಮಂಗಳವಾರ ಜರುಗಿದ ಸಂಘದ ವಾರ್ಷಿಕ ಸರ್ವ ಸಾಧಾರಣ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಸಂಘದ ಪ್ರಗತಿಗೆ ರೈತರು, ಶೇರುದಾರರು ಹಾಗೂ ಸಾಲಗಾರರ ಸಹಕಾರ ಮುಖ್ಯವಾಗಿದೆ ಎಂದರು.

ಸಹಕಾರ ಸಂಘ ರೈತರ ಏಳಿಗೆಗೆ ಶ್ರಮಿಸುತ್ತಿದ್ದು, ಮುಂಗಾರು ಹಂಗಾಮಿಗೆ ಅಗತ್ಯಕ್ಕೆ ತಕ್ಕಂತೆ ರಸಗೊಬ್ಬರ ವಿತರಿಸಿದ್ದು, ಕೃಷಿ ಸಾಲವನ್ನು ಸಮರ್ಪಕವಾಗಿ ವಿತರಿಸಲಾಗಿದೆ. ನಿರ್ದೇಶಕ ಮಂಡಳಿಯ ಸಹಕಾರ, ಸಿಬ್ಬಂದಿಯ ಪ್ರಾಮಾಣಿಕ ಕೆಲಸದಿಂದಾಗಿ ಸಂಘ ಪ್ರಗತಿಯತ್ತ ಮುನ್ನಡೆದಿದೆ ಎಂದು ಹಂಡರಗಲ್ಲ ಹೇಳಿದರು.

ಅತಿಥಿಗಳಾಗಿದ್ದ ಸ್ಥಳಿಯ ಕೆನರಾ ಬ್ಯಾಂಕ್ ವ್ಯವಸ್ಥಾಪಕ ಅಶೋಕ ಪವಾರ, ರೈತರು ಸಹಕಾರಿ ಸಂಘಗಳಲ್ಲಿ ಕೃಷಿ ಸಾಲವನ್ನು ಪಡೆದು ಸಕಾಲಕ್ಕೆ ಮರುಪಾವತಿ ಮಾಡಿದರೆ ಸಂಘದ ಅಭಿವೃದ್ಧಿ ಸಾಧ್ಯವಾಗುತ್ತದೆ ಎಂದು ಹೇಳಿ, ಕೆನರಾ ಬ್ಯಾಂಕ ಸಹ ರೈತರಿಗೆ ಕೃಷಿ ಸೌಲಭ್ಯ ನೀಡುತ್ತಿದ್ದು, ಅದರ ಪ್ರಯೋಜನ ಪಡೆದುಕೊಳ್ಳಬೇಕು ಎಂದರು.

ಸಂಘದ ಸಹಾಯಕ ಮುಖ್ಯಕಾರ್ಯನಿರ್ವಾಹಕ ಎಂ.ಎಸ್.ನರೇಗಲ್ಲ ಲಾಭ ಹಾಗೂ ಹಾನಿ, ಅಢಾವೆ ಪತ್ರದ ವರದಿಯನ್ನು ಸಭೆಗೆ ಮಂಡಿಸಿದರು. ರೈತರು ಅನೇಕ ವಿಷಯಗಳ ಬಗ್ಗೆ ಚರ್ಚೆ ನಡೆಸಿದರು.

ಸಹಕಾರಿ ಸಂಘದಿಂದ ಅತಿ ಹೆಚ್ಚು ಗೊಬ್ಬರ ಖರೀದಿಸಿದ ರೈತ ಸೈದಪ್ಪ ಸಿಂಪಿ ಹಾಗೂ ರಾಜಶೇಖರ ಬಾವಲತ್ತಿ ಅವರನ್ನು ಸನ್ಮಾನಿಸಲಾಯಿತು. ಸಂಘದ ಉಪಾಧ್ಯಕ್ಷ ಭೀಮಪ್ಪ ದಾಸಪ್ಪನವರ, ಮುಖ್ಯಕಾರ್ಯನಿರ್ವಾಹಕ ಎಚ್.ಬಿ.ಬಾರಡ್ಡಿ, ನಿರ್ದೇಶಕರಾದ ಲಿಂಗಶೆಟ್ಟೆಪ್ಪ ಕೆರೂರ, ಈರಪ್ಪ ದೇಸಾನಿ, ಸಿದ್ದಪ್ಪ ಹಿರೇಕುಂಬಿ, ಮುದಕಪ್ಪ ಆಡಿನ, ಮುದಕಪ್ಪ ಬಿಲ್ಲಾರ, ಶಿವಕುಮಾರ ನಡುವಿನಮನಿ, ಶಿವಪುತ್ರಪ್ಪ ಕಟ್ಟಿಮನಿ, ಮಳಿಯಪ್ಪ ಮುದಗಲ್ಲ, ಪಾರವ್ವ ನೆರಕಿ, ಸಾವಿತ್ರಿ ಬಿರಾದಾರ ಇದ್ದರು.

# ರಂಗೋಲಿ ಸ್ಪರ್ಧೆ– ಪ್ರೇಮಾ, ನಾಗಮ್ಮ ಪ್ರಥಮ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.28–ತಾಲೂಕಿನ ರಾಂಪುರ ಪುನರ್ ವಸತಿ ಕೇಂದ್ರದ ಉದಯ ಯುವಕ ಮಿತ್ರ ಮಂಡಳಿ ಗಣೇಶ ಉತ್ಸವದ ಅಂಗವಾಗಿ ಬುಧವಾರ ಬಾಲಕಿಯರು ಹಾಗೂ ಮಹಿಳೆಯರಿಗಾಗಿ ಏರ್ಪಡಿಸಿದ್ದ ರಂಗೋಲಿ ಸ್ಪರ್ಧೆಯಲ್ಲಿ ಪ್ರೇಮಾ ಅಂಗಡಿ ಹಾಗೂ ನಾಗಮ್ಮ ಗೌಡರ ಪ್ರಥಮ ಬಹುಮಾನ ಪಡೆದುಕೊಂಡರು.

ಮಹಿಳೆಯರ ವಿಭಾಗದಲ್ಲಿ ಪ್ರೇಮಾ ಅಂಗಡಿ ಪ್ರಥಮ ಬಹುಮಾನ ಪಡೆದರೆ, ಅಶ್ವಿನಿ ಮಾದರ ದ್ವಿತೀಯ ಹಾಗೂ ನಕ್ಷತ್ರಾ ಹೊದ್ಲೂರ ತೃತೀಯ ಬಹುಮಾನ ಪಡೆದರು. ಬಾಲಕಿಯರ ವಿಭಾಗದಲ್ಲಿ ನಾಗಮ್ಮ ಗೌಡರ ಪ್ರಥಮ ಬಹುಮಾನ, ಕೀರ್ತಿ ಇಂಗಳೆ ದ್ವಿತೀಯ ಮತ್ತು ಕೀರ್ತಿ ಪವಾರ ತೃತೀಯ ಬಹುಮಾನ ಗಳಿಸಿದರು.

ರಂಗೋಲಿ ಸ್ಪರ್ಧೆಯನ್ನು ವನಜಾ ಗೌಡರ ಉದ್ಘಾಟಿಸಿದರು. ಜಯಶ್ರೀ ಇಂಗಳೆ, ರತ್ನಾಬಾಯಿ ಚವ್ಹಾಣ, ಶಾರದಾ ಗೌಡರ ಸೇರಿದಂತೆ ಅನೇಕ ಮಹಿಳೆಯರು, ಉದಯ ಯುವಕ ಮಿತ್ರ ಮಂಡಳಿ ಸದಸ್ಯರು ಪಾಲ್ಗೊಂಡಿದ್ದರು.

# ಪಡೆದ ಸಾಲ ಸಕಾಲಕ್ಕೆ ಮರಳಿಸಿ–ರುದ್ರಮುನಿ ಶ್ರೀಗಳು




ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.28–ಸಹಕಾರ ಸಂಘದಲ್ಲಿ ಸಾಲ ತೆಗೆದುಕೊಂಡವರು ಸಮಯಕ್ಕೆ ಸರಿಯಾಗಿ ಭರಣಾ ಮಾಡುವ ಮೂಲಕ ಸಂಘದ ಅಭಿವೃದ್ಧಿಯ ಜೊತೆಗೆ ಆರ್ಥಿಕ ತೊಂದರೆಯಲ್ಲಿದ್ದವರಿಗೆ ಸಹಾಯ ಮಾಡಲು ಸಹಕರಿಸಬೇಕು ಎಂದು ಗಿರಿಸಾಗರ ಕಲ್ಯಾಣ ಹಿರೇಮಠದ ರುದ್ರಮುನಿ ಶಿವಾಚಾರ್ಯ ಮಹಾಸ್ವಾಮಿಗಳು ಹೇಳಿದರು.

ಜಿಲ್ಲೆಯ ಬೀಳಗಿ ಪಟ್ಟಣದಲ್ಲಿ ಜ್ಞಾನಯೋಗಿ ಶ್ರೀ ಸಿದ್ದೇಶ್ವರ ಪತ್ತಿನ ಸಹಕಾರ ಸಂಘದ ಉದ್ಘಾಟನಾ ಕಾರ್ಯಕ್ರಮದ ಸಾನ್ನಿಧ್ಯ ವಹಿಸಿ ಮಾತನಾಡಿದ ಪೂಜ್ಯರು, ಸಾಲ ತೆಗೆದುಕೊಂಡು ಸದ್ಬಳಕೆ ಮಾಡಿಕೊಂಡು ಆರ್ಥಿಕವಾಗಿ ಅಭಿವೃದ್ಧಿ ಹೊಂದಬೇಕು ಎಂದರು.

ಹಟ್ಟಿ ಚಿನ್ನದ ಗಣಿ ನಿಗಮದ ಅಧ್ಯಕ್ಷರು, ಶಾಸಕ ಜೆ.ಟಿ.ಪಾಟೀಲ ಸಹಕಾರ ಸಂಘ ಉದ್ಘಾಟಿಸಿ ಮಾತನಾಡಿ, ಸಹಕಾರಿ ಸಂಘದ ಅಭಿವೃದ್ಧಿಗೆ ಆಡಳಿತ ಮಂಡಳಿಯ ಪ್ರಾಮಾಣಿಕ ಪ್ರಯತ್ನ ಮುಖ್ಯವಾಗಿದ್ದು, ಅಭಿವೃದ್ಧಿಯಲ್ಲಿ ಸಹಕಾರ ಸಂಘಗಳು ಪ್ರಮುಖ ಪಾತ್ರ ವಹಿಸುತ್ತವೆ. ಸದಸ್ಯರು ಸಾಲ ಸೌಲಭ್ಯ ಪಡೆದು ಸಮಯಕ್ಕೆ ಸರಿಯಾಗಿ ಪಾವತಿಸುವ ಮೂಲಕ ಸಂಘದ ಏಳಿಗೆಯಲ್ಲಿ ಪ್ರಮುಖ ಪಾತ್ರ ವಹಿಸಬೇಕು ಎಂದು ಹೇಳಿದರು.

ಮಾಜಿ ಸಚಿವ ಎಸ್.ಆರ್.ಪಾಟೀಲ ಕ್ಯಾಶ್ ಕೌಂಟರ್ ಉದ್ಘಾಟಿಸಿ ಮಾತನಾಡಿ, ಸಹಕಾರಿ ಸಂಘಗಳನ್ನು ಜಾತ್ಯಾತೀತ, ಪಕ್ಷಾತೀತ, ಧರ್ಮಾತೀತವಾಗಿ ಕಟ್ಟಿ ಮುನ್ನಡೆಸಿದಾಗ ಅಭಿವೃದ್ಧಿ ಹೊಂದಲು ಸಾಧ್ಯವಾಗುತ್ತದೆ. ಸಾಲಗಾರರನ್ನು ಮತ್ತು ಠೇವುದಾರರನ್ನು ಸಮಾನವಾಗಿ ಕಾಣಬೇಕು ಎಂದರು.

ಅನಗವಾಡಿ ಪಿಕೆಪಿಎಸ್ ಅಧ್ಯಕ್ಷ ಎಂ.ಬಿ.ಕಂಬಿ ಠೇವು ವಿಭಾಗವನ್ನು ಉದ್ಘಾಟಿಸಿದರು. ಸಂಘದ ಸಂಸ್ಥಾಪಕ ಅಧ್ಯಕ್ಷ ಡಿ.ಎಂ.ಸಾವಕಾರ ಅಧ್ಯಕ್ಷತೆ ವಹಿಸಿದ್ದರು. ಪ್ರವೀಣ ಮುರನಾಳ ಸ್ವಾಗತಿಸಿದರು. ಪ್ರಶಾಂತ ಪರಸಗೊಂಡ ವಂದಿಸಿದರು.

ಉಪಾಧ್ಯಕ್ಷ ಆರ್.ಬಿ.ನಬಿವಾಲೆ, ಪಂಚ ಗ್ಯಾರಂಟಿ ಅನುಷ್ಠಾನ ಸಮಿತಿ ತಾಲೂಕಾಧ್ಯಕ್ಷ ಅಣವೀರಯ್ಯ ಪ್ಯಾಟಿಮಠ, ಎಂ.ಎಸ್.ಕಾಳಗಿ, ಜಿಪಂ ಮಾಜಿ ಸದಸ್ಯ ಬಸವರಾಜ ಖೋತ, ಶ್ರೀಶೈಲ ಸೂಳಿಕೇರಿ, ಹನಮಂತ ಕಾಖಂಡಕಿ, ಎಸ್.ಎಸ್.ಅವಟಿ, ಎಸ್.ಡಿ.ನಾಗೋಡ, ಸಂಘದ ನಿರ್ದೇಶಕರಾದ ಎಸ್.ಎಸ್. ಸಜ್ಜನ, ಬಿ.ಎಂ.ಸಾಹುಕಾರ, ಮಹಾದೇವ ಆಸೋದಿ, ಪರಶು ಮಧಗುಣಕಿ, ಲಕ್ಷ್ಮಣ ಬಂಡಿವಡ್ಡರ, ಜಿ.ಜಿ.ಮೇಟಿ, ಮಂಜುನಾಥ ವಜ್ಜರಮಟ್ಟಿ, ವೈ.ಜಿ.ಹೊನ್ಯಾಳ, ಜಿ.ವೈ.ಬುಡ್ಡರ, ಪಿ.ಬಿ.ಮುರನಾಳ, ಆರ್.ಎಂ.ಕಂಬಾರ, ಮುಖಂಡರಾದ ಬಿ.ಆರ್.ಸೊನ್ನದ, ಆರ್.ಜಿ.ಪಾಟೀಲ, ಜಿ.ಕೆ.ತಳವಾರ, ಜಿ.ಆರ್.ಪಾಟೀಲ, ಎಸ್.ಸಿ.ಬೊಮ್ಮಣ್ಣವರ, ವಿ.ಜಿ.ರೇವಡಿಗಾರ, ಅಶೋಕ ಚೂರಿ, ಈರಸಂಗಪ್ಪ ಹಳ್ಳಿ ಮತ್ತಿತರಿದ್ದರು.

# ಆ.31 ರಿಂದ ತಾಲೂಕು ಮಟ್ಟದ ದಸರಾ ಕ್ರೀಡಾಕೂಟ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.28–ಜಿಲ್ಲೆಯ ಜಮಖಂಡಿ, ರಬಕವಿ–ಬನಹಟ್ಟಿ, ಮುಧೋಳ, ಬೀಳಗಿ, ಹುನಗುಂದ ಹಾಗೂ ಇಳಕಲ್ಲ ತಾಲ್ಲೂಕುಗಳ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟವನ್ನು ಜಿಲ್ಲಾ ಆಡಳಿತ, ಜಿಲ್ಲಾ ಪಂಚಾಯಿತಿ ಹಾಗೂ ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಗಳ ಸಂಯುಕ್ತ ಆಶ್ರಯದಲ್ಲಿ ಆಯೋಜಿಸಲಾಗಿದೆ.

ಬನಹಟ್ಟಿಯ ಎಸ್.ಆರ್.ಎ ಕಾಲೇಜು ಮೈದಾನದಲ್ಲಿ ರಬಕವಿ–ಬನಹಟ್ಟಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಆಗಸ್ಟ್ 31ರಂದು ಮತ್ತು ಜಮಖಂಡಿ ತಾಲ್ಲೂಕು ಕ್ರೀಡಾಂಗಣದಲ್ಲಿ ಜಮಖಂಡಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಸೆಪ್ಟೆಂಬರ್ 01ರಂದು ನಡೆಯಲಿದ್ದು, ಭಾಗವಹಿಸಲು ಇಚ್ಚಿಸುವವರು, ಜಮಖಂಡಿ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಪಿ.ಎಸ್ ನಂದೀಶ (7795778166), ಮೆಹಬೂಬ್ ಚನಾಳ (9739419939) ಇವರನ್ನು ಸಂಪರ್ಕಿಸಬಹುದು.

ಮುಧೋಳದ ಕವಿ ಚಕ್ರವರ್ತಿ ರನ್ನ ಕ್ರೀಡಾಂಗಣದಲ್ಲಿ ಮುಧೋಳ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಸೆಪ್ಟೆಂಬರ್ 01ರಂದು ನಡೆಯಲಿದ್ದು, ಭಾಗವಹಿಸಲು ಇಚ್ಚಿಸುವವರು ಮುಧೋಳ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಶ್ರೀಶೈಲ ಎಂ.ಕುರಣಿ (9008377875), ಅನಿತಾ ನಿಂಬರಗಿ (9449959064), ಅರುಣಕುಮ ಕಾಲೆ (9740268539) ಅವರನ್ನು ಸಂಪರ್ಕಿಸಬಹುದು.

ಬೀಳಗಿಯ ವೀರ ಸಿಂಧೂರ ಲಕ್ಷ್ಮಣ ಕ್ರೀಡಾಂಗಣದಲ್ಲಿ ಬೀಳಗಿ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಸೆಪ್ಟೆಂಬರ್ 02 ರಂದು ನಡೆಯಲಿದ್ದು, ಭಾಗವಹಿಸಲು ಇಚ್ಚಿಸುವವರು ಬೀಳಗಿ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಸಂಗಪ್ಪ ಎತ್ತಿನಮನಿ (7337618472), ಅಡಿವೆಪ್ಪ ಅವಟಿ (9964360065) ಅವರನ್ನು ಸಂಪರ್ಕಿಸಬಹುದು.

ಹುನಗುಂದ ತಾಲ್ಲೂಕು ಕ್ರೀಡಾಂಗಣದಲ್ಲಿ ಹುನಗುಂದ ಮತ್ತು ಇಳಕಲ್ಲ ತಾಲ್ಲೂಕುಗಳ ತಾಲ್ಲೂಕು ಮಟ್ಟದ ದಸರಾ ಕ್ರೀಡಾಕೂಟ ಸೆಪ್ಟೆಂಬರ್ 04 ಮತ್ತು 05 ರಂದು ನಡೆಯಲಿದ್ದು, ಭಾಗವಹಿಸಲು ಇಚ್ಚಿಸುವವರು ಹುನಗುಂದ ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರಾದ ಶಿವಶಂಕರಗೌಡ ಪೈಲ್ (9611860391), ಕಾಡೇಶ್ ನ್ಯಾಮಗೌಡ (8792507212), ನಾಗರಾಜ್ ಹೊಸೂರ (944922009) ಅವರನ್ನು ಸಂಪರ್ಕಿಸಬಹುದು.

ಅಥ್ಲೆಟಿಕ್ಸ್, ವಾಲಿಬಾಲ್, ಫುಟ್ಬಾಲ್, ಖೋಖೋ, ಕಬಡ್ಡಿ, ಥ್ರೋಬಾಲ್ ಮತ್ತು ಯೋಗಾಸನ ಕ್ರೀಡೆಗಳನ್ನು ಆಯೋಜಿಸಲಾಗಿದ್ದು, ಸ್ಪರ್ಧಾಳುಗಳು ಸೂಕ್ತದಾಖಲೆಗಳೊಂದಿUÉhttps://dasaracmcup-2025.etrpindia.com/KA-sports/ ಲಿಂಕ್ ಬಳಸಿ ಆನ್‌ಲೈನ್ ನೊಂದಣಿ ಮಾಡಿಕೊಳ್ಳಬೇಕು ಎಂದು ಯುವ ಸಬಲೀಕರಣ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಗುರು ಪಾದ ಡೂಗನವರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೆಡಿಕಲ್ ಕಾಲೇಜಿನಲ್ಲಿ ಸಂಭ್ರಮದ ಗಣೇಶೋತ್ಸವ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.28–ಗಣೇಶೋತ್ಸವ ಆಚರಣೆಯ ಹಿಂದೆ ಸ್ವಾತಂತ್ರ್ಯ ಹೋರಾಟದ ಚರಿತ್ರೆ ಇದೆ. ಲೋಕಮಾನ್ಯ ಬಾಲಗಂಗಾಧರ ತಿಲಕರು ಸ್ವಾತಂತ್ರ್ಯ ಹೋರಾಟಕ್ಕಾಗಿ ಜನರಲ್ಲಿ ಏಕತೆಯನ್ನು ತರಲು ಸಾರ್ವಜನಿಕ ಗಣೇಶೋತ್ಸವದ ಆಚರಣೆಗೆ ಚಾಲನೆ ನೀಡಿದರು ಎಂದು ಬಸವೇಶ್ವರ ವೀರಶೈವ ವಿದ್ಯಾವರ್ಧಕ ಸಂಘದ ಕಾರ್ಯಾಧ್ಯಕ್ಷ ವೀರಣ್ಣ ಚರಂತಿಮಠ ಹೇಳಿದರು.

ನಗರದ ಬಿ.ವಿ.ವಿ.ಸಂಘದ ಎಸ್.ನಿಜಲಿಂಗಪ್ಪ ವೈದ್ಯಕೀಯ ಮಹಾವಿದ್ಯಾಲಯದಲ್ಲಿ ವೈದ್ಯಕೀಯ ವಿದ್ಯಾರ್ಥಿಗಳಿಂದ ಪ್ರತಿಷ್ಠಾಪಿಸಲಾದ ಗಣೇಶನ ದರ್ಶನ ಪಡೆದ ಅವರು, ಗಣೇಶೋತ್ಸವ ರಾಷ್ಟ್ರಪ್ರೇಮದ ಸಂಕೇತವಾಗಿದೆ. ಇದು ಸಾಂಸ್ಕೃತಿಕ ಹಬ್ಬ ಕೂಡ ಹೌದು. ಗಣೇಶ ಎಲ್ಲರಿಗೂ ಒಳ್ಳೆಯದನ್ನು ಮಾಡಲಿ. ವಿದ್ಯಾರ್ಥಿಗಳು ತಮ್ಮ ವ್ಯಾಸಂಗದಲ್ಲಿ ಉನ್ನತಿಯನ್ನು ಸಾಧಿಸಲಿ ಎಂದು ಹಾರೈಸಿದರು.

ಈ ಸಂದರ್ಭದಲ್ಲಿ ವೈದ್ಯಕೀಯ ಆಡಳಿತ ಮಂಡಳಿ ಕಾರ್ಯಾಧ್ಯಕ್ಷ ಅಶೋಕ ಸಜ್ಜನ (ಬೇವೂರ), ಮೆಡಿಕಲ್ ಕಾಲೇಜ್ ಪ್ರಾಚಾರ್ಯರಾದ ಡಾ.ಭುವನೇಶ್ವರಿ ಯಳಮಲಿ, ವೈದ್ಯರಾದ ಡಾ.ಸಿ.ಎಸ್.ಹಿರೇಮಠ, ಡಾ.ಮಂಜುಳಾ ಪಾಟೀಲ, ಡಾ.ಮಹಾಂತೇಶ ಭೂತಾಳ, ಡಾ.ಸಂತೋಷ ಶೀಲವಂತ, ವಿದ್ಯಾರ್ಥಿ ಪ್ರತಿನಿಧಿಗಳಾದ ಜಾಹ್ನವಿ, ವಿಠ್ಠಲ, ಸುದರ್ಶನ, ಲಿಖಿತಾ ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

## CHANGE OF NAME

I, KHAJAMOINUDDIN S/O CHAND PATEL (Old name) resident of Yenkur Tq:Bhalki Dist: Bidar-585328 have changed my new name as KHAJAMAINODDIN S/O CHAND PATEL resident of Yenkura, Tq:Bhalki Dist: Bidar-585328 .sworn before affidavit Pandurang K. Nimbekar Advocate & Notary PUBLIC Humnabad. Date 28-03-2025.

# ಪೊಲೀಸ್ ತಂಡದಿಂದ ಪಥ ಸಂಚಲನ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.28–ಗಣೇಶ ಹಬ್ಬ ಹಾಗೂ ಈದ್–ಮಿಲಾದ ಹಬ್ಬದ ನಿಮಿತ್ಯ ಬಾಗಲಕೋಟೆ ನಗರ ಪ್ರದೇಶದಲ್ಲಿ ಯಾವುದೇ ಅಹಿತಕರ ಘಟನೆ ನಡೆಯದಂತೆ ಮುಂಜಾಗ್ರತವಾಗಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳ ನೇತೃತ್ವದಲ್ಲಿ ಪೊಲೀಸ್, ರಾಪಿಡ್ ಆಕ್ಷನ್ ಪೋರ್ಸ ತಂಡದಿಂದ ಪಥ ಸಂಚಲನ ನಡೆಸಲಾಯಿತು.

ಪಥ ಸಂಚಲನ ಬಾಗಲಕೋಟೆ ಶಹರದ ಸೂಕ್ಷ್ಮ ಪ್ರದೇಶದಲ್ಲಿ ಹಾಗೂ ಪ್ರಮುಖ ರಸ್ತೆಗಳಲ್ಲಿ ಸಂಚರಿಸಿತು. ಪಥ ಸಂಚಲನದಲ್ಲಿ ಆರ್‌ಎಎಫ್‌ನ ಡೆಪ್ಯೂಟಿ ಕಮಾಂಡೆಂಟ್ ರಮನಸಿಂಗ್ ಬ್ರಿಷ್ಟ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಮಹಾಂತೇಶ್ವರ ಜಿದ್ದಿ, ಉಪವಿಭಾಗಾಧಿಕಾರಿ ಗಜಾನನ ಸುತಾರ, ಶಹರ ಪೊಲೀಸ್ ಠಾಣೆಯ ಇನ್ಸಪೆಕ್ಟರ ಗುರುನಾಥ ಚವ್ಹಾಣ ಪಾಲ್ಗೊಂಡಿದ್ದರು.

# ಗೋವನಕೊಪ್ಪ ಹಾನಿಗೊಳಗಾದ ಬೆಳೆ ವೀಕ್ಷಿಸಿದ ಡಿಸಿ ಜಂಟೀ ಸಮೀಕ್ಷೆ ನಡೆಸಿ ಪರಿಹಾರಕ್ಕೆ ವರದಿ–ಸಂಗಪ್ಪ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.28–ಮಲಪ್ರಭಾ ನದಿ ಪ್ರವಾಹದಿಂದ ಹಾನಿಗೊಳಗಾದ ಬಾದಾಮಿ ತಾಲೂಕಿನ ಗೋವನಕೊಪ್ಪ ಗ್ರಾಮದ ಕೃಷಿ, ತೋಟಗಾರಿಕೆ ಬೆಳೆ ಹಾಗೂ ಶಾಲಾ ಕೊಠಡಿಗಳನ್ನು ಜಿಲ್ಲಾಧಿಕಾರಿ ಸಂಗಪ್ಪ ಗುರುವಾರ ವೀಕ್ಷಣೆ ಮಾಡಿದರು.

ಅತಿವೃಷ್ಟಿ, ಪ್ರವಾಹದಿಂದ ಸರ್ವೆ ನಂ.11–1ರ ಭೀಮಪ್ಪ ಹೂವಪ್ಪ ಯರಗೊಪ್ಪ ಅವರ ಜಮೀನಿನಲ್ಲಿ ಹಾನಿಗೊಳಗಾದ ಈರುಳ್ಳಿ ಬೆಳೆ, ಸರ್ವೆ ನಂ.49–2ರ ಬಾಳಪ್ಪ ಕೊಟಗಿ ಜಮೀನಿನಲ್ಲಿ ಬೆಳೆದ ಪೇರಲ, ಸರ್ವೆ ನಂ.50–3ರ ತುಳಸಿಗಿರೆಪ್ಪ ಸಣ್ಣಪ್ಪನವರ, ಸರ್ವೆ ನಂ.50–4ರ ಹೂಳಿಯಪ್ಪ ಸಣ್ಣಪ್ಪನವರ ಜಮೀನಿನಲ್ಲಿ ಬೆಳೆದ ಕಬ್ಬು ಹಾಗೂ ಸರ್ವೆ ನಂ.8–6 ಯಂಕಪ್ಪ ಕರಕಿಕಟ್ಟಿ ಅವರ ಜಮೀನಿನಲ್ಲಿ ಬೆಳೆದ ಮೆಕ್ಕೆಜೋಳ ಬೆಳೆಗಳನ್ನು ವೀಕ್ಷಣೆ ಮಾಡಿದ ಜಿಲ್ಲಾಧಿಕಾರಿಗಳು, ಜಮೀನಿನಲ್ಲಿ ನೀರಿನ ಮಟ್ಟ ಕಡಿಮೆಯಾದ ನಂತರ ವಿವಿಧ ಇಲಾಖೆಯಿಂದ ಜಂಟಿ ಸಮೀಕ್ಷೆ ಕೈಗೊಂಡು ಸೂಕ್ತ ಪರಿಹಾರಕ್ಕಾಗಿ ಸರಕಾರಕ್ಕೆ ವರದಿ ಸಲ್ಲಿಸಲಾಗುವುದು ಎಂದು ತಿಳಿಸಿದರು.

ಗೋವನಕೊಪ್ಪ ಗ್ರಾಮದ ಸರ್ಕಾರಿ ಪ್ರೌಢ ಶಾಲೆಗೂ ಭೇಟಿ ನೀಡಿದ ಅವರು, ಶಿಥಿಲಗೊಂಡ ಶಾಲಾ ಕೊಠಡಿಗಳನ್ನು ನೋಡಿ, ತಾತ್ಕಾಲಿಕ ಶೆಡ್ಡಗಳನ್ನು ನಿರ್ಮಾಣ ಮಾಡುವ ಮೂಲಕ ವಿದ್ಯಾರ್ಥಿಗಳಿಗೆ ಪಾಠ ಬೋಧನೆಗೆ ತೊಂದರೆಯಾಗದಂತೆ ಕ್ರಮಕೈಗೊಳ್ಳಲು ಮುಖ್ಯೋಪಾಧ್ಯಾಯರಿಗೆ ಸೂಚನೆ ನೀಡಿದರು.

ನಂತರ ಗ್ರಾಮದ ಸೇತುವೆಯ ನೀರಿನ ಮಟ್ಟವನ್ನು ಪರಿಶೀಲಿಸಿದರು. ನದಿ ಪಾತ್ರದಲ್ಲಿ ಒತ್ತುವರಿಯಾಗಿರುವುದನ್ನು ಗಮನಿಸಿ, ಕರ್ನಾಟಕ ರಾಜ್ಯ ದೂರ ಸಂವೇದಿ ಅನ್ವಯ ಕೇಂದ್ರ (KSRSASC)ದಿಂದ ಕೂಡಲೇ ನಕಾಶೆಯನ್ನು ಪಡೆದು ಒತ್ತುವರಿ ತೆರವುಗೊಳಿಸಲು ಕ್ರಮಕೈಗೊಳ್ಳುವಂತೆ ಬಾದಾಮಿ ತಹಶೀಲ್ದಾರ ಕಾವ್ಯಶ್ರೀಗೆ ಸೂಚಿಸಿದರು.

ಈ ಸಂದರ್ಭದಲ್ಲಿ ಸಹಾಯಕ ಕೃಷಿನಿರ್ದೇಶಕ ಅಶೋಕ ತಿರಕನ್ನವರ, ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕ ಬಾಳನಗೌಡ ಪಾಟೀಲ, ಕುಳಗೇರಿ ಹೋಬಳಿ ಮಟ್ಟದ ಕಂದಾಯ ನಿರೀಕ್ಷಕ ಶ್ರೀಧರ ವಿಶ್ವಕರ್ಮ ಹಾಗೂ ಗ್ರಾಮ ಲೆಕ್ಕಾಧಿಕಾರಿ ಬಸವರಾಜ

## ಸೇಲ್‌ಡೀಡ್ ಡಾಕುಮೆಂಟ್ ಕಳೆದಿವೆ

ನಾನು ಶ್ರೀ ಮಹಮದ ಮಕಬೂಲ ಅಹಮದ ತಂದೆ ಮಹಮದ ಮಸ್ತಾನ ಅಲಿ ಇಬ್ರಾಹಿಂ ಭಾಯಿ ವಾಲೆ ಸಾ.ಚಿರಾಗ ಗಲ್ಲಿ ಚಿಟಗುಪ್ಪ ತಾ.ಚಿಟಗುಪ್ಪ ಆದ ನಾನು ಚಿಟಗುಪ್ಪದಿಂದ ಮುಸ್ತರಿ ಗ್ರಾಮಕ್ಕೆ ತೆರಳುವಾಗ ನನ್ನ ಒರಿಜಿನಲ್ ಹೊಲದ ಸೇಲ್‌ಡೀಡ್ ಕಾಗದಗಳನ್ನು ಆಕಸ್ಮಿಕವಾಗಿ ಕಳೆದು ಹೋಗಿರುತ್ತವೆ. ಸೇಲ್‌ಡೀಡ್ ಡಾಕುಮೆಂಟ್ ಸಂಖ್ಯೆ:3819/1995–96 ಹೊಲದ ಸರ್ವೆ ಸಂಖ್ಯೆ: 249/B1 2 ಎಕರೆ 30ಗುಂಟೆ ಇರುತ್ತದೆ. ಈ ಡಾಕುಮೆಂಟ್‌ಗಳನ್ನು ಯಾರಿಗಾದರೂ ದೊರಕಿದರೆ ಸಂಪರ್ಕಿಸಿ:9480719964

# ರಾಜ್ಯ ಪ್ರಶಸ್ತಿಗೆ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಆ.28–ರಾಜ್ಯ ಸರ್ಕಾರ ವಿಶ್ವ ವಿಕಲಚೇತನರ ದಿನಾಚರಣೆ (ಡಿಸೆಂಬರ್ 3) ಅಂಗವಾಗಿ ವಿಕಲಚೇತನರ ಸಬಲೀಕರಣಕ್ಕಾಗಿ ಕಾರ್ಯನಿರ್ವಹಿಸುವ ವೈಯಕ್ತಿಕರು, ವಿಶೇಷ ಶಿಕ್ಷಕರು ಹಾಗೂ ಸಂಘ–ಸಂಸ್ಥೆಗಳಿಗೆ ರಾಜ್ಯ ಪ್ರಶಸ್ತಿ ನೀಡಲು ನಿರ್ಧರಿಸಿದೆ.

ಆಸಕ್ತರು ನಿಗದಿತ ಅರ್ಜಿ ನಮೂನೆಯಲ್ಲಿ ಮಾಹಿತಿಯನ್ನು ಭರ್ತಿ ಮಾಡಿ 2 ಪ್ರತಿಗಳ ಪ್ರಸ್ತಾವನೆಗಳು ಹಾಗೂ ಅಗತ್ಯ ದಾಖಲೆಗಳೊಂದಿಗೆ ಅಕ್ಟೋಬರ್ 15ರೊಳಗೆ ಕಚೇರಿ ವೇಳೆಯಲ್ಲಿ ಜಿಲ್ಲಾ ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಜಿಲ್ಲಾ ಆಡಳಿತ ಭವನ, ಕೊಠಡಿ ಸಂಖ್ಯೆ–05, ಬಾಗಲಕೋಟೆ ಕಚೇರಿಗೆ ಸಲ್ಲಿಸಬೇಕು.

ಹೆಚ್ಚಿನ ಮಾಹಿತಿಗಾಗಿ ದೂರವಾಣಿ ಸಂಖ್ಯೆ 08354–220766 ಅಥವಾ ಬಾಗಲಕೋಟೆ ಜಿಲ್ಲಾ ಸಂಯೋಜಕ ಪ್ರತಿಭಾ ಮಾದರ ದೂರವಾಣಿ ಸಂಖ್ಯೆ 9606151149, ಬಾಗಲಕೋಟೆ ತಾಲೂಕು ಪಂಚಾಯಿತಿ ಪಾಂಡು ಲಮಾಣಿ 9611045778, ಬದಾಮಿ ತಾಲೂಕು ಪಂಚಾಯಿತಿ ಹಾಗೂ ಗುಳೇದಗುಡ್ಡ ತಾಲೂಕು ಪಂಚಾಯಿತಿ ಎಮ್.ಬಿ.ಪಾಟೀಲ 9481135932, ತಾಲೂಕು ಪಂಚಾಯಿತಿ ಹುನಗುಂದ ಮತ್ತು ತಾಲೂಕು ಪಂಚಾಯಿತಿ ಇಲಕಲ್ಲ ಎಸ್.ಟಿ.ಬಿರಗೊಂಡ, 8970565869, ತಾಲೂಕು ಪಂಚಾಯಿತಿ ಬೀಳಗಿ ಕಾವ್ಯ ಛಬ್ಬಿ 7676980002, ತಾಲೂಕು ಪಂಚಾಯಿತಿ ಮುಧೋಳ ಎಮ್.ಬಿ.ಮುದ್ನೂರ 9008173773, ತಾಲೂಕು ಪಂಚಾಯಿತಿ ಜಮಖಂಡಿ ಎನ್.ಬಿ.ಹನಗಂಡಿ 9900417764, ತಾಲೂಕು ಪಂಚಾಯಿತಿ ರಬಕವಿ ಬನಹಟ್ಟಿ ಶಬ್ಬಿರ ಆರ್ ಪಕಾಲಿ 9739936205 ಸಂಯೋಜಕರನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಪಟ್ಟದ್ದೇವರ ಅಮೃತ ಮಹೋತ್ಸವಕ್ಕೆ ಆಹ್ವಾನ



ಮಲ್ಲಮ್ಮನುಡಿವಾರ್ತೆಭಾಲ್ಕಿ:ಅ.28: ಪಟ್ಟಣದಲ್ಲಿ 2026ರ ಏ.20, 21 ಮತ್ತು 22ರಂದು ಆಚರಿಸಲು ಉದ್ದೇಶಿಸಿರುವ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭಕ್ಕೆ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಆಹ್ವಾನಿಸಲಾಗಿದೆ.

ನವದೆಹಲಿಯ ರಾಷ್ಟ್ರಪತಿ ಭವನದಲ್ಲಿ ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರ ಸಾನ್ನಿಧ್ಯದಲ್ಲಿ ಬುಧವಾರ ರಾಷ್ಟ್ರಪತಿ ದ್ರೌಪದಿ ಮುರ್ಮು ಅವರನ್ನು ಭೇಟಿಯಾಗಿ ಬಸವಣ್ಣನವರ ಭಾವಚಿತ್ರ ನೀಡಿ ಗೌರವಿಸಲಾಯಿತು.12ನೇಯ ಶತಮಾನದಲ್ಲಿ ಬಸವಕಲ್ಯಾಣ ನೆಲದಲ್ಲಿ ಬಸವಾದಿ ಶರಣರು ಮನುಕುಲದ ಸಮಾನತೆಗಾಗಿ ಕ್ರಾಂತಿ ನಡೆಸಿದ್ದಾರೆ. ವಿಶ್ವಕ್ಕೆ ಮೊದಲ ಪ್ರಜಾಪ್ರಭುತ್ವ ಪರಿಕಲ್ಪನೆ ನೀಡಿದ್ದು

> ಬಸವತತ್ವ ಮತ್ತು ಸಮಾಜ ಸೇವೆಗೆ ಬದುಕು ಮುಡಿಪಾಗಿಟ್ಟಿರುವ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರ ಅಮೃತ ಮಹೋತ್ಸವ ಸಮಾರಂಭಕ್ಕೆ ರಾಷ್ಟ್ರಪತಿಗಳನ್ನು ಆಹ್ವಾನಿಸಿದ್ದೇವೆ. ಅವರು ಸಕಾರಾತ್ಮಕವಾಗಿ ಸ್ಪಂದಿಸಿದ್ದು ಪೂಜ್ಯರ ಸಮಾರಂಭದಲ್ಲಿ ಭಾಗವಹಿಸುವ ನಿರೀಕ್ಷೆಯಿದೆ.
> – ಗುರುಬಸವ ಪಟ್ಟದ್ದೇವರು ಹಿರೇಮಠ ಸಂಸ್ಥಾನ ಭಾಲ್ಕಿ

ಅನುಭವ ಮಂಟಪ.ಬಸವಣ್ಣನವರ ನಂತರ ಶತಾಯಷಿ ಡಾ.ಚನ್ನಬಸವ ಪಟ್ಟದ್ದೇವರು ಅನುಭವ ಮಂಟಪ ಪೂನರ್ ನಿರ್ಮಿಸಿ ವಚನ ಸಾಹಿತ್ಯವನ್ನು ಜಗದಗಲ ತಲುಪಿಸುವ ಕೆಲಸ ಮಾಡಿದ್ದಾರೆ.ಅಂತಹ ಪೂಜ್ಯರ ಮಾರ್ಗದಲ್ಲಿ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ನಡೆದು ಅನುಭವ ಮಂಟಪದ ಅಧ್ಯಕ್ಷರಾಗಿ ಬಸವತತ್ವ ಮತ್ತಷ್ಟು ವೇಗವಾಗಿ ಜಾಗತಿಕ ಮಟ್ಟಕ್ಕೆ ಮುಟ್ಟಿಸಿವುದರ ಜತೆಗೆ ಶೈಕ್ಷಣಿಕ, ಸಾಮಾಜಿಕ, ಸಾಹಿತ್ಯಿಕ ಕ್ಷೇತ್ರದಲ್ಲಿ ಅದ್ಭುತ ಕೊಡುಗೆ ನೀಡುತ್ತಿದ್ದಾರೆ.

ಅಂತಹ ಪೂಜ್ಯರಿಗೆ ಎಪ್ಪತ್ತೈದು ವಸಂತಗಳನ್ನು ತುಂಬಿದ್ದು, ಅವರ ಅಮೃತ ಮಹೋತ್ಸವ 2026ರ ಏಪ್ರಿಲ್ ತಿಂಗಳಲ್ಲಿ ಅರ್ಥಪೂರ್ಣವಾಗಿ ಆಯೋಜಿಸಲು ಅಮೃತ ಮಹೋತ್ಸವ ಸ್ವಾಗತ ಸಮಿತಿ ತೀರ್ಮಾನಿಸಿದೆ.

ಹಾಗಾಗಿ ಈ ಐತಿಹಾಸಿಕ ಕಾರ್ಯಕ್ರಮದಲ್ಲಿ ಭಾಗವಹಿಸುವಂತೆ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು ರಾಷ್ಟ್ರಪತಿಗಳಲ್ಲಿ ಮನವಿ ಮಾಡಿದರು.

ಈ ಸಂದರ್ಭದಲ್ಲಿ ಸಂಸದ ಸಾಗರ ಖಂಡ್ರೆ ಮತ್ತು ರಾಜ್ಯ ಮಕ್ಕಳ ಹಕ್ಕುಗಳ ರಕ್ಷಣಾ ಆಯೋಗದ ಸದಸ್ಯ ಶಶಿಧರ ಕೋಸಂಬೆ ಜತೆಗಿದ್ದರು

# ಡಿಪೋ ಮ್ಯಾನೇಜರ್ ಕಿರುಕುಳ: ಚಾಲಕ ಬಸ್‌ನಲ್ಲೇ ನೇಣಿಗೆ ಶರಣು



ಮಲ್ಲಮ್ಮ ನುಡಿ ವಾರ್ತೆ ಬೀದರ. ಆ. 28 : ಜಿಲ್ಲೆಯ ಬೀದರ್ ಡಿಪೋ ನಂ.1ರಲ್ಲಿ ಕಾರ್ಯನಿರ್ವಹಿಸುತ್ತಿದ್ದ ಸಾರಿಗೆ ಬಸ್ ಚಾಲಕನೊಬ್ಬ ಡಿಪೋ ಮ್ಯಾನೇಜರ್ ಕಿರುಕುಳಕ್ಕೆ ಬೇಸತ್ತು ಆತ್ಮಹತ್ಯೆ ಮಾಡಿಕೊಂಡಿರುವ ದುರ್ಘಟನೆ ಬೆಳಕಿಗೆ ಬಂದಿದೆ. ಆಣದೂರು ಗ್ರಾಮದ ನಿವಾಸಿ ರಾಜಪ್ಪ (59) ಬಳ್ಳಾರಿ–ಬೀದರ್ ಮಾರ್ಗದ ಸ್ಲಿಪರ್ ಕೋಚ್ ಬಸ್‌ನಲ್ಲಿ ಚಾಲಕರಾಗಿ ಸೇವೆ ಸಲ್ಲಿಸುತ್ತಿದ್ದರು.

ದುಃಖಕರ ಸಂಗತಿಯಾಗಿಯೇ, ಅವರು ತಮ್ಮ ಕರ್ತವ್ಯ ನಿರ್ವಹಿಸುತ್ತಿದ್ದ ಅದೇ ಬಸ್‌ನಲ್ಲಿಯೇ ನೇಣು ಬಿಗಿದು ಆತ್ಮಹತ್ಯೆ ಮಾಡಿಕೊಂಡಿದ್ದಾರೆ.

ರಾಜಪ್ಪ ಆರು ಹೆಣ್ಣುಮಕ್ಕಳ ತಂದೆಯಾಗಿದ್ದು, ಅವರ ಕುಟುಂಬ ಆರ್ಥಿಕವಾಗಿ ಹಿಂದುಳಿದಿದೆ. ಕುಟುಂಬಕ್ಕೆ ಸಂಪೂರ್ಣ ಆಧಾರವಾಗಿದ್ದ ರಾಜಪ್ಪ ಅಕಾಲಿಕವಾಗಿ ಮೃತಪಟ್ಟ ಪರಿಣಾಮ ಕುಟುಂಬಕ್ಕೆ ದಿಕ್ಕೇ ತೋಚದಂತಾಗಿದೆ. ಶೀಘ್ರದಲ್ಲೇ ನಿವೃತ್ತಿ ಪಡೆಯಬೇಕಾಗಿದ್ದ ಅವರ ಜೀವನ ಅಂತ್ಯ ಕಂಡಿರುವುದು ಹೃದಯ ಕಲುಕುವ ಸಂಗತಿ.

**ಮ್ಯಾನೇಜರ್ ಕಿರುಕುಳ**

ಬೀದರ್ ಡಿಪೋ ಮ್ಯಾನೇಜರ್ ವಿಠ್ಠಲ್ ಬೋವಿ ನಿರಂತರ ಕಿರುಕುಳ ನೀಡಿದ್ದೇ ಈ ಆತ್ಮಹತ್ಯೆಗೆ ಕಾರಣವಾಗಿದೆ ಎಂದು ಮೃತರ ಕುಟುಂಬಸ್ಥರ ಗಂಭೀರ ಆರೋಪ ರಾಜಪ್ಪ ಅವರು ಆರೋಗ್ಯ ಸಮಸ್ಯೆ, ವಯಸ್ಸಿನ ಅಡಚಣೆಗಳನ್ನು ಹೇಳಿಕೊಂಡರೂ ಅಧಿಕಾರಿಗಳು ಯಾವುದೇ ರೀತಿಯ ಸಹಾನುಭೂತಿ ತೋರಲಿಲ್ಲವಂತೆ, "ನಮ್ಮ ತಂದೆ ನಿರಂತರ ಒತ್ತಡ ಮತ್ತು ಕಿರುಕುಳಕ್ಕೆ ತುತ್ತಾಗಿದ್ದರು. ಅವರಿಗೆ ನ್ಯಾಯ ಸಿಗಬೇಕು. ಮ್ಯಾನೇಜರ್ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು" ಎಂದು ಕುಟುಂಬದವರು ಆಗ್ರಹಿಸಿದ್ದಾರೆ.

**ರಜೆ ನಿರಾಕರಣೆ, ನಿರಂತರ ಒತ್ತಡ**

ಮೃತರ ಸಂಬಂಧಿಕರು ಹಾಗೂ ಸಹೋದ್ಯೋಗಿಗಳ ಪ್ರಕಾರ, ರಾಜಪ್ಪ ಅವರಿಗೆ ಬೇಕಾದಾಗ ರಜೆ ನೀಡಲಾಗುತ್ತಿರಲಿಲ್ಲ. ಆರೋಗ್ಯ ಸಮಸ್ಯೆಯಿಂದಾಗಿ ವಿಶ್ರಾಂತಿ ಅಗತ್ಯವಿದ್ದರೂ, ಅಧಿಕಾರಿಗಳು ಅವರನ್ನು ಪ್ರತಿದಿನವೂ ಬಸ್ಸು ಓಡಿಸಲು ಒತ್ತಾಯಿಸುತ್ತಿದ್ದರು. ಬಳ್ಳಾರಿ ವರೆಗಿನ ದೂರದ ಮಾರ್ಗದಲ್ಲಿ ಸಾಮಾನ್ಯವಾಗಿ ಇಬ್ಬರು ಚಾಲಕರ ಅವಶ್ಯಕತೆ ಇದ್ದರೂ, ರಾಜಪ್ಪ ಒಬ್ಬರೇ ನಿರಂತರವಾಗಿ ಡ್ರೈವಿಂಗ್ ಮಾಡುತ್ತಿದ್ದರು. ಇದು ಅವರ ದೈಹಿಕ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರಿತ್ತು ಎಂದು ಸಹೋದ್ಯೋಗಿಗಳು ತಿಳಿಸಿದರು.

**ಗಾಯಗೊಂಡಿದ್ದರೂ ಕೆಲಸಕ್ಕೆ ಒತ್ತಡ**

ಇತ್ತೀಚೆಗೆ ರಾಜಪ್ಪ ಅವರಿಗೆ ಅಪಘಾತದಲ್ಲಿ ಕಾಲಿಗೆ ಗಾಯವಾಗಿತ್ತು. ಅವರು "ಡ್ರೈವಿಂಗ್ ಮಾಡಲು ಆಗುತ್ತಿಲ್ಲ, ಬದಲಿಗೆ ಆಫೀಸ್ ಕೆಲಸ ಕೊಡಿ" ಎಂದು ವಿನಂತಿಸಿಕೊಂಡರೂ, ಮ್ಯಾನೇಜರ್‌ಗಳು ಗಮನ ನೀಡಲಿಲ್ಲ ಎಂದು ತಿಳಿದುಬಂದಿದೆ. ಕಾಲಿಗೆ ಗಾಯವಾಗಿದ್ದರೂ ಕೆಲಸಕ್ಕೆ ಬರುವಂತೆ ಒತ್ತಡ ಹಾಕಿದ್ದರಿಂದ ರಾಜಪ್ಪ ಮಾನಸಿಕವಾಗಿ ಹತಾಶರಾಗಿದ್ದರು.

ಈ ಘಟನೆಯ ಹಿನ್ನೆಲೆಯಲ್ಲಿ, ಕುಟುಂಬಸ್ಥರು ಮತ್ತು ಸಂಬಂಧಿಕರು ಡಿಪೋ ಮ್ಯಾನೇಜರ್ ವಿರುದ್ಧ ಕಠಿಣ ಕ್ರಮ ಕೈಗೊಳ್ಳುವಂತೆ ಸಾರಿಗೆ ಇಲಾಖೆಗೂ, ಪೊಲೀಸರಿಗೂ ಆಗ್ರಹಿಸಿದ್ದಾರೆ. ಅಧಿಕಾರಿಗಳ ನಿರ್ಲಕ್ಷ್ಯ ಮತ್ತು ಕಿರುಕುಳದಿಂದ ಒಬ್ಬ ನಿಷ್ಠಾವಂತ ಚಾಲಕ ತನ್ನ ಪ್ರಾಣ ಕಳೆದುಕೊಳ್ಳಬೇಕಾಯಿತು ಎಂಬ ಆಕ್ರೋಶ ಸಾರಿಗೆ ನೌಕರರ ನಡುವೆ ಹೆಚ್ಚುತ್ತಿದೆ.

# ನನ್ನ ಜೀವನವನ್ನು ಸಮಾಜ ಕಲ್ಯಾಣಕ್ಕಾಗಿ ಮುಡುಪಾಗಿಡುತ್ತೇನೆ: ಭಕ್ತರಿಗೆ ಚಿ. ದೊಡ್ಡಪ್ಪ ಅಪ್ಪಾಜಿ ಭರವಸೆ




ಕಲಬುರಗಿ:ಅ.28:ನಮ್ಮ ಸಂಸ್ಥೆಯಲ್ಲಿ ಶಿಕ್ಷಣ ಪಡೆದ ವಿದ್ಯಾರ್ಥಿಗಳಿಂದು ರಾಷ್ಟ್ರೀಯ ಹಾಗೂ ಅಂತರಾಷ್ಟ್ರೀಯ ಮಟ್ಟದಲ್ಲಿ ಬೆಳೆದಿದ್ದಾರೆ. ನಿಮ್ಮೆಲ್ಲರ ಪ್ರೀತಿ ವಿಶ್ವಾಸಗಳಿಂದ ನನ್ನನ್ನು ನಿಮ್ಮ ಮನೆಯ ಮಗನೆಂದು ತಿಳಿದು ಅಪ್ಪಾಜಿಯವರು ಹಾಕಿಕೊಟ್ಟ ಮಾರ್ಗದರ್ಶನದಲ್ಲಿ ದಾಸೋಹ ಪರಂಪರೆಯನ್ನು ಮುಂದುವರೆಸಿಕೊಂಡು ನನ್ನ ಜೀವನವನ್ನು ಸಮಾಜ ಕಲ್ಯಾಣಕ್ಕಾಗಿ ಮುಡಿಪಾಗಿಡುತ್ತೇನೆಂದು ಶರಣಬಸವೇಶ್ವರ ಸಂಸ್ಥಾನದ 9ನೇ ಪೀಠಾಧಿಪತಿ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ ಭಕ್ತಾದಿಗಳಿಗೆ ಭರವಸೆ ನೀಡಿದರು.

ಶರಣಬಸವೇಶ್ವರ ದೇವಾಲಯದ ಆವರಣದಲ್ಲಿರುವ ಅನುಭವ ಮಂಟಪದಲ್ಲಿ ಗುರುವಾರದಂದು ಏರ್ಪಡಿಸಿದ್ದ ಲಿಂಗೈಕ್ಯ ಪರಮಪೂಜ್ಯ ಡಾ. ಶರಣಬಸವಪ್ಪ ಅಪ್ಪಾ ಅವರ ಸನ್ನಿಧಿಗೆ ನುಡಿ ಪುಷ್ಪಾಂಜಲಿ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು. ಲಿಂಗೈಕ್ಯ ಪೂಜ್ಯ ಶರಣಬಸವಪ್ಪ ಅಪ್ಪಾಜಿಯವರು ಶಿಕ್ಷಣ ಕ್ಷೇತ್ರಕ್ಕೆ ಅಪಾರ ಕೊಡುಗೆ ನೀಡಿದ್ದಾರೆ. ಮಹಿಳಾ ಸಬಲೀಕರಣಕ್ಕೆ ಹೆಚ್ಚಿನ ಮಹತ್ವ ಕೊಟ್ಟಿದ್ದರು. ಸಾವಿರಾರು ವಿದ್ಯಾರ್ಥಿಗಳಿಗೆ ಗುಣಮಟ್ಟದ ಶಿಕ್ಷಣ ನೀಡಿ ಎಲ್ಲರಿಗೂ ಪ್ರೀತಿಯ ಅಪ್ಪಾಜಿಯೆಂದೇ ಚಿರಪರಿಚಿತರೆಂದು ತಿಳಿಸಿದರು.

ಮೊದಲಿಗೆ ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ಹಾಗೂ ಚಿರಂಜೀವಿ ದೊಡ್ಡಪ್ಪ ಅಪ್ಪಾಜಿ, ಅವರ ಸಹೋದರಿಯರ ಜೊತೆ ಸೇರಿಕೊಂಡು ಲಿಂಗೈಕ್ಯ ಪೂಜ್ಯ ಡಾ. ಅಪ್ಪಾಜಿಯವರ ಸಮಾಧಿಗೆ ಪೂಜೆ ಸಲ್ಲಿಸಿದರು. ನಂತರ ನುಡಿ ಪುಷ್ಪಾಂಜಲಿ ಕಾರ್ಯಕ್ರಮದಲ್ಲಿ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರ ಸ್ಮರಣಾರ್ಥ ಎರಡು ನಿಮಿಷಗಳ ಕಾಲ ಮೌನಾಚರಣೆ ಮಾಡಲಾಯಿತು.

ಕಾರ್ಯಕ್ರಮದಲ್ಲಿ ಆಂಧ್ರಪ್ರದೇಶದ ಶ್ರೀಶೈಲಂನ ಸಾರಂಗಮಠದ ಪೂಜ್ಯ ಸಾರಂಗಧರ ದೇಶಿಕೇಂದ್ರ ಮಹಾಸ್ವಾಮಿಗಳು ಮಾತನಾಡಿ ಲಿಂಗೈಕ್ಯ ಪೂಜ್ಯ ಡಾ. ಅಪ್ಪಾಜಿಯವರು ಎಂದಿಗೂ ಹೋಮ ಹವನ ಮಾಡದೆ ಇಷ್ಟಲಿಂಗ ಪೂಜೆ ಮಾಡಿ ತ್ರಿವಿಧ ದಾಸೋಹಿಗಳಾಗಿ ಬಸವತತ್ವಪಾಲನೆ ಮಾಡುತ್ತಿದ್ದರು. ದೆಹಲಿಯಲ್ಲಿ ಸಂಸತ್ತಿನ 9ನೇ ಮಹಾದ್ವಾರದಲ್ಲಿ ಮಹಾತ್ಮ ಬಸವೇಶ್ವರರ ಪುತ್ಥಳಿಯನ್ನು ಸ್ಥಾಪನೆ ಮಾಡಿದ್ದು ಅಪ್ಪಾಜಿಯವರ ಒಂದು ಮಹಾ ಸಾಧನೆ ಎಂದರು. ಇದೇ ಸಮಯದಲ್ಲಿ ಬೆಳಗುಂಪಾದ ಪೂಜ್ಯ ಅಭಿನವ ಪರ್ವತೇಶ್ವರ ಸ್ವಾಮೀಜಿಗಳು ಮಾತನಾಡುತ್ತಾ ಲಿಂಗೈಕ್ಯ ದೊಡ್ಡಪ್ಪ ಅಪ್ಪಾಜಿಯವರು ಅಂದು ಅನ್ನದಾಸೋಹ ಮಾಡಿ ಶಿಕ್ಷಣದಾಸೋಹಕ್ಕೆ ಚಾಲನೆ ನೀಡಿದ್ದರು. ಅದನ್ನು ಪೂಜ್ಯ ಡಾ. ಅಪ್ಪಾಜಿಯವರು ಮುಂದುವರೆಸಿಕೊಂಡು ಅನ್ನದಾಸೋಹದ ಜತೆಗೆ ಶಿಕ್ಷಣಕ್ಕೆ ಮಹತ್ವ ಕೊಟ್ಟು ಇಂದು ವಿಶ್ವವಿದ್ಯಾಲಯದ ಮಟ್ಟಕ್ಕೆ ಬೆಳೆಸಿದ್ದಾರೆ. ಚಿರಂಜೀವಿ ಅಪ್ಪಾಜಿಯವರಿಗೆ ನೋಡಿದರೆ ಲಿಂಗೈಕ್ಯ ದೊಡ್ಡಪ್ಪ ಅಪ್ಪಾಜಿಯವರ ಪ್ರತಿರೂಪದಂತೆ ಕಾಣಿಸುತ್ತಾರೆ. 8ನೇ ವರ್ಷಕ್ಕೆ 80ವರ್ಷದಂತಹ ಗುಣಗಳನ್ನು ಮೈಗೂಡಿಸಿಕೊಂಡಿದ್ದಾರೆ ಎಂದು ಹೇಳಿದರು.

ಚೌಡಾಪುರಿ ಹಿರೇಮಠದ ಡಾ. ರಾಜಶೇಖರ ಶಿವಾಚಾರ್ಯರು, ನುಡಿ ಪುಷ್ಪಾಂಜಲಿ ಸಲ್ಲಿಸುತ್ತಾ ಪೂಜ್ಯ ಡಾ. ಅಪ್ಪಾಜಿಯವರು ದೂರದೃಷ್ಟಿಉಳ್ಳವರಾಗಿದ್ದರು ಅವರಲ್ಲಿ ಯಾವುದೇ ಅಹಂಭಾವವಿರಲಿಲ್ಲ, ದೀನರಿಗೆ ದಲಿತರಿಗೆ ಬಡವರಿಗೆ ಶಿಕ್ಷಣ ದಾಸೋಹ ಗೈಯ್ಯುತ್ತಿದ್ದರು. ಅವರಿಗೆ ಆರೋಗ್ಯದ ಬಗ್ಗೆ ಬಹಳ ಕಾಳಜಿಯಿತ್ತು. ಆಯುರ್ವೇದ ತಿಳಿವುಳ್ಳವರಾಗಿದ್ದರು. ಚಿರಂಜೀವಿ ದೊಡ್ಡಪ್ಪ ಅಪ್ಪಾಜಿಯವರಿಗೆ ನೋಡಿದರೆ ಶರಣರೇ ಭೂಮಿಗೆ ಬಂದ ಅನುಭವವಾಗುತ್ತದೆ ಎಂದರು.

ಪೂಜ್ಯ ಡಾ. ಅಪ್ಪಾಜಿಯವರ ಮಕ್ಕಳಾದ ಕು. ಶಿವಾನಿ ಎಸ್. ಅಪ್ಪ, ಕು. ಭವಾನಿ ಎಸ್. ಅಪ್ಪ ಹಾಗೂ ಕು. ಮಹೇಶ್ವರಿ ಎಸ್. ಅಪ್ಪ "ಅಪ್ಪಾ ಐ ಲವ್ ಯು ಪಾ" ಎಂಬ ಹಾಡನ್ನು ಸುಶ್ರಾವ್ಯವಾಗಿ ಹಾಡುವಾಗ ಎಲ್ಲರ ಕಣ್ಣಂಚಿನಲ್ಲಿ ನೀರು ಚಿಗುರೊಡೆದಿತ್ತು. ತದನಂತರ ಎಲ್ಲರೂ ಸೇರಿ ತಮ್ಮ ತಂದೆ ಪೂಜ್ಯ ಡಾ. ಅಪ್ಪಾಜಿಯವರಿಗೆ ನುಡಿ ಪುಷ್ಪಾಂಜಲಿ ಸಲ್ಲಿಸಿದರು.

ಮಾತೋಶ್ರೀ ಪೂಜ್ಯ ಡಾ. ದಾಕ್ಷಾಯಿಣಿ ಅವ್ವಾಜಿ ತಮ್ಮ ಅಶೀರ್ವಚನದಲ್ಲಿ ಮಾತನಾಡಿ, ಪೂಜ್ಯ ಡಾ. ಅಪ್ಪಾಜಿಯವರು ನನ್ನ ಕಾಯಕ, ನನ್ನ ಕರ್ತವ್ಯ, ನನ್ನ ಉಸಿರಿನಲ್ಲಿ ಇನ್ನೂ ಜೀವಂತವಾಗಿದ್ದಾರೆ. ಬಡವರಿಗೆ ಶಿಕ್ಷಣ ದೊರೆಯಬೇಕೆಂಬುವುದು ಅವರ ಮಹಾದಾಸೆಯಾಗಿತ್ತು. ಇಂದು ಕೆಜಿಯಿಂದ ಪಿಜಿವರೆಗೆ ಶಿಕ್ಷಣವನ್ನು ವಿಸ್ತರಿಸಿದ್ದಾರೆ. ಅಂದು 30 ವಿದ್ಯಾರ್ಥಿಗಳಿಂದ ಆರಂಭವಾದ ಈ ಸಂಸ್ಥೆ ಇಂದು 35 ಸಾವಿರಕ್ಕಿಂತಲೂ ಹೆಚ್ಚು ವಿದ್ಯಾರ್ಥಿಗಳನ್ನು ಹೊಂದಿದೆ. ಅಪ್ಪಾಜಿಯವರ ಆರೋಗ್ಯದಲ್ಲಿ ಏರುಪೇರಾದಾಗ ಬೆಂಗಳೂರಿನಲ್ಲಿ ಅವರ ವಿದ್ಯಾರ್ಥಿಗಳೇ ಅವರಿಗೆ ಚಿಕಿತ್ಸೆ ಕೊಟ್ಟಿದ್ದರೆಂದು ನೆನಪಿಸಿಕೊಂಡರು.

ಪೂಜ್ಯ ಡಾ. ಅಪ್ಪಾಜಿಯವರು ಲೋಕ ಕಲ್ಯಾಣ ಮಾಡಿ ದೇಶಕ್ಕೆ ಮಾದರಿಯಾಗಿದ್ದಾರೆ. ಶರಣಬಸವೇಶ್ವರ ವಿದ್ಯಾವರ್ಧಕ ಸಂಘದಡಿಯಲ್ಲಿ ಬರುವ ಎಲ್ಲಾ ಉದ್ಯೋಗಿಗಳು ಶ್ರದ್ಧೆಯಿಂದ ಕೆಲಸ ಮಾಡುತ್ತಿದ್ದಾರೆ. ಹೀಗೆ ತಮ್ಮೆಲ್ಲರ ಸಹಕಾರದಿಂದ ನನ್ನ ಕೊನೆಯ ಉಸಿರು ಇರುವವರೆಗೆ ಪೂಜ್ಯ ಅಪ್ಪಾಜಿಯವರು ಹಾಕಿಕೊಟ್ಟ ಮಾರ್ಗದಲ್ಲಿ ಮುನ್ನುಗುತ್ತೇನೆಂದರು. ಮುಂದಿನ ದಿನಗಳಲ್ಲಿ ತಮ್ಮೆಲ್ಲರ ಬೆಂಬಲವಿರುತ್ತದೆಂದು ಹಾಗೂ ನನ್ನ ಜೊತೆ ಸಂಸ್ಥಾನದ 9ನೇ ಪೀಠಾಧಿಪತಿಗಳಿಗೆ ನಿಮ್ಮ ಪ್ರೀತಿ, ವಿಶ್ವಾಸ ತೋರುವಿರೆಂದು ನಂಬಿದ್ದೇನೆ. ಎಂದೆಂದೂ ನಿಮ್ಮೆಲ್ಲರ ಸಹಕಾರವಿರಲಿ ಎಂದರು.

ಈ ಸಂದರ್ಭದಲ್ಲಿ ಸಚಿವ ಶರಣಪ್ರಕಾಶ ಪಾಟೀಲ ಅವರ ಧರ್ಮಪತ್ನಿ ಭಾಗ್ಯಶ್ರೀ ಪಾಟೀಲ ಮಾತನಾಡಿದರು. ಲಿಂಗೈಕ್ಯ ಪೂಜ್ಯ ಡಾ. ಶರಣಬಸವಪ್ಪ ಅಪ್ಪಾಜಿಯವರಿಗೆ ನುಡಿ ಪುಷ್ಪಾಂಜಲಿ ಸಲ್ಲಿಸಿದವರಲ್ಲಿ ಶರಣಬಸವಪ್ಪ ನಿಷ್ಠಿ, ಶಾಸಕರಾದ ಬಿ. ಆರ್. ಪಾಟೀಲ, ಶಶೀಲ ಜಿ. ನಮೋಶಿ, ಅಲ್ಲಮಪ್ರಭು ಪಾಟೀಲ, ಬಿ. ಜಿ. ಪಾಟೀಲ, ಮಾರುತಿರಾವ್ ಮೂಳೆ, ಮಾಜಿ ಸಂಸದರಾದ ಬಸವರಾಜ ಪಾಟೀಲ ಸೇಡಂ, ಡಾ. ಉಮೇಶ ಜಾಧವ, ಮಾಜಿ ಶಾಸಕರಾದ ದತ್ತಾತ್ರೇಯ ಪಾಟೀಲ ರೇವೂರ, ದೊಡ್ಡಪ್ಪಗೌಡ ಪಾಟೀಲ ನರಿಬೋಳ ಪ್ರಮುಖರು.

ಶರಣಬಸವೇಶ್ವರ ವಿದ್ಯಾವರ್ಧಕ ಸಂಘದ ಕಾರ್ಯದರ್ಶಿ ಶ್ರೀ ಬಸವರಾಜ ದೇಶಮುಖ, ಬಸವರಾಜ ಭೀಮಳ್ಳಿ, ಡಾ. ಭೀಮಾಶಂಕರ ಬಿಲಗುಂದಿ, ಶಾಸಕ ಬಸವರಾಜ ಮತ್ತಿಮೂಡ, ರಾಜು ಭೀಮಳ್ಳಿ, ಶಿವಶರಣಪ್ಪ ವಾಲಿ, ಶಾಸಕ ಎಮ್. ವಾಯ್. ಪಾಟೀಲ, ಅಪ್ಪಾರಾವ್ ಅಕ್ಕೋಣಿ, ಲಕ್ಷ್ಮಣ ದಸ್ತಿ, ಅರುಣಕುಮಾರ ಪಾಟೀಲ, ಎಸ್. ಎಮ್. ಹಿರೇಮಠ, ಶರಣಪ್ಪ ಹಲ್ಸೆ, ಶರಣಬಸವ ವಿಶ್ವವಿದ್ಯಾಲಯದ ಉಪಕುಲಪತಿ ಡಾ. ಅನಿಲಕುಮಾರ ಬಿಡವೆ, ನಿರ್ದೇಶಕ ಪ್ರೊ. ವಿ. ಡಿ. ಮೈತ್ರಿ, ಡೀನ್ ಡಾ. ಲಕ್ಷ್ಮೀ ಪಾಟೀಲ ಮಾಕಾ ಸಂಘದ ಎಲ್ಲಾ ಶಾಲಾ ಕಾಲೇಜುಗಳ ಪ್ರಾಂಶುಪಾಲರು ವಿವಿಯ ಡೀನರು, ಮುಖ್ಯಸ್ಥರು, ಪ್ರಾಧ್ಯಾಪಕರು ಸೇರಿದಂತೆ ಇತರ ಪ್ರಮುಖರು ಕಾರ್ಯಕ್ರಮದಲ್ಲಿ ಉಪಸ್ಥಿತರಿದ್ದರು. ಕಾರ್ಯಕ್ರಮವನ್ನು ದಯಾನಂದ ಹೊಡಲ್ ನಿರೂಪಿಸಿದರು. ಡಾ. ನೀಲಾಂಬಿಕಾ ಪೋಲಿಸ್ ಪಾಟೀಲ ಸ್ವಾಗತಿಸಿದರು.

# ಮಹಿಳಾ ಸಬಲೀಕರಣಕ್ಕೆ ಗ್ಯಾರಂಟಿ ಯೋಜನೆ ಪೂರಕ:ಸಚಿವ ಖಂಡ್ರೆ




ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ಅ.28:ಸರ್ಕಾರದ ಪಂಚ ಗ್ಯಾರಂಟಿಗಳು ಮಹಿಳಾ ಸಬಲೀಕರಣಕ್ಕೆ ಪೂರಕವಾಗಿವೆ ಎಂದು ಅರಣ್ಯ,ಪರಿಸರ ಮತ್ತು ಜೀವಿಶಾಸ್ತ್ರ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಈಶ್ವರ ಖಂಡ್ರೆ ಹೇಳಿದರು.

> ಸಿದ್ರಾಮಯ್ಯ ನೇತೃತ್ವದ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದು ಜನರ ಆಶೋತ್ತರಗಳಿಗೆ ಸ್ಪಂದಿಸುತ್ತಿದೆ.ನಾನು ಸಚಿವನಾದ ನಂತರ ಭಾಲ್ಕಿ ಸೇರಿದಂತೆ ಬೀದರ ಜಿಲ್ಲೆಯ ಸರ್ವತೋಮುಖ ಬೆಳವಣಿಗೆಗಾಗಿ ಹಗಲಿರಳು ಶ್ರಮಿಸುತ್ತಿದ್ದೇನೆ.ಗುಡಿಸಲು ಮುಕ್ತ ಜಿಲ್ಲೆ ಮಾಡುವುದೆ ನನ್ನ ಗುರಿಯಾಗಿದೆ. ಗ್ಯಾರಂಟಿ ಯೋಜನೆಗಳನ್ನು ಸದುಪಯೋಗಪಡಿಸಿಕೊಂಡು ತಮ್ಮ ಆರ್ಥಿಕ ಪರಿಸ್ಥಿತಿ ಸುಧಾರಿಸಿಕೊಳ್ಳಿ.
> –ಈಶ್ವರ ಖಂಡ್ರೆ ಜಿಲ್ಲಾ ಉಸ್ತುವಾರಿ ಮಂತ್ರಿ ಬೀದರ.

ತಾಲೂಕಿನ ಭಾತಂಬ್ರಾ ಗ್ರಾಮ ಪಂಚಾಯತನಲ್ಲಿ ಹಮ್ಮಿಕೊಂಡ 'ಗ್ಯಾರಂಟಿ ಯೋಜನೆಗಳ ನಡೆ ಗ್ರಾಮ ಪಂಚಾಯತ ಕಡೆ'ಕಾರ್ಯಕ್ರಮದ ಅಧ್ಯಕ್ಷತೆವಹಿಸಿ ಮಾತನಾಡಿದರು.

ಕಾಂಗ್ರೆಸ್ ಸರ್ಕಾರ ಜಾರಿಗೊಳಿಸಿದ ಗೃಹಲಕ್ಷಿ ??,ಶಕ್ತಿ,ಗೃಹಜ್ಯೋತಿ,ಯುವನಿಧಿ,ಅನ್ನಭಾಗ್ಯ ಪಂಚ ಗ್ಯಾರಂಟಿ ಯೋಜನೆಗಳನ್ನು ವಿರೋಧ ಪಕ್ಷದವರು ವಿರೋಧಿಸುತ್ತಿದ್ದರು. ಆದರೆ ರಾಜ್ಯಾದ್ಯಂತ ಗ್ಯಾರಂಟಿ ಯೋಜನೆಗಳಿಗೆ ಎಲ್ಲ ವರ್ಗದ ಜನರಿಂದ ಉತ್ತಮ ಪ್ರತಿಕ್ರಿಯೆ ದೊರೆತ ನಂತರ ವಿರೋಧಿಗಳಿಗೆ ಮುಖಭಂಗವಾಯಿತು.ಗೃಹಲಕ್ಷಿ ?? ಯೋಜನೆಯಡಿ ಭಾಲ್ಕಿ ತಾಲುಕಿನ 66 ಸಾವಿರ ಮಹಿಳೆಯರಿಗೆ 11.62 ಸಾವಿರ ಕೋ.ರೂ.ಪ್ರತಿ ಮಾಹೆ ವಿತರಿಸಲಾಗುತ್ತಿದೆ.ಸೂರಿಲ್ಲದವರ ಪಟ್ಟಿ ಸಿದ್ಧಪಡಿಸಲು ಈಗಾಗಲೇ ಅಧಿಕಾರಿಗಳಿಗೆ ಸೂಚಿಸಲಾಗಿದೆ.ರಭಸದ ಮಳೆಯಿಂದ ಹಾನಿಗೊಳಗಾದ ಬೆಳೆ ಹಾನಿ,ಪ್ರಾಣಿ ಹಾನಿ,ಮನೆ ಹಾನಿ ತುರ್ತಾಗಿ ಸಮೀಕ್ಷೆ ನಡೆಸಿ ವರದಿ ಸಲ್ಲಿಸಲು ತಿಳಿಸಲಾಗಿದೆ. ಯಾರೂ ಆತಂಕ ಪಡುವ ಅಗತ್ಯವಿಲ್ಲ.ಸರ್ಕಾರ ಸದಾ ನಿಮ್ಮ ಸಮಸ್ಯೆಗಳಿಗೆ ಪರಿಹಾರ ಒದಗಿಸಲು ಸಿದ್ಧವಿದೆ ಎಂದರು.

ಈ ಸಂದರ್ಭದಲ್ಲಿ ಗ್ಯಾರಂಟಿ ಯೋಜನೆ ಅನುಷ್ಠಾನ ಸಮಿತಿ ಅಧ್ಯಕ್ಷ ಹಣಮಂತರಾವ ಚವ್ಹಾಣ,ತಹಸೀಲ್ದಾರ ಮಲ್ಲಿಕಾರ್ಜುನ ವಡ್ಡನಕೇರಿ ತಾಪಂ ಇಓ ಸುರ್ಯಕಾಂತ ಬಿರಾದಾರ,ಗ್ರಾಮಪಂಚಾಯತ ಅಧ್ಯಕ್ಷ ಮಹಾಂತೇಶ ಪಾಟೀಲ,ಉಪಾಧ್ಯಕ್ಷ ಗೋದಾವರಿ ಬೀರಗೆ,ಕೆಡಿಪಿ ಸದಸ್ಯ ಶಂಕರರಾವ ಬೋರಾಳೆ,ಪಿಡಬ್ಲುಡಿ ಎಇಇ ಅಲ್ತಾಫ್,ಡಿಎಸ್ಪಿ ಶಿವಾನಂದ ಪವಾಡಶೆಟ್ಟಿ, ಸಿಪಿಐ ಹಣಮರೆಡ್ಡಿ,ಪ್ರಮುಖರಾದ ಕಾಶಿನಾಥ ಲದ್ದೆ,ಮಹಾದೇವ ಬೆಲೂರೆ,ಮುಸ್ತಾಕ್, ಡಿಪೋ ವ್ಯವಸ್ಥಾಪಕ ವೀರಭದ್ರಪ್ಪ,ಜೆಸ್ಕಾಂ ಎಇಇ ಶಿವರಾಜ ಹಲಬುರ್ಗೆ,ಪಿಆರ್‌ಇ ಎಇಇ ಕೆರೂರೆ,ಪಿಡಿಓ ಬಲಭೀಮ ಪವಾರ,ಸಿಡಿಪಿಓ ಮಹಮ್ಮದ ಅಬ್ದುಲ ಖಲೀಲ ಸೇರಿದಂತೆ ತಾಲೂಕು ಅಧಿಕಾರಿಗಳು ,ಗ್ರಾಪಂ ಸದಸ್ಯರು ಹಾಜರಿದ್ದರು.

# ಕಮಲನಗರ:ಚೋಂಡಿ ಮುಖೇಡ ಗ್ರಾಮಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಭೇಟಿ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಅ.28:ತಾಲೂಕಿನಲ್ಲಿ ಕಳೆದ ಎರಡು ದಿನಗಳಿಂದ ಧಾರಾಕಾರವಾಗಿ ಸುರಿಯುತ್ತಿರುವ ಮಳೆಯಿಂದಾಗಿ ತಾಲೂಕಿನ ಚಿಕ್ಲಿ(ಯು) ಗ್ರಾಮ ಪಂಚಾಯತ ವ್ಯಾಪ್ತಿಯ ಚೋಂಡಿ ಮುಖೇಡ ಗ್ರಾಮಕ್ಕೆ ಜಿಲ್ಲಾಧಿಕಾರಿ ಶಿಲ್ಪಾ ಶರ್ಮಾ ಅವರು ಪ್ರವಾಹ ಪೀಡಿತ ಪ್ರದೇಶಗಳಿಗೆ ಭೇಟಿ ನೀಡಿ ಪರಿಸ್ಥಿತಿಯನ್ನು ಪರಿಶೀಲಿಸಿದರು.

ಗ್ರಾಮದಲ್ಲಿ ರಸ್ತೆ ಸಂಪರ್ಕ ಕಡಿತಗೊಂಡು ಜನಜೀವನ ಅಸ್ತವ್ಯಸ್ತಗೊಂಡಿದೆ. ಅಪಾಯವಿರುವ ಸ್ಥಳಗಳಿಗೆ ಜನ, ಜಾನುವಾರಗಳು ಹೋಗಬಾರದು ಎಂದು ಹೇಳಿದರು.ಈ ಸಂದರ್ಭದಲ್ಲಿ ಎ.ಸಿ ಮಹಮ್ಮದ್ ಶಕೀಲ್, ಪ್ರೊಬೇಷನರಿ ಐ.ಎ.ಎಸ್ ಅಧಿಕಾರಿ ರಮ್ಯಾ , ತಾ.ಪಂ.ನ ಕಾರ್ಯನಿರ್ವಾಹಕ ಅಧಿಕಾರಿ ಹಣಮಂತರಾಯ ಕೌಟಗೆ, ತಹಶೀಲ್ದಾರ್ ಅಮೀತಕುಮಾರ ಕುಲಕರ್ಣಿ ಸೇರಿದಂತೆ ಗ್ರಾ.ಪಂ. ಸಿಬ್ಬಂದಿಗಳು ಹಾಗೂ ಗ್ರಾಮಸ್ಥರು ಹಾಜರಿದ್ದರು.

# ನಾಳೆ ಪಿಡಿಎ ಕಾಲೇಜಿನ 13ನೇ ಪದವಿ ಪ್ರದಾನ ಸಮಾರಂಭ




ಕಲಬುರಗಿ ಆ.28: ಪೂಜ್ಯ ದೊಡ್ಡಪ್ಪ ಅಪ್ಪ ಎಂಜಿನಿಯರಿಂಗ್ ಕಾಲೇಜಿನ 13ನೇ ಪದವಿ ಪ್ರದಾನ ಸಮಾರಂಭವು ಆ.30ರಂದು ಶನಿವಾರ ಬೆಳಿಗ್ಗೆ 10 ಗಂಟೆಗೆ ಪಿಡಿಎ ಎಂಜಿನಿಯರಿಂಗ್ ಕಾಲೇಜಿನ ವಿದ್ಯಾರ್ಥಿ ಚಟುವಟಿಕೆ ಕೇಂದ್ರದ ಸಭಾಂಗಣದಲ್ಲಿ ಜರುಗಲಿದೆ ಎಂದು ಹೈದ್ರಾಬಾದ್ ಕರ್ನಾಟಕ ಶಿಕ್ಷಣ ಸಂಸ್ಥೆಯ ಅಧ್ಯಕ್ಷ ಹಾಗೂ ರಾಜ್ಯ ವಿಧಾನ ಪರಿಷತ್ ಸದಸ್ಯ ಶಶೀಲ್ ಜಿ. ನಮೋಶಿ ಅವರು ಹೇಳಿದರು.ಗುರುವಾರ ಕಾಲೇಜಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಪಶ್ಚಿಮ ಬಂಗಾಳದ ಹೌರಾದ ಶಿಬ್ಪುರದಲ್ಲಿರುವ ಐಐಇಎಸ್ಟಿಯ ನಿರ್ದೇಶಕ ಪ್ರೊ. ವಿ.ಎಂ.ಎಸ್. ಆರ್. ಮೂರ್ತಿ ಅವರು ಮುಖ್ಯ ಅತಿಥಿಯಾಗಿ ಭಾಗವಹಿಸಲು ಒಪ್ಪಿಗೆ ನೀಡಿದ್ದಾರೆ. ಪ್ರೊ. ಮೂರ್ತಿ ಅವರು ಗಣಿಗಾರಿಕೆ ಎಂಜಿನಿಯರ್ ಆಗಿದ್ದಾರೆ. ನಾಗ್ಪುರದಲ್ಲಿ 8 ವರ್ಷಗಳ ಕಾಲ ವಿಜ್ಞಾನಿಯಾಗಿ ಕೆಲಸ ಮಾಡಿದ್ದಾರೆ. ಡೈಮಂಡ್ ವೈರ್ ತಂತ್ರಜ್ಞಾನ ಬಳಸಿ ಡೈಮೆನ್ಷನ್ ಸ್ಟೋನ್ ಕಟಿಂಗ್" ಕುರಿತು ಇಂಡೋ–ಇಟಲಿ ಆಖಿಖಿ ಅನುದಾನಿತ ಯೋಜನೆಯನ್ನು ಪೂರ್ಣಗೊಳಿಸಿದ್ದಾರೆ,14ಯೋಜನೆಗಳನ್ನು ಸಹ ಪೂರ್ಣಗೊಳಿಸಿದ್ದಾರೆ ಮತ್ತು 226 ಸಂಶೋಧನಾ ಪ್ರಬಂಧಗಳನ್ನು ಪ್ರಕಟಿಸಿದ್ದಾರೆ. ಅವರು ಐಐಟಿ ಧನ್ಬಾದ್ನಲ್ಲಿ ಅತ್ಯಾಧುನಿಕ ಬಂಡೆ ಉತ್ಖನನ ಪ್ರಯೋಗಾಲಯವನ್ನು ಸ್ಥಾಪಿಸಿದ್ದಾರೆ. ಅವರಿಗೆ ಭಾರತ ಸರ್ಕಾರದ ಗಣಿ ಸಚಿವಾಲಯದಿಂದ ರಾಷ್ಟ್ರೀಯ ಭೂವಿಜ್ಞಾನ ಪ್ರಶಸ್ತಿ 2019 ನೀಡಲಾಯಿತು ಎಂದರು.

ಹೈದ್ರಾಬಾದ್‌ನ ಫ್ಯಾಬ್ರಿಕ್ಸ್.ಐನ ಸಹ–ಸಂಸ್ಥಾಪಕ ಮತ್ತು ಪಿಡಿಎಸಿಇಕೆ (1989 ಬ್ಯಾಚ್)ನ ಹೆಮ್ಮೆಯ ಹಳೆಯ ವಿದ್ಯಾರ್ಥಿ ಸತ್ಯನ್ ರಾಜು ದಟ್ಲಾ ಈ ಸಂದರ್ಭದ ಗೌರವ ಅತಿಥಿಯಾಗಿ ಭಾಗವಹಿಸಲಿದ್ದಾರೆ. ಸೊಸೈಟಿಯ ಉಪಾಧ್ಯಕ್ಷರು,ಕಾರ್ಯದರ್ಶಿ,ಜಂಟಿ ಕಾರ್ಯದರ್ಶಿ,ಕಾಲೇಜು ಆಡಳಿತ ಮಂಡಳಿ,ಆಡಳಿತ ಮಂಡಳಿ ಸದಸ್ಯರು ಮತ್ತು ಪಿಡಿಎ ಎಂಜಿನಿಯರಿಂಗ್ ಕಾಲೇಜಿನ ಶೈಕ್ಷಣಿಕ ಮಂಡಳಿ ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಎಂದು ಅವರು ಹೇಳಿದರು.

13ನೇ ಪದವಿ ಪ್ರದಾನ ಸಮಾರಂಭದಲ್ಲಿ, ಒಟ್ಟು 684 ವಿದ್ಯಾರ್ಥಿಗಳು ಪದವಿ ಪಡೆದು ಕಾರ್ಯಕ್ರಮದಲ್ಲಿ ಭಾಗವಹಿಸಲಿದ್ದಾರೆ ಮತ್ತು ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದಿಂದ ನೀಡಲಾಗುವ ಪದವಿಯನ್ನು ಪಡೆಯಲಿದ್ದಾರೆ. ಈ ವರ್ಷ ಒಟ್ಟು 37 ಚಿನ್ನದ ಪದಕಗಳನ್ನು 22 ವಿದ್ಯಾರ್ಥಿಗಳು ಹಂಚಿಕೊಂಡಿದ್ದಾರೆ, ಕಂಪ್ಯೂಟರ್ ವಿಜ್ಞಾನ ಮತ್ತು ಎಂಜಿನಿಯರಿಂಗ್ ವಿಭಾಗದ ಎ. ಅಂಕಿತಾ ಜೋಶಿ ಅತಿ ಹೆಚ್ಚು 7 ಚಿನ್ನದ ಪದಕಗಳನ್ನು ಗೆದ್ದಿದ್ದಾರೆ, ನಂತರ ಎಲೆಕ್ಟ್ರಿಕಲ್ ಮತ್ತು ಎಲೆಕ್ಟ್ರಾನಿಕ್ಸ್ ಎಂಜಿನಿಯರಿಂಗ್ ವಿಭಾಗದ ಎ. ಪಲ್ಲವಿ ದೇಶಪಾಂಡೆ 6 ಚಿನ್ನದ ಪದಕಗಳನ್ನು ಗೆದ್ದಿದ್ದಾರೆ ಎಂದು ಅವರು ತಿಳಿಸಿದರು.ಅದೇ ರೀತಿ ಎ.ಸ್ಫೂರ್ತಿ ಎಸ್. ಗುಬ್ಬೇವಾಡ್ 3 ಚಿನ್ನದ ಪದಕಗಳನ್ನು,ಎಲೆಕ್ಟ್ರಾನಿಕ್ಸ್ ಮತ್ತು ಸಂವಹನ ಎಂಜಿನಿಯರಿಂಗ್ನ ನಿಕಿತಾ ಯು. ಪಾಟೀಲ್ ಮತ್ತು ಮೆಕ್ಯಾನಿಕಲ್ ವಿಭಾಗದ ಮೊಹಮ್ಮದ್ ಶೋಯೆಬ್ ತಲಾ 2 ಚಿನ್ನದ ಪದಕಗಳನ್ನು ಪಡೆದಿದ್ದಾರೆ. ಕಾಲೇಜು ಉದ್ಯೋಗದಲ್ಲಿ ಅಗಾಧ ಸುಧಾರಣೆಯನ್ನು ಕಂಡಿದ್ದು, ಸುಮಾರು 341 ವಿದ್ಯಾರ್ಥಿಗಳು ವಿವಿಧ ಪ್ರತಿಷ್ಠಿತ ಕಂಪೆನಿಗಳಲ್ಲಿ ಉದ್ಯೋಗ ಪಡೆದಿದ್ದಾರೆ ಎಂದು ಅವರು ಹೇಳಿದರು. ಸುದ್ದಿಗೋಷ್ಠಿಯಲ್ಲಿ ರಾಜಾ ಬಿ. ಭೀಮಳ್ಳಿ, ಉದಯಕುಮಾರ್ ಎಸ್. ಚಿಂಚೋಳಿ, ಡಾ. ಕೈಲಾಶ್ ಬಿ. ಪಾಟೀಲ್, ಅರುಣಕುಮಾರ್ ಎಂ. ಪಾಟೀಲ್, ಡಾ. ರಜನೀಶ್ ವಾಲಿ, ಡಾ. ಎಸ್.ಆರ್. ಹರವಾಳ್, ಡಾ. ಅನಿಲಕುಮಾರ್ ಬಿ. ಪಟ್ಟಣ, ಡಾ. ಎಸ್.ಆರ್. ಪಾಟೀಲ್, ಡಾ. ಎಸ್.ಆರ್. ಹೊಟ್ಟಿ, ಡಾ. ಭಾರತಿ ಹರಸೂರ್, ಡಾ. ಶ್ರೀದೇವಿ ಸೋಮ, ಡಾ. ಪದ್ಮಪ್ರಿಯಾ ಪಾಟೀಲ್, ಡಾ. ಬಾಬುರಾವ್ ಶೇರಿಕಾರ್ ಮುಂತಾದವರು ಉಪಸ್ಥಿತರಿದ್ದರು.

# ಅಮೇರಿಕದೊಂದಿಗಿನ ಸುಂಕ ಭಿನ್ನಾಭಿಪ್ರಾಯ ಪರಿಹಾರಕ್ಕೆ ಪ್ರಯತ್ನ: ಕೇಂದ್ರ

ನವದೆಹಲಿ:ಅ.28: ಟ್ಯಾರಿಫ್ ವಿಚಾರವಾಗಿ ಅಮೇರಿಕದೊಂದಿಗಿನ ಭಿನ್ನಾಭಿಪ್ರಾಯಗಳನ್ನು ಪರಿಹರಿಸಲು ಪ್ರಯತ್ನ ನಡೆಯುತ್ತಿದೆ ಎಂದು ಕೇಂದ್ರ ಸರ್ಕಾರದ ಮೂಲಗಳು ತಿಳಿಸಿವೆ.ಭಾರತವು ರಷ್ಯಾದ ತೈಲ ಖರೀದಿಗೆ ದಂಡವಾಗಿ ಹೆಚ್ಚುವರಿಯಾಗಿ ಶೇ.25ರಷ್ಟು ಸುಂಕವನ್ನು ಬುಧವಾರ ಜಾರಿಗೆ ತಂದಿದೆ. ಭಾರತ ಮತ್ತು ಅಮೇರಿಕ ನಡುವೆ ನಡೆಯುತ್ತಿರುವ ಭಿನ್ನಾಭಿಪ್ರಾಯವನ್ನು ಪರಿಹರಿಸಲು ಪ್ರಯತ್ನಗಳು ನಡೆಯುತ್ತಿವೆ. ಎರಡೂ ದೇಶಗಳ ನಡುವಿನ ದೀರ್ಘಕಾಲೀನ ಸಂಬಂಧದಲ್ಲಿ ಪ್ರಸ್ತುತ ಪರಿಸ್ಥಿತಿ ತಾತ್ಕಾಲಿಕ ಅಷ್ಟೇ ಎಂದು ಕೇಂದ್ರ ಭರವಸೆ ವ್ಯಕ್ತಪಡಿಸಿದೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.